ಬೆಂಗಳೂರು ಸಂಪುಟ: 16 ಸಂಚಿಕೆ: 23 ಪುಟ: 06 ಶುಕ್ರವಾರ 13-12-2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh www.mussanjenews.com

## ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

www.mussanjenews.com

- ಇಂತಿ ಸಂಪಾದಕ

## ಸಾರ್ವಜನಿಕರಿಗೆ ತೊಂದರೆ ಆದರೆ ಸರ್ಕಾರ ಕಣ್ಣುಮುಚ್ಚಿ ಕೂರಲ್ಲ

# ಗುಡುಗಿದ ಸಿಎಂ

## ಪಂಚಮಸಾಲಿ ಸಮುದಾಯದ ವರ್ತನೆ ವಿರುದ್ಧ ಸಿದ್ದರಾಮಯ್ಯ ಅಸಮಾಧಾನ

ವಿಜಯಪುರ: ಕಾನೂನು ಕೈಗೆ ತೆಗೆದುಕೊಂಡು ಸಾರ್ವಜನಿಕರಿಗೆ ತೊಂದರೆಯಾದರೆ ಸರ್ಕಾರ ಕಣ್ಣುಮುಚ್ಚಿಕೊಂಡು ಕೂರಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಜಯಪುರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು,

ಪಂಚಮಸಾಲಿ ಸಮುದಾಯದವರು ಪ್ರವರ್ಗ 2ಎ ಅಡಿಯಲ್ಲಿ ಮೀಸಲಾತಿ ಕಲ್ಪಿಸುವಂತೆ ಕೇಳುವುದಕ್ಕೆ, ಚಳವಳಿ ಮಾಡುವುದಕ್ಕೆ ನಮ್ಮ ತಕರಾರಿಲ್ಲ. ಆದರೆ ಶಾಂತಿಯುತವಾಗಿ ಪ್ರತಿಭಟನೆಯಾಗಬೇಕು. ಕಾನೂನನ್ನು ಯಾರೂ ಕೈಗೆ ತೆಗೆದುಕೊಳ್ಳಬಾರದು ಎಂದು ಮನವಿ ಮಾಡಿದರು.

ಮುಖ್ಯಮಂತ್ರಿಗಳು ಹೃದಯಹೀನರು ಎಂದು ಜಯಮೃತ್ಯುಂಜಯ ಸ್ವಾಮೀಜಿ ಹೇಳಿರುವ ಬಗ್ಗೆ ಮಾತನಾಡಿ ಈ ಬಗ್ಗೆ ಜನರು ತೀರ್ಮಾನ ಮಾಡುತ್ತಾರೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸ್ವಾಮೀಜಿಯಾಗಲಿ, ಯಾರಾದರೂ ಆಗಿರಲಿ. ಎಲ್ಲರಿಗೂ ಕಾನೂನು ಒಂದೇ. ನನಗೂ, ಸ್ವಾಮೀಜಿಗೂ ಎಲ್ಲರಿಗೂ ಒಂದೇ. ಸಂವಿಧಾನದ 14 ನೇ ವಿಧಿಯ ಪ್ರಕಾರ ಕಾನೂನಿನ



ಮುಂದೆ ಎಲ್ಲರೂ ಸಮಾನರು ಹಾಗೂ ಕಾನೂನಿನ ಸಮಾನ ರಕ್ಷಣೆಯನ್ನು ಖಾತ್ರಿಪಡಿಸುತ್ತದೆ ಎಂದರು.

ಪ್ರವರ್ಗ 2ಎ ಅಡಿಯಲ್ಲಿರುವ ಸಮುದಾಯಗಳು ಪಂಚಮಸಾಲಿ ಸಮುದಾಯವನ್ನು 2 ಎ ಗೆ ಸೇರಿಸಲು ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಅವರ ಅಭಿಪ್ರಾಯ ಹೇಳಲು ಅವರಿಗೆ ಸ್ವಾತಂತ್ರ್ಯವಿದೆ. ಸ್ವಾಮೀಜಿಗಳಿಗೂ ಅವರ ಅಭಿಪ್ರಾಯ ತಿಳಿಸಲು ಸ್ವಾತಂತ್ರ್ಯವಿದೆ. ಅಂತಿಮವಾಗಿ ಸಂವಿಧಾನ ಪ್ರಕಾರ ನಡೆದುಕೊಳ್ಳುತ್ತೇವೆ ಎಂದರು. ಪ್ರತಿಭಟನಾಕಾರರು ಕಲ್ಲು ಹೊಡೆದಿರುವ ಫೋಟೋಗಳಿವೆ ಪುಟ 2

## ಆರ್‌ಬಿಐಗೆ ಬಾಂಬ್ ಬೆದರಿಕೆ



ಮುಂಬೈ: ವಾಣಿಜ್ಯ ರಾಜಧಾನಿ ಮುಂಬೈನಲ್ಲಿರುವ ಭಾರತೀಯ ರಿಸರ್ವ್ ಬ್ಯಾಂಕ್(ಆರ್‌ಬಿಐ)ನ ಪ್ರಧಾನ ಕಚೇರಿಗೆ ಬಾಂಬ್ ಬೆದರಿಕೆ ಕರೆ ಬಂದಿದೆ. ಆರ್‌ಬಿಐ ಕಚೇರಿಗೆ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ.


ರಷ್ಯನ್ ಭಾಷೆಯಲ್ಲಿ ಬರೆಯಲಾಗಿರುವ ಬೆದರಿಕೆ ಪತ್ರವನ್ನು ಆರ್‌ಬಿಐನ ಅಧಿಕೃತ ವೆಬ್‌ಸೈಟ್‌ಗೆ ರವಾನಿಸಲಾಗಿದೆ. ಒಂದು ತಿಂಗಳ ಅವಧಿಯಲ್ಲಿ 2ನೇ ಬಾರಿ ಬಾಂಬ್ ಬೆದರಿಕೆ ಸಂದೇಶ ರವಾನೆಯಾಗಿದೆ. ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

ಆರ್‌ಬಿಐ ಕಚೇರಿಗೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಬೆದರಿಕೆಯ ಮೂಲ ವನ್ನು ಪತ್ತೆ ಹಚ್ಚುವ ಕಾರ್ಯದಲ್ಲಿ ನಿರತರಾಗಿದ್ದಾರೆ.

ಆರ್‌ಬಿಐ ಕಟ್ಟಡದ ಸುರಕ್ಷತೆ ಮತ್ತು ಭದ್ರತೆ ಖಾತ್ರಿಪಡಿಸಿಕೊಳ್ಳಲು ಸೂಕ್ತಕ್ರಮ ತೆಗೆದು ಕೊಳ್ಳಲಾಗುತ್ತಿದೆ. ಸ್ಥಳಕ್ಕೆ ದೌಡಾಯಿಸಿರುವ ಬಾಂಬ್ ನಿಷ್ಕ್ರಿಯ ದಳ ಹಾಗೂ ಪೊಲೀಸರು ಶೋಧ ನಡೆಸಿದ್ದು, ಯಾವುದೇ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ. ಮುನ್ನೆಚ್ಚರಿಕೆ ಕ್ರಮವಾಗಿ ಆರ್‌ಬಿಐ ಕಚೇರಿಗೆ ಭದ್ರತೆ ಒದಗಿಸಲಾಗಿದೆ. ಪುಟ 2

## ನಟ 'ಅಲ್ಲು ಅರ್ಜುನ್' ಪೊಲೀಸರ ವಶಕ್ಕೆ


ಹೈದರಾಬಾದ್.: ಥಿಯೇಟರ್ ಬಳಿ ಕಾಲ್ತುಳಿತಕ್ಕೆ ಮಹಿಳೆ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ



ತೆಲುಗು ಖ್ಯಾತ ನಟ ಅಲ್ಲು ಅರ್ಜುನ್ ಅವರನ್ನ ಪೊಲೀಸರು ವಶಕ್ಕೆ ಪಡೆಯಲಾಗಿದ್ದು, ಹೈದರಾಬಾದ್‌ನ ಚಿಕ್ಕಡಪಲ್ಲಿ ಪೊಲೀಸ್ ಠಾಣೆಗೆ ಸ್ಥಳಾಂತರಿಸಲಾಗಿದೆ.ಪುಷ್ಪಾ -2 ಸಿನಿಮಾ ಸಂಭ್ರಮದಲ್ಲಿದ್ದ ಅಲ್ಲು ಅರ್ಜುನ್ ಗೆ ಪೊಲೀಸರು ಶಾಕ್ ನೀಡಿದ್ದಾರೆ. ನಟ ಅಲ್ಲು ಅರ್ಜುನ್ ರನ್ನು ಚಿಕ್ಕಡಪಲ್ಲಿ ಠಾಣಾ ಪೊಲೀಸರು ವಿಚಾರಣೆಗೆ ಕರೆದೊಯ್ದಿದ್ದಾರೆ ಎನ್ನಲಾಗಿದೆ. ಪುಷ್ಪಾ-2 ಸಿನಿಮಾ ರಿಲೀಸ್ ಹಿನ್ನೆಲೆಯಲ್ಲಿ ಡಿ 4ರಂದು ಪುಟ 2

## ಹೆಚ್ಚು ಸಮಯ ಇದ್ದರೆ ಗೆಲ್ಲುವ ಸಾಧ್ಯತೆ ಹೆಚ್ಚು

**ಬೆಳಗಾವಿ:** ಸದನದಲ್ಲಿ ಹೆಚ್ಚು ಸಮಯ ಇದ್ದವರು ಹೆಚ್ಚು ಬಾರಿ ಗೆಲುವು ಸಾಧಿಸುತ್ತಾರೆ ಹಾಗೂ



ಉತ್ತಮ ರಾಜಕಾರಣಿಯಾಗಲು ಸಹಕಾರಿಯಾಗಲಿದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆಯಲ್ಲಿಂದು ತಿಳಿಸಿದರು. ಇಂದು ಬೆಳಗ್ಗೆ ಸದನ ಸಮಾವೇಶಗೊಂಡಾಗ ನಿನ್ನೆ ಸಕಾಲಕ್ಕೆ ಆಗಮಿಸಿದ ಶಾಸಕರು ಹಾಗೂ ರಾತ್ರಿ 10 ಗಂಟೆವರೆಗೂ ಸದನದಲ್ಲಿ ಹಾಜರಿದ್ದ ಶಾಸಕರ,ಸಚಿವರ ಹೆಸರುಗಳನ್ನು ವಾಚಿಸಿದರು.ಸದನದಲ್ಲಿ ಗಮನಸೆಳೆಯುವ ಸೂಚನೆ ಮುಗಿದ ಕೂಡಲೇ ಶಾಸಕರು ಪುಟ 2

## ತಮಿಳು ನಾಡಿನಲ್ಲಿ ಭಾರೀ ಮಳೆ ಶಾಲೆಗಳಿಗೆ ರಜೆ


**ಚೆನ್ನೈ:** ತಮಿಳುನಾಡಿನ ಹಲವೆಡೆ ಸುರಿದ ವ್ಯಾಪಕ ಮಳೆಯಿಂದಾಗಿ ಹಲವು ಜಿಲ್ಲೆಗಳಲ್ಲಿ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಮಧುರೈ, ತಿರುನಲ್ವೇಲಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಇಂದು ಶಾಲೆಗಳಿಗೆ ರಜೆ ನೀಡಲಾಗಿದೆ. ಪುದುಚೇರಿಯಲ್ಲಿಯೂ ಶಾಲೆಗಳು ಮುಚ್ಚಲ್ಪಟ್ಟಿವೆ. ಮಳೆ ಪೀಡಿತ ಜಿಲ್ಲೆಗಳಿಗೆ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾಧಿಕಾರಿಗಳು ಶಾಲೆಗಳಿಗೆ ರಜೆ ಘೋಷಿಸಿದ್ದಾರೆ. ಕತಿಪಾರ, ಪೂನಮಲ್ಲಿ, ಪೋರೂರ್, ಮಧುರವಾಯಲ್, ವ್ಯಾಸರಪಾಡಿ, ಚೆನ್ನೈ ಉಪನಗರಗಳಲ್ಲಿ ವಾಹನ ಪುಟ 2



ಸಂಸತ್ ಭವನದ ಆವರಣದಲ್ಲಿ ಇಂದು ಬೆಳಗ್ಗೆ ಸಂಸತ್ ಭವನದ ಮೇಲೆ ನಡೆದ ಭಯೋತ್ಪಾದಕರ ದಾಳಿಯಲ್ಲಿ ಹುತಾತ್ಮರಾದ ವೀರಯೋಧರಿಗೆ ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರು ನಮನ ಅರ್ಪಿಸಿದರು. ಗೌರವಾನ್ವಿತ ಉಪ ರಾಷ್ಟ್ರಪತಿಗಳಾದ ಶ್ರೀ ಜಗದೀಪ ದನಕರ್ ಅವರು, ಗೌರವಾನ್ವಿತ ಪ್ರಧಾನಿಗಳಾದ ಶ್ರೀ ನರೇಂದ್ರ ಮೋದಿ ಅವರು, ಹಾಗೂ ಲೋಕಸಭೆ ಸ್ಪೀಕರ್ ಶ್ರೀ ಓಂ ಬಿರ್ಲಾ ಅವರು ಸೇರಿ ಅನೇಕ ಗಣ್ಯರು ನಮನ ಸಲ್ಲಿಸಿದರು.

## ತರಕಾರಿ ಮಾರುಕಟ್ಟೆಯಲ್ಲಿ ಕೋಲ್ಡ್ ಸ್ಟೋರೇಜ್ ಸ್ಥಾಪನೆ

**ಬೆಂಗಳೂರು:** ಅರಸೀಕರೆ ತರಕಾರಿ ಮಾರುಕಟ್ಟೆಯಲ್ಲಿ ಕೋಲ್ಡ್ ಸ್ಟೋರೇಜ್ ಸ್ಥಾಪಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಅವರು ವಿಧಾನಸಭೆಯಲ್ಲಿ ತಿಳಿಸಿದ್ದಾರೆ.



ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ಶಿವಲಿಂಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು ಕೋಲ್ಡ್ ಸ್ಟೋರೇಜ್ ಸ್ಥಾಪಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದ್ದು, ಅದಷ್ಟು ಶೀಘ್ರದಲ್ಲೇ ಕೋಲ್ಡ್ ಸ್ಟೋರೇಜ್ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪ್ರಸಕ್ತ ಸಾಲಿನ ಆರ್ ಐಡಿಎಫ್-30 ಯೋಜನೆ ಅಡಿ ರೂ.254.50 ಕೋಟಿಗಳ ಅನುದಾನವನ್ನು ಮಂಜೂರು ಮಾಡುವಂತೆ ಕೋರಲಾಗಿತ್ತು. ಅದರಲ್ಲಿ ದ ಆರ್ಥಿಕ ಇಲಾಖೆ ರೂ.144.75 ಕೋಟಿ ಮೊತ್ತದಲ್ಲಿ ಶೀಥಲ ಗೃಹ ಮತ್ತು ಇನ್ನಿತರ ಮೂಲಭೂತ ಸೌಕರ್ಯ ಗಳಿಗೆ ಬಳಸಲು ಅನುಮೋದನೆ ನೀಡಿದೆ ಎಂದರು.

ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ & ಅಭಿವೃದ್ಧಿ) ಅಧಿನಿಯಮ, 1966ಕ್ಕೆ ಕೆಲವೊಂದು ತಿದ್ದುಪಡಿಗಳನ್ನು ತಂದಿದ್ದು, ತದನಂತರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಕೃಷಿ ಉತ್ಪನ್ನಗಳ ಅವಕ ಹೆಚ್ಚುತ್ತಿದ್ದು, ಇದರಿಂದ ರೈತರು ಬೆಳೆದ ಬೆಳೆಗೆ ಯೋಗ್ಯ ದರ ಮತ್ತು ಮಾರುಕಟ್ಟೆ ಒದಗಿಸುವ ನಿಟ್ಟಿನಲ್ಲಿ ಪುಟ 2

## ಅವಿಶ್ವಾಸ ನಿರ್ಣಯ ಮಂಡನೆ, ಕಲಾಪ ಡಿ.16ಕ್ಕೆ ಮುಂದೂಡಿಕೆ


**ನವದೆಹಲಿ:** ರಾಜ್ಯಸಭೆ ಸಭಾಪತಿ ಜಗದೀಪ್ ಧಂಖರ್ ವಿರುದ್ಧದ ಅವಿಶ್ವಾಸ ನಿರ್ಣಯದ ಕುರಿತು ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ತೀವ್ರ ವಾಗ್ವಾದದ ನಂತರ ರಾಜ್ಯಸಭೆ ಕಲಾಪವನ್ನು ಡಿಸೆಂಬರ್ 16 ಕ್ಕ ಮುಂದೂಡಲಾಯಿತು. ಇಂದು ಬೆಳಗ್ಗೆ ಸದನ ಕಲಾಪಕ್ಕೆ ಸೇರುತ್ತಿದ್ದಂತೆ ಪ್ರತಿಪಕ್ಷ ಸದಸ್ಯರು ಪ್ರಸ್ತಾವನೆಯ ಮೇಲೆ ಚರ್ಚೆಗೆ ಒತ್ತಾಯಿಸುತ್ತಿದ್ದಂತೆ ಕೋಲಾಹಲ ಉಂಟಾಯಿತು, ಆಡಳಿತ ಪಕ್ಷ ಸದಸ್ಯರು ಆಕ್ಷೇಪ ಎತ್ತಿದರು.ಈ ವೇಳೆ ತೀವ್ರ ಗದ್ದಲ, ಕೋಲಾಹಲ ಉಂಟಾಗಿ ಕಲಾಪ ಮುಂದೂಡಿಕೆಗೆ ಕಾರಣವಾಯಿತು. ಪುಟ 2

## ನಾಳೆ 'ಮಹಾ' ಸಂಪುಟ ರಚನೆ, 35 ಮಂದಿ ಸಚಿವರಾಗಿ ಪ್ರಮಾಣ!

ಮುಂಬೈ: ನಾಳೆ ಮಹಾರಾಷ್ಟ್ರ ಸಚಿವ ಸಂಪುಟ ವಿಸ್ತರಣೆಯಾಗುವ ಸಾಧ್ಯತೆಗಳಿವೆ. ದೇವೇಂದ್ರ ಫಡ್ನವಿಸ್ ಮಹಾರಾಷ್ಟ್ರದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿ ವಾರ ಕಳೆದರೂ ಇದುವರೆಗೂ ಸಂಪುಟ ರಚನೆಯಾಗಿಲ್ಲ.

ಹೀಗಾಗಿ ನಾಳೆ ಮಹಾರಾಷ್ಟ್ರ ಸಚಿವ ಸಂಪುಟ ವಿಸ್ತರಣೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಮೊದಲ ಹಂತದಲ್ಲಿ 35 ಶಾಸಕರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಬಿಜೆಪಿ 17, ಶಿವಸೇನೆ 10 ಮತ್ತು ರಾಷ್ಟ್ರೀಯವಾದಿ ಅಜಿತ್ ಪವಾರ್ ಗುಂಪಿನ 7 ಶಾಸಕರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದೆ.



ಮುಖ್ಯವಾಗಿ ಹಣಕಾಸು ಮತ್ತು ಗಹ ಖಾತೆಗಳನ್ನು ಬಿಜೆಪಿಯೇ ಇಟ್ಟುಕೊಳ್ಳಲಿದೆ. ಹಿಂದಿನ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಏಕನಾಥ್ ಶಿಂಧೆ ಉಪಮುಖ್ಯಮಂತ್ರಿಯಾಗಬೇಕಿದ್ದ ಕಾರಣ ಶಿವಸೇನೆ ಪದೇ ಪದೇ ಗಹ ಸಚಿವ ಸ್ಥಾನ ಬೇಕು ಪುಟ 2

## 3988 ಅಂಗನವಾಡಿ ತೆರೆಯಲು ಪ್ರಸ್ತಾವನೆ

**ಬೆಳಗಾವಿ:** ರಾಜ್ಯದಲ್ಲಿ ಹೊಸದಾಗಿ 3988 ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಕೇಂದ್ರ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ



ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ಹೇಳಿದರು. ಇಂದು ವಿಧಾನ ಪರಿಷತ್ ನಲ್ಲಿ ಸದಸ್ಯ ಜವರಾಯಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಹೊಸದಾಗಿ ಅಂಗನವಾಡಿ ಕೇಂದ್ರ ಪುಟ 2

## ಒಂದು ದೇಶ ಒಂದು ಚುನಾವಣೆ ವಿರೋಧ; ದೇಶದ ಅಭಿವೃದ್ಧಿ ವಿರೋಧಿಗಳು

ದೆಹಲಿ: ಒಂದು ದೇಶ ಒಂದು ಚುನಾವಣೆ ವ್ಯವಸ್ಥೆ ಜಾರಿಗೆ ತರಲು ಸಂವಿಧಾನ ತಿದ್ದುಪಡಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್ ಡಿಎ ಸರ್ಕಾರ ದಿಟ್ಟ ನಿರ್ಧಾರ ತೆಗೆದುಕೊಂಡಿದೆ. ಈ ತೀರ್ಮಾನವನ್ನು ವಿರೋಧಿಸುವವರು ದೇಶದ ಅಭಿವೃದ್ಧಿ ವಿರೋಧಿಗಳು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ನವ ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸಚಿವ ಸಂಪುಟದಲ್ಲಿ ಒಂದು ದೇಶ ಒಂದು ಚುನಾವಣೆ ವ್ಯವಸ್ಥೆ ಜಾರಿಗೆ ತರಲು ಸಂವಿಧಾನ ತಿದ್ದುಪಡಿಗೆ ಒಪ್ಪಿಗೆ ನೀಡಿದೆ. ಅದನ್ನು ಇದೇ ಸಂಸತ್ ಅಧಿವೇಶನದಲ್ಲಿ ಮಂಡಿಸುವ ವಿಚಾರ ಇದೆ. ಇದು ಬಹಳ ಪ್ರಮುಖವಾದದ್ದು, ಮುಂದಿನ ದಿನಗಳಲ್ಲಿ ದೇಶದ ಅಭಿವೃದ್ಧಿ ಆಗಬೇಕಾದರೆ ಪ್ರತಿನಿತ್ಯ ಚುನಾವಣೆ ಮಾಡಲು ಆಗುವುದಿಲ್ಲ. ಈ ದೇಶದಲ್ಲಿ ಸಹಕಾರಿ ವ್ಯವಸ್ಥೆಯಿಂದ ಹಿಡಿದು, ಪಂಚಾಯತಿ ಚುನಾವಣೆ, ವಿಧಾನಸಭೆ ಲೋಕಸಭೆವರೆಗೆ



ಒಂದಿಲ್ಲ ಒಂದು ಚುನಾವಣೆ ನಡೆಯುತ್ತಲೇ ಇರುತ್ತವೆ. ಪ್ರತಿ ಚುನಾವಣೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಹಣ ಖರ್ಚಾಗುತ್ತದೆ ಅಷ್ಟೇ ಅಲ್ಲ ಆ ದಿನಗಳಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.

ಒಂದು ದೇಶ ಒಂದು ಚುನಾವಣೆ ವ್ಯವಸ್ಥೆ ಜಾರಿಯಾದರೆ ಆಡಳಿತದಲ್ಲಿ ಸ್ಥಿರತೆ ಬರುತ್ತದೆ. ಅಭಿವೃದ್ಧಿ ಸ್ಥಿರತೆ ಬಹಳ ಮುಖ್ಯ. ಬೇರೆ ಯಾವ ದೇಶಗಳಲ್ಲಿಯೂ ಈ ರೀತಿಯ ವ್ಯವಸ್ಥೆ ಇಲ್ಲ. ಆದ್ದರಿಂದ ಇದಕ್ಕೆ ಇತಿಶ್ರೀ ಹಾಡಬೇಕೆಂದು ದಶಕಗಳಿಂದ ಚರ್ಚೆ ನಡೆಯುತ್ತಿತ್ತು. ನಮ್ಮ ಪ್ರಧಾನಮಂತ್ರಿಗಳು ಒಂದು ದಿಟ್ಟ ನಿರ್ಧಾರ ಮಾಡಿದ್ದು, ಇದು ದೂರಗಾಮಿಯಾಗಿ ಸಕಾರಾತ್ಮಕ ಪರಿಣಾಮ ಬೀರುತ್ತದೆ. ಇದು ಈ ದೇಶಕ್ಕೆ ಒಳ್ಳೆಯ ದಾಗುವಂತಹ ನಿರ್ಧಾರ. ಇದಕ್ಕೆ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ನೇತೃತ್ವದ ಸಮಿತಿಯ ಶಿಫಾರಸ್ಸಿನ ಅನ್ವಯ ಈ ಬದಲಾವಣೆ ತರುತ್ತಿದ್ದಾರೆ. ಇದಕ್ಕೆ ಎಲ್ಲರೂ ಚರ್ಚೆ ಮಾಡಬೇಕು, ಸ್ವಾಗತ ಮಾಡಬೇಕು. ದೇಶದ ಎಲ್ಲ ಜನರೂ ಸ್ವಾಗತಿಸಬೇಕು. ಇದನ್ನು ವಿರೋಧಿಸುವವರು ದೇಶದ ಅಭಿವೃದ್ಧಿಯ ವಿರೋಧಿಗಳಾಗಿದ್ದಾರೆ. ರಾಜಕೀಯ ಕಾರಣಗಳಿಗೆ ಪುಟ 2

# ಸಂಸ್ಕೃತಿ ಪುನರುತ್ಥಾನಕ್ಕೆ ಮೋದಿ ಸರ್ಕಾರ ದಿಟ್ಟ ಹೆಜ್ಜೆ

**ನವದೆಹಲಿ:** ಭಾರತೀಯ ಪರಂಪರೆ, ಧರ್ಮ ಮತ್ತು ಸಂಸ್ಕೃತಿ ಪುನರುತ್ಥಾನಕ್ಕೆ ಕೇಂದ್ರ ಸರ್ಕಾರ ದಿಟ್ಟ ಹೆಜ್ಜೆ ಇರಿಸಿದೆ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ಪ್ರತಿಪಾದಿಸಿದರು.

ನವದೆಹಲಿಯ ಭಾರತ ಮಂಟಪದಲ್ಲಿ ಬೆಂಗಳೂರಿನ ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ಆಯೋಜಿಸಿದ್ದ ಶ್ರೀ ವೀರಭದ್ರೇಶ್ವರ ಜಯಂತ್ಯುತವದಲ್ಲಿ ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಕಾಶಿ ವಿಶ್ವನಾಥ, ಮಹಾಕಾಲ ಉಜ್ಜಯಿನಿ, ಅಯೋಧ್ಯೆ ಶ್ರೀರಾಮನ ಕ್ಷೇತ್ರ ಸೇರಿದಂತೆ ದೇಶದೆಲ್ಲೆಡೆ ಸಾಂಸ್ಕೃತಿಕ ಪುನರುತ್ಥಾನ ಕೈಗೊಂಡಿದೆ ಎಂದರು.

ಜಗತ್ತಿಗೇ ಬೇಕಿದೆ ಭಾರತೀಯ ಸಂಸ್ಕೃತಿ: ಭಾರತೀಯ ಪರಂಪರೆ, ಸಂಸ್ಕೃತಿ ಇದ್ದರೆ ಜಗತ್ತೇ ಸುಖ, ಶಾಂತಿ, ನೆಮ್ಮದಿಯಿಂದ ಇರಲು ಸಾಧ್ಯ. 'ಲೋಕಾ ಸಮಸ್ತೋ ಸುಖಿನೋ ಭವಂತು' ಎಂಬ ಉದಾತ್ತ ಚಿಂತನೆ, ಪರಿಕಲ್ಪನೆಯುಳ್ಳ ನಮ್ಮ ಸನಾತನ ಧರ್ಮ, ಸಂಸ್ಕೃತಿ ಇಂದು ಜಗತ್ತಿಗೇ ಬೇಕಿದೆ ಎಂದು ಜೋಶಿ ಪ್ರತಿಪಾದಿಸಿದರು.

'ಧರ್ಮದಿಂದಲೇ ವಿಶ್ವಕ್ಕೆ ಶಾಂತಿ, ಮಾನವ ಧರ್ಮಕ್ಕೆ ಜಯವಾಗಲಿ' ಎನ್ನುವಂಥ ಏಕೈಕ ದೇಶ ಭಾರತ. ಇಂಥ ಒಂದು ವಿಶಿಷ್ಠ ಸಂಸ್ಕೃತಿ ಭಾರತದಲ್ಲಿದೆ. ಇದು ನಾಶವಾಗಬಾರದು ಎಂಬ ಕಾರಣಕ್ಕೆ ನಮ್ಮ ಸರ್ಕಾರ ಸಾಂಸ್ಕೃತಿಕ ಪುನರುತ್ಥಾನಕ್ಕೆ ಹೆಚ್ಚಿನ ಗಮನ ಕೊಟ್ಟಿದೆ ಎಂದು ಹೇಳಿದರು.

ರಾಜಕೀಯಕ್ಕಾಗಿ ಸನಾತನ ಧರ್ಮ ಮುಗಿಸಬೇಕು ಎನ್ನುವವರಿದ್ದಾರೆ: ರಾಜಕೀಯ ಲಾಭಕ್ಕಾಗಿ ಭಾರತೀಯ ಸನಾತನ ಧರ್ಮವನ್ನು ಕೋವಿಡ್ ರೀತಿ ನಾಶ ಮಾಡಬೇಕು ಎನ್ನುವವರು ದೇಶದಲ್ಲೇ ಇದ್ದಾರೆ. ಆದರೆ, ಭಾರತೀಯ




ಸನಾತನ ಧರ್ಮ ಮತ್ತು ಸಂಸ್ಕೃತಿ ಉಳಿವಿನ ವಿಚಾರದಲ್ಲಿ ಯಾರೂ ರಾಜಕೀಯ ಮಾಡಬಾರದು ಎಂದು ತೀಕ್ಷ್ಣವಾಗಿ ಹೇಳಿದರು.

ದೇಶದ ಸಂಸ್ಕೃತಿ ಮೇಲೆ ಆಕ್ರಮಣ: ಭಾರತದ ಹೊರಗಿನಿಂದ ಮಾತ್ರವಲ್ಲ; ಒಳಗಿನವರಿಂದಲೂ ನನ್ನ ದೇಶದ ಸಂಸ್ಕೃತಿ ಮೇಲೆ ಆಕ್ರಮಣ ಆಗುತ್ತಿದೆ. ಕೆಲವರು ದ್ವೇಷದಿಂದ ಹಿಂದೂ ಸಮಾಜ, ಹಿಂದೂ ದೇಶ, ಸನಾತನ ಧರ್ಮ, ಪರಂಪರೆ ಮತ್ತು ಸಂಸ್ಕೃತಿ ಮೇಲೆ ದಾಳಿ ಮಾಡುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಕೆಲವು ಶಕ್ತಿಗಳಿಗೆ ಭಾರತ ಪ್ರಬಲ ಆಗುವುದು ಬೇಕಿಲ್ಲ. ಹಾಗಾಗಿ ಸಾಮಾಜಿಕ ವಿಘಟನೆಯೊಂದಿಗೆ ನಮ್ಮ ಸನಾತನ ಧರ್ಮ ಮತ್ತು ಸಂಸ್ಕೃತಿಯನ್ನು ಹಾಳು ಮಾಡಲು ಸರ್ವ ಪ್ರಯತ್ನ ಮಾಡುತ್ತಿದ್ದಾರೆ. ನಾವು ಇದನ್ನು ಸಂಘಟಿತವಾಗಿ ಎದುರಿಸಬೇಕು ಎಂದು ಕರೆ ನೀಡಿದರು.

ಬ್ರಿಟಿಷರು ಬರುವ ಮೊದಲು ಭಾರತ ಒಂದು ದೇಶವೇ ಆಗಿರಲಿಲ್ಲ ಎನ್ನುತ್ತಾರೆ. ಆದರೆ, ಭಾರತ ಸಾಂಸ್ಕೃತಿಕವಾಗಿ ಸಾವಿರಾರು ವರ್ಷಗಳಿಂದಲೂ ಒಂದು ದೇಶವಾಗಿತ್ತು ಎಂಬುದಕ್ಕೆ ಸಾಕಷ್ಟು ಉದಾಹರಣೆ ಇವೆ ಎಂದು ಹೇಳಿದರು.

ಭಾರತ್ ಮಾತಾ ಕೀ ಜೈ ಎನ್ನುವವರನ್ನು ಒಗ್ಗೂಡಲು ಸಿದ್ಧ: 'ಭಾರತ್ ಮಾತಾ ಕೀ ಜೈ, ಹಿಂದೂಸ್ಥಾನ್ ಕೀ ಜೈ..' ಎನ್ನುವ ಎಲ್ಲರನ್ನೂ ಒಳಗೊಳ್ಳಲು, ಒಗ್ಗೂಡಲು ನಾವು ಸಿದ್ಧರಿದ್ದೇವೆ. ಕೆಲವರಂತೆ ನಾವಿದರಲ್ಲಿ ರಾಜಕೀಯ ಮಾಡುತ್ತಿಲ್ಲ. ಸರ್ವರ ಹಿತ ಬಯಸುವಂತಹ ಭಾರತೀಯ ಸನಾತನ ಧರ್ಮ, ಪರಂಪರೆ ಉಳಿಸುವುದು ನಮ್ಮ ಗುರಿ. ಆ ನಿಟ್ಟಿನಲ್ಲಿ ಸರ್ಕಾರ ಹಿಂಜರಿಯುವುದಿಲ್ಲ ಎಂದು ಹೇಳಿದರು.

"ರಾಮಾಯಣ ಸರ್ಕ್ಯೂಟ್" ಆರಂಭಿಸಿದ್ದೇವೆ. ಪುರಾತನ ದೇವಸ್ಥಾನಗಳಿಗೆ ತೆರಳಲು ವ್ಯವಸ್ಥೆ ಮಾಡುತ್ತಿದ್ದೇವೆ. ರೈಲುಗಳ ಮೂಲಕ ದೇಶದ ಬೇರೆ ಬೇರೆ ಕಡೆ ಸಂಚರಿಸಲು ಅನುವು ಮಾಡಿಕೊಡಲಾಗುತ್ತಿದೆ ಎಂದು ಹೇಳಿದರು.

ಹುಬ್ಬಳ್ಳಿ ಮೂರುಸಾವಿರ ಮಠದ ಶ್ರೀಮನ್ ನಿರಂಜನ ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವದ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಹಿರೇನಾಗಾಂವ ಶಾಂತಲಿಂಗೇಶ್ವರ ಮಠದ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಗಳು, ಹುಕ್ಕೇರಿ ಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಶ್ರೀ ವೀರಭದ್ರೇಶ್ವರ ಜಯಂತ್ಯೋತ್ಸವ ಸಮಿತಿ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ಶಿವಲಿಂಗ ಮುರುಘ ರಾಜೇಂದ್ರ ಶಿವಾಚಾರ್ಯ ಸ್ವಾಮೀಜಿ ಸಮ್ಮುಖ ವಹಿಸಿದ್ದರು.

ಕೇಂದ್ರದ ರಾಜ್ಯ ಸಚಿವ ವಿ.ಸೋಮಣ್ಣ, ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಬಿ.ವೈ.ವಿಜಯೇಂದ್ರ, ಗೋವಿಂದ ಕಾರಜೋಳ, ಸಾಗರ್ ಖಂಡ್ರೆ ಮತ್ತಿತರ ಪ್ರಮುಖರು ಉಪಸ್ಥಿತರಿದ್ದರು.

# ಬಸ್ ಅಂಡ್ ಕಾರ್ ಆಪರೇರ್ ಕಾನ್‌ಫೆಡರೇಷನ್ ಆಫ್ ಇಂಡಿಯಾ ಹೊಸ ಆಡಳಿತ ಮಂಡಳಿ ಆಯ್ಕೆ



**ಬೆಂಗಳೂರು;** ದೇಶಾದ್ಯಂತ ಸಾರ್ವಜನಿಕ ಸಾರಿಗೆ ಕಾರ್ಯಾಚರಣೆದಾರರ ರಾಷ್ಟ್ರೀಯ ಮಂಡಳಿಯಾಗಿರುವ ಬಸ್ ಅಂಡ್ ಕಾರ್ ಆಪರೇರ್ಸ್ ಕಾನ್‌ಫೆಡರೇಷನ್ ಆಫ್ ಇಂಡಿಯಾ ತನ್ನ ಹೊಸ ರಾಷ್ಟ್ರೀಯ ಸಮಿತಿಯನ್ನು ಘೋಷಣೆ ಮಾಡಿದೆ.

ಮುಂಬೈನಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಈ ಹೊಸ ಸಮಿತಿಯನ್ನು ಪ್ರಕಟಿಸಲಾಗಿದೆ. ಈ ಸಮಿತಿಯ ಅವಧಿಯು ಮೂರು ವರ್ಷಗಳಾಗಿರುತ್ತದೆ.

ರಾಷ್ಟ್ರೀಯ ಅಧ್ಯಕ್ಷರಾಗಿ ಪ್ರಸನ್ನ ಪಟವರ್ಧನ್ ಉಪಾಧ್ಯಕ್ಷರಾಗಿ ಎ.ಅಫ್ಜಲ್ , ಪ್ರಧಾನ ಕಾರ್ಯದರ್ಶಿಯಾಗಿ ಧರ್ಮರಾಜ್ ಹರೀಶ್ ಕೊಟಕ್ (ಖಜಾಂಚಿ) ಮತ್ತು ಬಾಬು ಪಾನಿಕರ್(ಹೆಚ್ಚುವರಿ ಕಾರ್ಯದರ್ಶಿ) ಇವರು ಸಮಿತಿಯ ನೂತನ ಪ್ರಮುಖ ಸದಸ್ಯರಾಗಿದ್ದಾರೆ. ಪ್ರಸನ್ನ ಪಟವರ್ಧನ್ ಅವರು ಬಿಒಸಿಐನ ರಾಷ್ಟ್ರೀಯ ಅಧ್ಯಕ್ಷರಾಗಿ ಪುನರಾಯ್ಕೆಯಾಗಿದ್ದು, ಅವರ ನಾಯಕತ್ವದಲ್ಲಿ ಸಾರ್ವಜನಿಕ ಸಾರಿಗೆ ಉದ್ಯಮದ ಸುಧಾರಣೆಗೆ ತಮ್ಮದೇ ಆದ ದೃಷ್ಟಿಕೋನವನ್ನು ಹೊಂದಿದವರಾಗಿದ್ದಾರೆ.

ತಮ್ಮ ಪುನರಾಯ್ಕೆ ಬಗ್ಗೆ ಮಾತನಾಡಿದ ಪ್ರಸನ್ನ ಪಟವರ್ಧನ್ ಅವರು,'ಬಿಒಸಿಐನ ರಾಷ್ಟ್ರೀಯ ಅಧ್ಯಕ್ಷ ಸ್ಥಾನಕ್ಕೆ ಪುನರಾಯ್ಕೆ ಮಾಡುವ ಮೂಲಕ ನನ್ನ ಸೇವೆಯನ್ನು ಮುಂದುವರಿಸಲು ಅವಕಾಶ ಮಾಡಿಕೊಟ್ಟಿರುವುದಕ್ಕೆ ಅತ್ಯಂತ ಸಂತಸವೆನಿಸುತ್ತಿದೆ. ನನ್ನ ಮೇಲೆ ನಂಬಿಕೆ ಮತ್ತು ಬೆಂಬಲ ನೀಡುತ್ತಿರುವ ಎಲ್ಲಾ ಸದಸ್ಯರಿಗೂ ನಾನು ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ. ಪ್ರಸ್ತುತ ಸಾರ್ವಜನಿಕ ಸಾರಿಗೆ ಉದ್ಯಮವು ರೂಪಾಂತರದ ಪರ್ವದಲ್ಲಿದ್ದು, ಸಾರಿಗೆ ಅಗತ್ಯತೆಗಳನ್ನು ಅಳವಡಿಸಿಕೊಳ್ಳುವ ಎಲ್ಲಾ ಪ್ರಯತ್ನಗಳನ್ನು ಕೈಗೊಳ್ಳಬೇಕಾದ ಅಗತ್ಯವಿದೆ. ಸಾರ್ವಜನಿಕ ಸಾರಿಗೆಯು ಸುಸ್ಥಿರ ಮತ್ತು ಅಂತರ್ಗತ ಸಾರಿಗೆಯ ಆಧಾರಸ್ತಂಭವಾಗಿದ್ದು, ವಿಕಸಿತ ಭಾರತದ ದೃಷ್ಟಿಕೋನದ ಸಾಧನೆಯ ಗುರಿಯನ್ನು ಸಾಧಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಸಾರಿಗೆಯನ್ನು ಸೇವೆಯನ್ನಾಗಿ ಮಾಡುವುದು ಮತ್ತು ಕಟ್ಟಕಡೆಯ ಮೈಲಿಯವರೆಗೆ ಸೇವೆಯನ್ನು ವಿಸ್ತರಣೆ ಮಾಡುವುದು ಸೇರಿದಂತೆ ಇನ್ನಿತರ ಆಧುನಿಕ ಪರಿಹಾರಗಳನ್ನು ಅಳವಡಿಸಿಕೊಂಡು ಸಾರಿಗೆ ಪರಿಸರ ವ್ಯವಸ್ಥೆಯನ್ನು ಶಕ್ತಿಶಾಲಿಯನ್ನಾಗಿ ಮಾಡುವ ಬದ್ಧತೆಯನ್ನು ಬಿಒಸಿಐ ಹೊಂದಿದೆ ಎಂದರು.

# ಮಾರ್ಚ್ ಅಂತ್ಯದೊಳಗೆ ಎಂಇಐ ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ಪೂರ್ಣಗೊಳಿಸಿ: ತುಷಾರ್ ಗಿರಿನಾಥ್

**ಬೆಂಗಳೂರು:** ನಗರದ ಆರ್.ಆರ್ ನಗರ ವಲಯ ವ್ಯಾಪ್ತಿಯಲ್ಲಿ ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಯಶವಂತಪುರ ರೈಲ್ವೆ ನಿಲ್ದಾದ ಬಳಿಯ ತಣ್ಣೀರಹಳ್ಳ ಹಾಗೂ ರೈಲ್ವೆ ಕ್ವಾಟ್ರಸ್ ಬಳಿ ಮಳೆಗಾಲದಲ್ಲಿ ಜಲಾವೃತವಾಗುವುದನ್ನು ತಪ್ಪಿಸುವ ಸಲುವಾಗಿ 200 ಮೀಟರ್ ಉದ್ದ ಪೈಪ್ ಲೈನ್ ಅಳವಡಿಕೆಯನ್ನು ಪರಿಶೀಲಿಸಿ ಶೀಘ್ರ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚನೆ ನೀಡಿದರು.

ತಣ್ಣೀರಹಳ್ಳ ಪ್ರದೇಶದಲ್ಲಿ ಜಲಾವೃತವಾಗುವುದನ್ನು ತಡೆಯಲು 1.8 ಮೀಟರ್ ನ ಸೀಮೆಂಟ್ ಕೊಳವೆ(ಪೈಪ್) ಅಳವಡಿಸಲಾಗುತ್ತಿದ್ದು, ಈ ಕಾಮಗಾರಿಯನ್ನು 1.5 ಕೋಟಿ ರೂ. ವೆಚ್ಚದಲ್ಲಿ ಕೈಗತ್ತಿಕೊಳ್ಳಲಾಗಿದೆ. ಕಾಮಗಾರಿ ಪೂರ್ಣಗೊಂಡರೆ ಇಲ್ಲಿ ಯಾವುದೇ ರೀತಿಯ ಜಲಾವೃತವಾಗುವುದಿಲ್ಲ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

ಯಶವಂತಪುರದ ಎಂಇಐ ರಸ್ತೆಯಲ್ಲಿ ಕೈಗೆತ್ತಿಕೊಂಡಿರುವ ವೈಟ್ ಟಾಪಿಂಗ್ ಕಾಮಗಾರಿಯನ್ನು ಮಾರ್ಚ್ 2025ರ ಅಂತ್ಯೊಳಗಾಗಿ ಪೂರ್ಣಗೊಳಿಸಲು ಸೂಚನೆ ನಡೆಸಿದರು.

950 ಮೀ. ಉದ್ದದ ಎಂಇಐ ರಸ್ತೆಯಲ್ಲಿ ಸಂಚಾರಿ ಪೊಲೀಸ್ ಇಲಾಖೆಯಿಂದ ಅನುಮತಿ ಪಡೆದು ಕಳೆದ 2 ತಿಂಗಳಿಂದ ವೈಟ್ ಟಾಪಿಂಗ್ ಕಾಮಗಾರಿ ಪ್ರಾರಂಭಿಸಲಾಗಿದೆ. ಎರಡೂ ಬದಿಯ ರಸ್ತೆಯನ್ನು ಸಂಪೂರ್ಣವಾಗಿ ಮುಚ್ಚಿ ಕಾಮಗಾರಿ ನಡೆಸಲಾಗುತ್ತಿದೆ.

ಈ ರಸ್ತೆಯಲ್ಲಿ ನೀರುಗಾಲುವೆ, ಸ್ಯಾನಿಟರಿ



ಲೈನ್, ಡಕ್ಟ್ ಅಳವಡಿಕೆ, ವಿದ್ಯುತ್ ಲೈನ್ ಚೇಂಬರ್ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಪಾದಚಾರಿ ಮಾರ್ಗ ಕಾಮಗಾರಿ ಪ್ರಗತಿಯಲ್ಲಿದೆ. ವೈಟ್ ಟಾಪಿಂಗ್ ಕಾಮಗಾರಿಯನ್ನು ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲು ಸೂಚನೆ ನೀಡಿದರು.

**ನಾಗರಭಾವಿ ಕೆರೆಗೆ ಫೆನ್ಸಿಂಗ್ ಅಳವಡಿಸಿ:** ನಾಗರಭಾವಿ ಕೆರೆಗೆ ಸಂಬಂಧಿಸಿದಂತೆ ಸರ್ವೆ ಇಲಾಖೆಯ ವತಿಯಿಂದ ಕೂಡಲೇ ಸರ್ವೆ ವರದಿ ಪಡೆದು, ಅದರಂತೆ ಫೆನ್ಸಿಂಗ್ ಕಾರ್ಯ ಕೈಗೊಳ್ಳಲು ಕೆರೆ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಾಗರಭಾವಿ ಕೆರೆ 4 ಎಕರೆ 7 ಗುಂಟೆ ಇದ್ದು, ಕೆರೆಯ ಇನ್ಲೆಟ್ ಭಾಗದಲ್ಲಿ ಆರ್.ಸಿ.ಸಿ ವಾಲ್ ಕಾಮಗಾರಿ ನಡೆಯುತ್ತಿದ್ದು, ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚನೆ ನೀಡಿದರು.

ಕೆರೆ ಪಕ್ಕದಲ್ಲಿ ಉದ್ಯಾನಕ್ಕೆಂದು ಮೀಸಲಿಟ್ಟಿರುವ ಖಾಲಿ ಜಾಗವಿದ್ದು, ಅದನ್ನು ಸರ್ವೇ ಮಾಡಿ ಗಡಿ ಗುರುತಿಸಿ ಫೆನ್ಸಿಂಗ್ ಮಾಡಲು ಸೂಚಿಸಿದರು.

**ವೈಟ್ ಟಾಪಿಂಗ್ ಕಾಮಗಾರಿ ಪರಿಶೀಲನೆ:** ಕೆಂಗೇರಿ ಹಳೆ ರಿಂಗ್ ರಸ್ತೆಯಿಂದ ಅಮ್ಮ ಆಶ್ರಮದ ವರೆಗಿನ ಕುವೆಂಪು ಮುಖ್ಯರಸ್ತೆಯಲ್ಲಿ 1.04 ಕಿ.ಮೀ ಉದ್ದ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಂಡಿದ್ದು, ಪೆಬ್ರಬರಿ ಅಂತ್ಯದೊಳಗಾಗಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ನೀಡಿದರು.

ಕುವೆಂಪು ಮುಖ್ಯ ರಸ್ತೆ ಸಬ್ ಆರ್ಟಿರಿಯಲ್ ರಸ್ತೆಯಾಗಿದ್ದು, ಈಗಾಗಲೇ ಪೈಪ್ ಲೈನ್, ಡಕ್ಟ್, ಯುಜಿಡಿ, ಚೇಂಬರ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಇದೀಗ ವೈಟ್ ಟಾಪಿಂಗ್ ಕಾಮಗಾರಿಯನ್ನು ಶೀಘ್ರ ಕೈಗೆತ್ತೊಕೊಂಡು ಕಾಲಮಿತಿಯೊಳಾಗಿ ಪೂರ್ಣಗೊಳಿಸುವುದಾಗಿ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

ಈ ವೇಳೆ ವಲಯ ಆಯುಕ್ತರಾದ ಸತೀಶ್, ವಲಯ ಜಂಟಿ ಆಯುಕ್ತರಾದ ಡಾ. ಆರತಿ ಆನಂದ್, ವಲಯ ಮುಖ್ಯ ಅಭಿಯಂತರರಾದ ಸ್ವಯಂಪ್ರಭ, ಯೋಜನಾ ವಿಭಾಗದ ಮುಖ್ಯ ಅಭಿಯಂತರರಾದ ಲೋಕೇಶ್, ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಚಳಿಗೆ ದೆಹಲಿ ತತ್ತರ

**ನವದೆಹಲಿ:** ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ತಾಪಮಾನ 4 ಡಿಗ್ರಿ ಸೆಲ್ಸಿಯಸ್‌ಗೆ ಕುಸಿದಿದ್ದು, ಚಳಿಯಿಂದ ಜನ ತತ್ತರಿಸಿದ್ದಾರೆ. ಪ್ರಮುಖವಾಗಿ ಅಯನಗರ ಹಾಗೂ ಪುಸ ಪ್ರದೇಶದಲ್ಲಿ ಶೀತಗಾಳಿ ಇದ್ದು ಅಲ್ಲಿ ತಾಪಮಾನ ಕ್ರಮವಾಗಿ 3.8 ಹಾಗೂ 3.2 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಇದು ಈ ಋತುವಿನಲ್ಲಿ ದಾಖಲಾದ ಕನಿಷ್ಠ ತಾಪಮಾನ. ದೆಹಲಿಯ ಕನಿಷ್ಠ ತಾಪಮಾನ 4.9 ಡಿಗ್ರಿ ಸೆಲ್ಸಿಯಸ್ ಇತ್ತು. ಡಿಸೆಂಬರ್ ಆರಂಭದಲ್ಲಿ 5 ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು. ಇದು 14 ವರ್ಷದಲ್ಲಿ ದಾಖಲಾದ ಕನಿಷ್ಠ ತಾಪಮಾನ ಎಂದು ಭಾರತೀಯ ಹವಾಮಾನ ಕೇಂದ್ರ ತಿಳಿಸಿದೆ. ದತ್ತಾಂಶಗಳ ಪ್ರಕಾರ 1987 ಡಿಸೆಂಬರ್ 6 ರಂದು 4.1 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದು ಈವರೆಗಿನ ಕನಿಷ್ಠ. ಸೂರ್ಯ ಏರುತ್ತಿದ್ದಂತೆಯೇ ತಿಳಿಯಾಕಾಶ ಇರಲಿದೆ ಎಂದು ಇಲಾಖೆ ಹೇಳಿದೆ.

# 50 ಗ್ರಾಮಪಂಚಾಯ್ತಿಗಳನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ

**ಬೆಳಗಾವಿ:** ರಾಜ್ಯದಲ್ಲಿ 50 ಗ್ರಾಮಪಂಚಾಯ್ತಿಗಳನ್ನು, ಪಟ್ಟಣ ಪಂಚಾಯ್ತಿಗಳನ್ನು ಪುರಸಭೆಯಾಗಿ ಮೇಲ್ದರ್ಜೆ ಗೇರಿಸುವ ಪ್ರಸ್ತಾವನೆ ಇದ್ದು ಹಂತ ಹಂತವಾಗಿ ಮೇಲ್ದರ್ಜೆಗೇರಿಸಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್.ಸುರೇಶ್ ವಿಧಾನಸಭೆಗಿಂದು ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ದಿನಕರ್ ಕೇಶವ ಶೆಟ್ಟಿ ಅವರ ಪ್ರಶ್ನೆಗೆ ಪೌರಾಡಳಿತ ಸಚಿವ ರಹೀಮ್ ಖಾನ್ ಅವರು ಉತ್ತರ ನೀಡುತ್ತಿದ್ದ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಅವರು 2011ರ ಜನಗಣತಿ ಪ್ರಕಾರ ಮೇಲ್ದರ್ಜೆಗೇರಿಸಲು ಅವಕಾಶವಿಲ್ಲ. ಆದರೆ ಗೋಕರ್ಣಕ್ಕೆ ಲಕ್ಷಾಂತರ ಭಕ್ತರು ಆಗಮಿಸುತ್ತಿರುವುದು ನಿಜ.ಗೋಕರ್ಣದ ಬಗ್ಗೆ ನಮಗೂ ವಿಶೇಷವಾದ ಪ್ರೀತಿ ಇದೆ. ಆದರೆ ರಾಜ್ಯದಲ್ಲಿ ಗ್ರಾಮ ಪಂಚಾಯ್ತಿಯನ್ನು ಪಟ್ಟಣ ಪಂಚಾಯ್ತಿಯಾಗಿ ಮೇಲ್ದರ್ಜೆಗೇರಿಸಲು ರಾಜ್ಯಾದ್ಯಂತ ಒಂದೇ ಮಾನದಂಡವಿದೆ ಎಂದರು.



ಉತ್ತರ ಕನ್ನಡ ಜಿಲ್ಲೆಯ ಗೋಕರ್ಣ ಗ್ರಾಮ ಪಂಚಾಯ್ತಿಯನ್ನು ಪಟ್ಟಣ ಪಂಚಾಯ್ತಿಯನ್ನಾಗಿ ಮೊದಲ ಆದ್ಯತೆಯಲ್ಲೇ ಮೇಲ್ದರ್ಜೆಗೇರಿಸಲು ಗಮನ ಕೊಡಲಾಗುವುದು ಎಂದು ಪೌರಾಡಳಿತ ಸಚಿವ ರಹೀಂ ಖಾನ್ ತಿಳಿಸಿದರು.

2011ರ ಜನಗಣತಿಯ ಪ್ರಕಾರ 13539 ಜನಸಂಖ್ಯೆ ಇದೆ. 2015, ಮಾರ್ಚ್ 19ರ ಸಚಿವ ಸಂಪುಟದಲ್ಲಿ, 15 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇರುವ ಅರ್ಹ ಗ್ರಾಮಪಂಚಾಯ್ತಿಗಳನ್ನು ಮಾತ್ರ ಪಟ್ಟಣ ಪಂಚಾಯ್ತಿಯನ್ನಾಗಿ ಮೇಲ್ದರ್ಜೆಗೇರಿಸಲು ನಿರ್ಧರಿಸಲಾಗಿದೆ. ಗೋಕರ್ಣ ಗ್ರಾಪಂ ನಿಗದಿತ ಮಾನದಂಡವನ್ನು ಪೂರೈಸುತ್ತಿಲ್ಲ ಎಂದು ಹೇಳಿದರು.

ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ವಿಜಯೇಂದ್ರ, ಜನಗಣತಿ ಮಾನದಂಡವೆಂದು ಪರಿಗಣಿಸಿದರೆ ಗೋಕರ್ಣವನ್ನು ಮೇಲ್ದರ್ಜೆಗೇರಿಸಲು ಸಾಧ್ಯವಿಲ್ಲ. ಲಕ್ಷಾಂತರ ಜನರು ಇಲ್ಲಿಗೆ ಬರುತ್ತಾರೆ. ಆದ್ಯತೆ ಮೇಲೆ ಪರಿಗಣಿಸಿ ಎಂದರು. ಬಿಜೆಪಿ ಶಾಸಕ ಸುನೀಲ್‌ಕುಮಾರ್ ಮಾತನಾಡಿ, ಪ್ರವಾಸಿಗರು ಹೆಚ್ಚು ಆಗಮಿಸುವ ಪ್ರವಾಸಿ ತಾಣಗಳನ್ನು ಮೇಲ್ದರ್ಜೆಗೇರಿಸಲು ಮೊದಲ ಆದ್ಯತೆ ನೀಡಿ ಪರಿಗಣಿಸಿದರೆ ಸರ್ಕಾರಕ್ಕೂ ಗೌರವ ಬರುತ್ತದೆ ಎಂದರು. ಬಿಜೆಪಿ ಶಾಸಕರಾದ ಪ್ರಭು ಚವ್ಹಾಣ್, ಭೈರತಿ ಬಸವರಾಜ್ ಮೊದಲಾದವರು ಧ್ವನಿಗೂಡಿಸಿ ಮಾತನಾಡಿದರು.

# ತ.ನಾಡಿನಲ್ಲಿ ಭಾರೀ ಮಳೆ ಶಾಲೆಗಳಿಗೆ ರಜೆ

**ಮೊದಲ ಪುಟದಿಂದ**

ಸಂಚಾರ ಸ್ಥಗಿತಗೊಂಡಿದ್ದು, ಮಳೆನೀರಿನಲ್ಲಿ ವಾಹನಗಳು ಸಿಲುಕಿಕೊಂಡು ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.ಚೆನ್ನೈ ಮತ್ತು ನೆರೆಯ ತಿರುವಳ್ಳೂರು, ಚೆಂಗಲ್‌ಪೇಟ್ ಮತ್ತು ಕಾಂಚೀಪುರಂ, ವಿಲ್ಲುಪುರಂ ಮತ್ತು ಕಾವೇರಿ ಡೆಲ್ಟಾ ಪ್ರದೇಶದ ಕೆಲವು ಪ್ರದೇಶಗಳಲ್ಲಿ ರಾತ್ರಿಯಿಡೀ ಮಳೆ ಸುರಿದಿದೆ.

ನಗರದ ವೆಲಚೇರಿ ಮೇಲ್ಸೇತುವೆಯಲ್ಲಿ ವಾಹನಗಳು. ನಗರದ ಹಲವೆಡೆ ಮುಖ್ಯರಸ್ತೆಗಳಲ್ಲಿಯೂ ಜನರು ಮೊಣಕಾಲು ಆಳದ ನೀರಿನ ಪರದಾಡಬೇಕಾಯಿತು. ಬುಧವಾರ ರಾತ್ರಿಯಿಂದ ಸುರಿದ ಮಳೆಗೆ ಹಲವು ಜನವಸತಿ ಪ್ರದೇಶಗಳು ಜಲಾವೃತಗೊಂಡಿವೆ.

ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸುಧಾರಿತ ವಿಪತ್ತು ನಿರ್ವಹಣಾ ಸಾಧನಗಳನ್ನು ಹೊಂದಿರುವ ಎನ್‌ಡಿಆರ್‌ಎಫ್ ತಂಡವನ್ನು ರಾಜ್ಯದ ಚೆನ್ನೈ, ತಿರುವಳ್ಳೂರು, ಚೆಂಗಲ್‌ಪೇಟ್ ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯಲ್ಲಿ ನಿಯೋಜಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಾಂಚೀಪುರಂ, ವಿಲ್ಲುಪುರಂ, ಕಲ್ಲಕುರಿಚಿ, ತಿರುವರೂರು, ತಂಜಾವೂರು ಜಿಲ್ಲೆಗಳಲ್ಲಿ ಹೆಚ್ಚು ಮಳೆಯಾಗುವ ಮುನ್ಸೂಚನೆ ಇದೆ. ಈ ಅವಧಿಯಲ್ಲಿ ತಮಿಳುನಾಡು ಮತ್ತು ಪುದುಚೇರಿಯ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಅಲ್ಲದೆ, ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಸೂಚನೆ ನೀಡಿದೆ.

# ಗುಡುಗಿದ ಸಿಎಂ

**ಮೊದಲ ಪುಟದಿಂದ**

ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವ ವೇಳೆ ಪಂಚಮಸಾಲಿ ಸಮುದಾಯದ ಜನರ ಮೇಲೆ ಪೊಲೀಸ್ ಕಲ್ಲು ಹೊಡೆದಿದ್ದಾರೆ ಎಂಬ ಬಿಜೆಪಿ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಅವರು ಕಲ್ಲು ಹೊಡೆದಿರುವುದು, ಬ್ಯಾರಿಕೇಡ್ ತಳ್ಳಿ ಒಳಗೆ ನುಗ್ಗುವುದರ ಫೋಟೋಗಳನ್ನು ತೋರಿಸುತ್ತೇವೆ.

ಸ್ವಾಮೀಜಿಗಳು ರಸ್ತೆಯಲ್ಲಿ ಏಕೆ ಕುಳಿತುಕೊಂಡಿದ್ದಾರೆ? ಪ್ರತಿಭಟನಾಕಾರರು ಕಲ್ಲು ತೂರದಿದ್ದರೆ 20ಕ್ಕೂ ಹೆಚ್ಚು ಪೊಲೀಸರಿಗೆ ಗಾಯ ಹೇಗಾಯಿತು. ಪೊಲೀಸರೇ ಕಲ್ಲು ಎಸೆದುಕೊಂಡಿದ್ದಾರೆಯೇ ? ಎಂದು ಪ್ರಶ್ನಿಸಿದರು. ನಾನು ಹೇಳಿರುವುದಕ್ಕೆ ಸಾಕ್ಷಿಯಿದೆ ಎಂದರು.

ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮುಂದೆ ಹೋಗಬೇಕು: ಮೀಸಲಾತಿ ಮುಂದೇನು ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಪಂಚಮಸಾಲಿ ಸಮಾಜದವರು ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮುಂದೆ ಹೋಗಬೇಕು. ಬಿಜೆಪಿ ಕಾಲದಲ್ಲಿ ಆಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗಡೆಯವರ ವರದಿಯಲ್ಲಿ ಈಗಿರುವಂತೆಯೇ ಪ್ರವರ್ಗ 2ಎ 2ಬಿ ಇರಬೇಕು. ಇದಕ್ಕೆ ಹೊಸ ಸೇರ್ಪಡೆಯಾಗಬಾರದು



**ವಿಜಯಪುರ ಡಿಸೆಂಬರ್ 13.ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಜಯಪುರದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸಿದರು.**

2ಬಿ ಯಲ್ಲಿರುವ 4% ಮೀಸಲಾತಿಯನ್ನು ರದ್ದು ಮಾಡಬಾರದು ಎಂದು ಹೇಳಿದ್ದಾರೆ.

ಹೋರಾಟಕ್ಕೆ ಬಿಜೆಪಿ ಬೆಂಬಲ: ಬಿಜೆಪಿ ಅವಧಿಯಲ್ಲಿ ಆಗಿದ್ದಕ್ಕೆ ಅಂದು ಪ್ರತಿಭಟನೆ ಏಕಾಗಲಿಲ್ಲ? ಈಗ ಅದೇ ಬಿಜೆಪಿಯವರು ಹೋರಾಟಕ್ಕೆ ಬೆಂಬಲ ನೀಡುತ್ತಿದ್ದಾರೆ. ಮುಸಲ್ಮಾನರಿಗೆ ಇದ್ದ ಶೇ.4 ರ ಮೀಸಲಾತಿಯನ್ನು ರದ್ದುಮಾಡಿ 3ಎ ಒಕ್ಕಲಿಗರಿಗೆ 2% ಮತ್ತು 3ಬಿ ಪ್ರವರ್ಗಗಳಿಗೆ ಲಿಂಗಾಯತರಿಗೆ 2% ಮೀಸಲಾತಿ ನೀಡಿದರು. ಇದನ್ನು ಪ್ರಶ್ನಿಸಿ ಮುಸಲ್ಮಾನರಾದ ರಸೂಲ್ ಎಂಬ ವ್ಯಕ್ತಿ ನ್ಯಾಯಾಲಯದ ಮೆಟ್ಟಿಲೇರಿದ್ದರು. ಈ ವೇಳೆ ಹಿಂದಿನ ಬಿಜೆಪಿ ಸರ್ಕಾರವೇ ಮೀಸಲಾತಿಯಲ್ಲಿ ಯಾವುದೇ ಬದಲಾವಣೆ ಮಾಡುವುದಿಲ್ಲ ಎಂದು ಒಪ್ಪಿಕೊಂಡಿದ್ದನ್ನು ಸಿಎಂ ಉಲ್ಲೇಖಿಸಿದರು.

ಸಂಧಾನಕ್ಕೆ ಸಚಿವರನ್ನು ಕಳುಹಿಸಲಾಗಿತ್ತು: ಪಂಚಮಸಾಲಿ ಹೋರಾಟವನ್ನು ಟ್ರ್ಯಾಕ್ಟರ್ ತರುವ ಮೂಲಕ ಮಾಡುತ್ತೇವೆ ಎಂದು ಮೊದಲೇ ತಿಳಿಸಿದ್ದರು. ನ್ಯಾಯಾಲಯ ಹೋರಾಟವನ್ನು ಶಾಂತಿಯುತವಾಗಿ , ಸಾರ್ವಜನಿಕರಿಗೆ ತೊಂದರೆಯಾಗದಂತೆ ನಡೆಸಲು ಸೂಚನೆ ನೀಡಿತ್ತು. ಆದರೆ ಹೋರಾಟಗಾರರು ಕಾನೂನನ್ನು ಕೈಗೆ ತೆಗೆದುಕೊಳ್ಳಲು ಪ್ರಯತ್ನಿಸಿದರು. ಸ್ಥಳಕ್ಕೆ ಮಹದೇವಪ್ಪ ಸೇರಿದಂತೆ ಮೂರು ಸಚಿವರನ್ನು ಕಳುಹಿಸಲಾಗಿತ್ತು ಎಂದು ಮುಖ್ಯಮಂತ್ರಿಗಳು ವಿವರಿಸಿದರು.

## ಮೊದಲ ಪುಟದಿಂದ

## ಆರ್‌ಬಿಐಗೆ ಬಾಂಬ್ ಬೆದರಿಕೆ

ಇ- ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದ ನಂತರ, ಅಪರಿಚಿತ ವ್ಯಕ್ತಿಗಳ ವಿರುದ್ಧ ಮಾತಾ ರಮಾಬಾಯಿ ಅಂಬೇಡ್ಕರ್ -ಎಂಆರ್‌ಎ ಮಾರ್ಗ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.ಭಾರತೀಯ ರಿಸರ್ವ್ ಬ್ಯಾಂಕ್ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಬೆದರಿಕೆ ಇಮೇಲ್ ಸ್ವೀಕರಿಸಿದೆ. ರಷ್ಯನ್ ಭಾಷೆಯಲ್ಲಿ ಬರೆದ ಇಮೇಲ್, ಸೆಂಟ್ರಲ್ ಬ್ಯಾಂಕ್ ಅನ್ನು ಸ್ಫೋಟಿಸುವ ಎಚ್ಚರಿಕೆ ನೀಡಲಾಗಿದೆ.ಇಮೇಲ್‌ನ ಮೂಲ ಮತ್ತು ಅದರಲ್ಲಿ ಭಾಗಿಯಾಗಿರುವ ದುಷ್ಕರ್ಮಿಗಳನ್ನು ಪತ್ತೆಹಚ್ಚಲು ಅಧಿಕಾರಿಗಳು ಸಂಪೂರ್ಣ ತನಿಖೆ ಪ್ರಾರಂಭಿಸಿದ್ದಾರೆ.

## ಕೋಲ್ಡ್ ಸ್ಟೋರೇಜ್ ಸ್ಥಾಪನೆ

ಹೆಚ್ಚಿನ ಪ್ರಮಾಣದಲ್ಲಿ ಶೀಥಲ ಗೃಹಗಳನ್ನು ಸ್ಥಾಪಿಸಲು ಮತ್ತು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು 354.75 ಕೋಟಿಗಳ ಹೆಚ್ಚುವರಿ ಅನುದಾನವನ್ನು ಮಂಜೂರು ಮಾಡುವಂತೆ ಆರ್ಥಿಕ ಇಲಾಖೆಯನ್ನು ಪುನಃ ಕೋರಲಾಗಿದೆ ಎಂದರು. ಅರಸೀಕರೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವ್ಯಾಪ್ತಿಯಲ್ಲಿ ಬರುವ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಪ್ರಾಂಗಣವು ಕಳೆದ 2023 ನವೆಂಬರ್ ನಿಂದ ಕಾರ್ಯ ನಿರ್ವಹಿಸುತ್ತಿದ್ದು, ಅರಸೀಕೆರೆಯ ಹಬ್ಬನಘಟ್ಟ ಕಾವಲ್ (ಗೀಜಿಹಳ್ಳಿ) ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ರೂ. 5 ಕೋಟಿ ವೆಚ್ಚದಲ್ಲಿ ಶೀತಲಗೃಹ ಸ್ಥಾಪಿಸುವ ಪ್ರಸ್ತಾವನೆಗೆ ಅನುಮೋದನ-ದೊರೆತ ನಂತರದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

## ಅಂಗನವಾಡಿ ಪ್ರಸ್ತಾವನೆ

ಪ್ರಾರಂಭಿಸಲು ಕೇಂದ್ರ ಸರ್ಕಾರದ ಅನುಮೋದನೆ " ಅವಶ್ಯಕವಿರುತ್ತದೆ. ಏಕೆಂದರೆ ಅಂಗನವಾಡಿ ಕೇಂದ್ರದಲ್ಲಿ ಫಲಾನುಭವಿಗಳಿಗೆ ಪೂರೈಸಲಾಗುವ ಪೂರಕ ಪೌಷ್ಟಿಕ ಆಹಾರ ಯೋಜನೆಯಡಿ ಹಂಚಿಕೆ ಅನುದಾನದಲ್ಲಿ ಕೇಂದ್ರದ ಪಾಲು ಶೇ 20ರಷ್ಟು ಇರುತ್ತದೆ. ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಗೌರವಧನ ಪಾವತಿಯಲ್ಲಿ ಆಡಳಿತ ವೆಚ್ಚದಡಿ ಅನುದಾನ ಹಂಚಿಕೆಯಲ್ಲಿ ಕೇಂದ್ರ ಸರ್ಕಾರದ ಪಾಲು ಶೇ 30ರಷ್ಟಿರುತ್ತದೆ. ಮುಂದುವರೆದು ಸಬ್ಸಿಡಿ ದರದಲ್ಲಿ ಅಕ್ಕಿ ಮತ್ತು ಗೋಧಿಯನ್ನು ಸಹ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಹಂಚಿಕೆ ಮಾಡುತ್ತದೆ.

## 35 ಮಂದಿ ಸಚಿವರಾಗಿ ಪ್ರಮಾಣ!

ಎಂದು ಹೇಳಿಕೊಳ್ಳುತ್ತಿತ್ತು. ನಾಳೆ ಮಹಾಯುತಿ ಒಕ್ಕೂಟದ 35 ಮಂದಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದ್ದು, ಸಂಪುಟಕ್ಕೆ ಸೇರುವ ಸಂಭಾವ್ಯರ ಪಟ್ಟಿ ಇಲ್ಲಿದೆ. ಬಿಜೆಪಿಗೆ 21 ಖಾತೆಗಳು, ಶಿವಸೇನೆ ಶಿಂಧೆ ಗುಂಪು 13 ಮತ್ತು ಎನ್‌ಸಿಪಿ ಅಜಿತ್ ಪವಾರ್ ಗುಂಪು 9 ಸಚಿವ ಸ್ಥಾನಗಳನ್ನು ಹೊಂದಿರುತ್ತದೆ.ಮಾಹಿತಿ ಪ್ರಕಾರ ಈ ಖಾತೆ ದೇವೇಂದ್ರ ಫಡ್ನವಿಸ್ ಅವರ ಬಳಿಯೇ ಉಳಿಯಲಿದೆ ಎಂದು ಮೂಲಗಳು ತಿಳಿಸಿವೆ. ಅಜಿತ್ ಪವಾರ್ ಹಣಕಾಸು ಖಾತೆಗಳನ್ನು ನಿರ್ವಹಿಸುವಲ್ಲಿ ಅಪಾರ ಅನುಭವ ಹೊಂದಿದ್ದಾರೆ. ಶಿಂಧೆ ಸರ್ಕಾರದಲ್ಲಿ ಅಜಿತ್ ಪವಾರ್ ಕೂಡ ಹಣಕಾಸು ಸಚಿವರಾಗಿದ್ದರು. ಆದರೆ ಈಗ ಹಣಕಾಸು ಖಾತೆ ಫಡ್ನವಿಸ್ ಅವರ ಬಳಿಯೇ ಉಳಿಯಲಿದೆ ಎಂದು ತಿಳಿದುಬಂದಿದೆ.ಏಕನಾಥ್ ಶಿಂಧೆ ಅವರು ನಗರಾಭಿವದ್ಧಿ ಮತ್ತು ಕಂದಾಯ ಖಾತೆಯನ್ನು ಹೊಂದಿರುತ್ತಾರೆ. ಅಜಿತ್ ಪವಾರ್ ಅವರು ವಸತಿ ಮತ್ತು ಸಾರ್ವಜನಿಕ ಕಾರ್ಯಗಳ ಪ್ರಮುಖ ಖಾತೆಗಳನ್ನು ಹೊಂದಿರುತ್ತಾರೆ. ವರ್ಷ ದೇವೇಂದ್ರ ಫಡ್ನವೀಸ್ ಅವರ ಸಂಪುಟದಲ್ಲಿ ಅನುಭವಿ ಸಚಿವರು ಇರಲಿದ್ದಾರೆ. ಕೆಲವು ಹೊಸ ಮುಖಗಳಿಗೂ ಅವಕಾಶ ನೀಡಲಾಗುವುದು. ಶಿವಸೇನೆಯ ದೀಪಕ್ ಕೇಸಕರರ್, ಅಬ್ದುಲ್ ಸತ್ತಾರ್ ಮತ್ತು ತಾನಾಜಿ ಸಾವಂತ್ ಅವರುಗಳು ಸಚಿವರಾಗುವ ಸಾಧ್ಯತೆಗಳಿವೆ.

## ದೇಶದ ಅಭಿವೃದ್ಧಿ ವಿರೋಧಿಗಳು

ಇದನ್ನು ಕೆಲವರು ವಿರೋಧಿಸುತ್ತಿದ್ದಾರೆ. ಆದರೆ, ಇಡೀ ದೇಶ ಈ ಬದಲಾವಣೆಯ ಪರವಾಗಿ ನಿಲ್ಲಬೇಕು. ಈ ದಿಟ್ಟ ತೀರ್ಮಾನ ತೆಗೆದುಕೊಂಡ ಪ್ರಧಾನಿ ನರೇಂದ್ರ ಮೋದಿಯವರನ್ನು ಅಭಿನಂದಿಸುತ್ತೇನೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಸಂಸದ ಗೋವಿಂದ ಕಾರಜೋಳ ಹಾಜರಿದ್ದರು.

## ಪೊಲೀಸರ ವಶಕ್ಕೆ

ಹೈದರಾಬಾದ್ ನಲ್ಲಿ ಸಂಧ್ಯಾ ಥೀಯೇಟರ್ ಗೆ ಅಲ್ಲು ಅರ್ಜುನ್ ಭೇಟಿ ನೀಡಿದ್ದರು. ಅಲ್ಲು ಅರ್ಜುನ್ ರನ್ನು ನೋಡಲ ಅಭಿಮಾನಿಗಳು ಮುಗಿಬಿದ್ದಿದ್ದರು. ಈ ವೇಳೆ ಕಾಲ್ತುಳಿತದಲ್ಲಿ ರೇವತಿ ಎಂಬ ಮಹಿಳೆ ಸಾವನ್ನಪ್ಪಿದ್ದರು. ಈ ಸಂಬಂಧ ಪತಿ ದೂರು ಆಧರಿಸಿ ಪೊಲೀಸರು ಎಫ್ ಐಆರ್ ದಾಖಲಿಸಿದ್ದು. ಎಫ್ ಐಆರ್ ರದ್ದುಗೊಳಿಸುವಂತೆ ಕೋರಿ ನಟ ಅಲ್ಲು ಅರ್ಜುನ್ ಕೋರ್ಟ್ ಮೆಟ್ಟಿಲೇರಿದ್ದಾರೆ.

## ಗೆಲ್ಲುವ ಸಾಧ್ಯತೆ ಹೆಚ್ಚು

ಹೊರಹೋಗುವುದು ಸರಿಯಲ್ಲ. ಸದನದಲ್ಲಿ ಹೆಚ್ಚು ಕಾಲ ಇದ್ದು ಕಾರ್ಯ ಕಲಾಪಗಳಲ್ಲಿ ಭಾಗಿಯಾದರೆ ಅನುಭವವೂ ಹೆಚ್ಚಾಗಲಿದೆ ದೊಡ್ಡ ಸ್ಥಾನವೂ ಸಿಗಲಿದೆ ಎಂದರು.ವೈದ್ಯರಿಗೆ ಮೆಡಿಕಲ್ ಕಾಲೇಜು, ವಕೀಲರಿಗೆ ಲಾ ಕಾಲೇಜುಗಳಿವೆ.

ವೃತ್ತಿಪರರಿಗೆ ಸೂಕ್ತ ತರಬೇತಿ, ಆಯಾ ಸಂಸ್ಥೆಗಳಲ್ಲಿ ತರಬೇತಿ ಸಿಗುತ್ತದೆ. ಆದರೆ ರಾಜಕಾರಣಿಗಳಿಗೆ ತರಬೇತಿ ನೀಡುವ ಸಂಸ್ಥೆಗಳಿಲ್ಲ. ಹೀಗಾಗಿ ಸದನವೇ ಒಂದು ಅಕಾಡೆಮಿ ಇದ್ದಂತೆ.

ಇಲ್ಲಿ ಹೆಚ್ಚು ಕಾಲ ಕಲಾಪಗಳಲ್ಲಿ ಭಾಗಿಯಾದರೆ, ಹಿರಿಯರು ಹೇಳಿದ ಮಾತುಗಳನ್ನು ಕೇಳಿದರೆ ಉತ್ತಮ ರಾಜಕಾರಣಿಯಾಗಬಹುದು. ಹಿರಿಯ ಶಾಸಕರ ಮಾತುಗಳೇ ಪಾಠಗಳಾಗಿವೆ. ಹೇಗೆ ಸದನದಲ್ಲಿ ಭಾಗವಹಿಸುತ್ತೀರಿ ಎಂಬುದನ್ನು ನಾಡಿನ ಜನ ಗಮನಿಸುತ್ತಾರೆ. ಇದನ್ನು ಸದನಕ್ಕೆ ಯಾರು ಬಂದಿಲ್ಲವೋ ಅವರಿಗೆ ಹೇಳಿ ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು.

# ಪಂಚಮಸಾಲಿ ಸಮುದಾಯದ ಒತ್ತಾಯ ಸಂವಿಧಾನಕ್ಕೆ ವಿರುದ್ಧ: ಸಿಎಂ

**ಬೆಳಗಾವಿ:** ಲಿಂಗಾಯತ ಪಂಚಮಸಾಲಿ ಸಮುದಾಯವನ್ನು ಪ್ರವರ್ಗ 2ಎ ಮೀಸಲಾತಿಯಡಿ ಸೇರಿಸಬೇಕೆಂಬ ಒತ್ತಾಯ ಸಂವಿಧಾನಕ್ಕೆ ವಿರುದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಲಿಂಗಾಯತ ಸಮುದಾಯುವು ಪ್ರವರ್ಗ 3 ಬಿನಲ್ಲಿ ಬರುತ್ತದೆ. ಪಂಚಮಸಾಲಿ ಸಮುದಾಯವನ್ನು 2ಎ ಅಡಿಗೆ ಸೇರಿಸಬೇಕೆಂದು ಕಳೆದ ಕೆಲವು ವರ್ಷಗಳಿಂದ ಹೋರಾಟ ನಡೆಯುತ್ತಿದೆ. ಈ ಹಿಂದೆ ಪ್ರತಿಭಟನೆಯ ನೇತೃತ್ವವಹಿಸಿದ್ದ ಜಯಮೃತ್ಯುಂಜಯ ಸ್ವಾಮೀಜಿ ಸೇರಿದಂತೆ ಇನ್ನಿತರರನ್ನು ಸಭೆಗೆ ಕರೆದು ಚರ್ಚಿಸಿದ್ದೆ. ನೀವು ಮಂಡಿಸಿರುವ ಒತ್ತಾಯ ಸಂವಿಧಾನಕ್ಕೆ ವಿರುದ್ಧವಾಗಿದೆ ಎಂದು ತಿಳಿಸಿದ್ದೆ ಎಂದು ವಿಧಾನ ಪರಿಷತ್ ಶೂನ್ಯವೇಳೆಯಲ್ಲಿ ಹನುಮಂತಪ್ಪ ರುದ್ರಪ್ಪ ನಿರಾಣಿ ಮಂಡಿಸಿದ ಪ್ರಸ್ತಾಪಕ್ಕೆ ಸಿಎಂ ಪ್ರತಿಕ್ರಿಯಿಸಿದರು.

ಹಿಂದುಳಿದ ವರ್ಗ ಪಟ್ಟಿಗೆ ಸೇರ್ಪಡೆ ಅಥವಾ ರದ್ದು ಮಾಡಬೇಕಾದರೆ ಶಾಶ್ವತ ಹಿಂದುಳಿದ ವರ್ಗದ ಆಯೋಗ ಶಿಫಾರಸು ಮಾಡಬೇಕು. 2002ರಲ್ಲಿ ಪ್ರವರ್ಗ–1ರಲ್ಲಿ ಸುಮಾರು 95 ಅತ್ಯಂತ ಹಿಂದುಳಿದ ಜಾತಿಗಳು, ಪ್ರವರ್ಗ 2ಎ ಹಾಗೂ 2ಬಿ ಅತಿ ಹಿಂದುಳಿದ ಹಾಗೂ 3ಎ ಹಾಗೂ 3ಬಿನಡಿ ಹಿಂದುಳಿದ ಜಾತಿಗಳು ಬರುತ್ತವೆ. ಪ್ರವರ್ಗ–1ಕ್ಕೆ ಶೇ.4, ಪ್ರವರ್ಗ 2ಎಗೆ ಶೇ.15, 2ಬಿನಲ್ಲಿ ಬರುವ ಮುಸಲ್ಮಾನರಿಗೆ ಶೇ. 4 ಹಾಗೂ 3ಎ ಒಕ್ಕಲಿಗರು ಹಾಗೂ 3ಬಿ ಲಿಂಗಾಯತ ಸಮುದಾಯ ಬರುತ್ತದೆ. ಏಕಾಏಕಿ 2ಎಗೆ ಸೇರಿಸಬೇಕೆಂಬ ಕೂಗು ಹೇಗೆ ಬಂದಿತು ಎಂದು ಅವರು ಪ್ರಶ್ನಿಸಿದರು. ಹಿಂದಿನ ಸರ್ಕಾರದಲ್ಲಿ ಮುರುಗೇಶ್ ನಿರಾಣಿ ಅವರಿಗೆ ಸಚಿವ ಸ್ಥಾನ ನೀಡದ್ದಕ್ಕೆ ಈ ಹೋರಾಟ ಶುರುವಾಯಿತು ಎಂದರು. ಇದಕ್ಕೆ ಪ್ರತಿಪಕ್ಷದ ಸದ್ಯಸರು ಆಕ್ಷೇಪ ವ್ಯಕ್ತಪಡಿಸಿದರು.

ಮಾತು ಮುಂದುವರೆಸಿದ ಸಿದ್ದರಾಮಯ್ಯ, ಹೋರಾಟ ಶುರುವಾಗಿದ್ದು 2022ರಲ್ಲಿ. ಹಿಂದುಳಿದ ಆಯೋಗ ರಚಿಸಿದ್ದು 2002ರಲ್ಲಿ. ಆಗಲೇ ಇದನ್ನು ವಿರೋಧಿಸಿ ಹೋರಾಟ ಮಾಡಬಹುದಿತ್ತಲ್ಲವೇ ಎಂದು ಪ್ರಶ್ನಿಸಿದರು.

ಪಂಚಮಸಾಲಿ ಸಮುದಾಯದ ಹೋರಾಟಗಾರರನ್ನು ಕರೆದು ಹಿಂದಿನ ಸರ್ಕಾರ ಮಾಡಿದ್ದ ನಿರ್ಣಯ ಸಂವಿಧಾನ ಬದ್ಧವಲ್ಲ ಎಂದು ಹೇಳಿದ್ದೆ. ಕಳೆದ ವರ್ಷದ ಮಾರ್ಚ್ 27ರಲ್ಲಿ ಬಿಜೆಪಿ ಸರ್ಕಾರದ ಪರವಾಗಿ ಹಿಂದುಳಿದ ವರ್ಗಗಳ ಕಾರ್ಯದರ್ಶಿಯವರು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ್ದ ಪ್ರಮಾಣ ಪತ್ರದಲ್ಲಿ 2ಎಗೆ ಯಾವ ಸಮುದಾಯ ಸೇರಿಸುವುದಿಲ್ಲ ಎಂದು ಉಲ್ಲೇಖಿಸಿದ್ದರು ಎಂದು ತಿಳಿಸಿದರು.



ಹಿಂದಿನ ಸರ್ಕಾರದಲ್ಲಿ ಮುಸಲ್ಮಾನರಿಗೆ ನೀಡಿದ್ದ ಶೇ.4ರಷ್ಟು ಮೀಸಲಾತಿ ರದ್ದು ಮಾಡಲಾಯಿತು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿಯ ರವಿಕುಮಾರ್, ಧಾರ್ಮಿಕ ಆಧಾರದ ಮೇರೆಗೆ ಮೀಸಲಾತಿ ಕಲ್ಪಿಸುವುದು ಸಂವಿಧಾನ ಬಾಹಿರ ಎಂದು ಕ್ರಿಯಾಲೋಪ ಎತ್ತಿದರು. ಮಧ್ಯಪ್ರವೇಶಿಸಿದ ಸಭಾಪತಿ ಬಸವರಾಜ ಹೊರಟ್ಟಿ, ಎದ್ದುನಿಂತು ಮುಖ್ಯಮಂತ್ರಿ ಮಾತನಾಡುವಾಗ ಮತ್ತೊಬ್ಬರು ಮಾತನಾಡುವುದು ತಪ್ಪು. ಇದೇನು ಧರ್ಮಛತ್ರನಾ? ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಸಿಎಂ ಜೊತೆ ಮಾತುಕತೆಗೆ ನಾನೇ ಖುದ್ದು ಕರೆದರೂ ಯಾರೂ ಬಂದಿಲ್ಲ



**ಬೆಳಗಾವಿ:** ಪಂಚಮಸಾಲಿ ಮೀಸಲಾತಿ ವಿಚಾರವಾಗಿ ಬಿಜೆಪಿ ನಾಯಕರು ವಿನಾಕಾರಣ ರಾಜಕೀಯ ಮಾಡುತ್ತಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಆರೋಪಿಸಿದರು. ಸುವರ್ಣಸೌಧದಲ್ಲಿಂದು ಮಾತನಾಡಿದ ಅವರು, ಮಾತುಕತೆಗೆ ಮುಖಂಡರುಗಳನ್ನು ಕರೆತರುವಂತೆ ನನಗೆ ಸಿಎಂ ಸೂಚಿಸಿದ್ದರು. ಸಿ.ಸಿ.ಪಾಟೀಲ್ ಸೇರಿದಂತೆ ಹಲವು ನಾಯಕರಿಗೆ ನಾನೇ ಖುದ್ದು ಕರೆ ಮಾಡಿದರೂ ಯಾರೂ ಸಭೆಗೆ ಬರಲಿಲ್ಲ. ಮೀಸಲಾತಿ ಹೋರಾಟ ರಾಜಕೀಯ ಆಗುತ್ತಿದೆ. ಇದರಲ್ಲಿ ಕಾಂಗ್ರೆಸ್, ಬಿಜೆಪಿ ಅಂತ ಬರಬಾರದು ಎಂದರು.ಮೀಸಲಾತಿ ವಿಚಾರವಾಗಿ ಬಿಜೆಪಿಯವರಿಗೆ ಈ ಪ್ರೀತಿ ಮೊದಲೇ ಯಾಕಿರಲಿಲ್ಲ? ಅವರ ಸರ್ಕಾರ ಇದ್ದಾಗ 2A ಮೀಸಲಾತಿಯನ್ನು ಯಾಕೆ ಕೊಡಲಿಲ್ಲ? ಆಗ ಮೀಸಲಾತಿ ಕೊಡದೇ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದರು ಎಂದು ಸಚಿವೆ ಹೆಬ್ಬಾಳ್ಕರ್ ಕಿಡಿಕಾರಿದರು. ಕಾನೂನನ್ನು ಯಾರೂ ಕೈಗೆತ್ತಿಕೊಳ್ಳಬಾರದು. ಮಾತುಕತೆಗೆ ಮುಖ್ಯಮಂತ್ರಿಗಳು ಸಮಯ ಕೊಟ್ಟಿದ್ದರು. ನಾನೇ ಫೋನ್ ಮಾಡಿದ್ದಲ್ಲದೇ ಸ್ವತಃ ಹೋಗಿ ಕರೆದು ಬಂದಿದ್ದೆ. ಸಮಾಜದ 10 ಜನ ಮುಖಂಡರನ್ನು ಕರೆದುಕೊಂಡು ಬರಲು ಸಿಎಂ ಸೂಚಿಸಿದ್ದರು. ಅವರು ಯಾರೂ ಬರಲಿಲ್ಲ ಪ್ರತಿಭಟನೆ ತೀವ್ರ ಸ್ವರೂಪ ಪಡೆಯಲು ಕೆಲವರ ಪ್ರಚೋದನೆಯೇ ಕಾರಣ. ಯಾರೂ ಕಾನೂನನ್ನು ಕೈಗೆತ್ತಿಕೊಳ್ಳಬಾರದು. ನ್ಯಾಯಾಲಯದ ಆದೇಶದಂತೆ ಕಾನೂನು ಉಲ್ಲಂಘಿಸಿ ಪ್ರತಿಭಟನೆ ಮಾಡುವುದಿಲ್ಲ ಎಂದು ಸ್ವತಃ ಪ್ರತಿಭಟನಾಕಾರರೇ ಮುಚ್ಚಳಿಕೆ ಪತ್ರ ಬರೆದುಕೊಟ್ಟಿದ್ದರು. ಆದರೆ, ಪ್ರತಿಭಟನೆಯಲ್ಲಿ ಆಗಿದ್ದೇನು ಎಂದು ಪ್ರಶ್ನಿಸಿದರು. ಜನರೆಲ್ಲಾ ಬೆಳಗ್ಗೆಯಿಂದ ಹಸಿದಿದ್ದಾರೆ. ಹಾಗಾಗಿ ಈ ಸಂದರ್ಭದಲ್ಲಿ ಅನಾಹುತ ಆಗುವುದು ಬೇಡ. ಪ್ರತಿಭಟನೆಗೆ ಇಳಿಯುವುದಕ್ಕಿಂತ ಮುಖ್ಯಮಂತ್ರಿಗಳ ಬಳಿ ಮಾತುಕತೆ ನಡೆಸೋಣ ಎಂದು ವಿನಂತಿಸಿದ್ದೆ. ಯಾರದೋ ಪ್ರಚೋದನೆಯಿಂದಾಗಿ ಅಮಾಯಕರು ಲಾಠಿ ಏಟು ತಿನ್ನುವಂತಾಯಿತು. ಇಂಥ ಘಟನೆಗಳು ಆಗಬಾರದು. ಹಿಂಸೆಗೆ ಯಾರೂ ಅವಕಾಶ ಕೊಡಬಾರದು ಎಂದು ಸಚಿವೆ ಹೇಳಿದರು.

## ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿಗೆ ಹಿನ್ನಡೆಯಾಗಿಲ್ಲ

**ಬೆಳಗಾವಿ:** ವಿವಿಧ ಯೋಜನೆಗಳು ಹಾಗೂ ಖರ್ಚುಗಳನ್ನು ನಿಭಾಯಿಸಲು ಪ್ರಸಕ್ತ ಆರ್ಥಿಕ ವರ್ಷದಲ್ಲಿ 90,280 ಕೋಟಿ ರೂ ಸಾಲ ಪಡೆಯಲಾಗಿದೆ. ಆರ್ಥಿಕ ಶಿಸ್ತಿನ ವ್ಯಾಪ್ತಿಯೊಳಗೆ ಸಾಲ ಪಡೆದಿದ್ದು, ರಾಜ್ಯದ ವಿತ್ತೀಯ ಕೊರತೆ ಶೇ 2.6ರಷ್ಟಿದೆ. ಅಲ್ಲದೇ, ಆರ್ಥಿಕ ಹೊಣೆಗಾರಿಕೆ ಅಧಿನಿಯಮದ ಮಾನದಂಡ ಮತ್ತು ಕೇಂದ್ರ ಸರ್ಕಾರ ನಿಗದಿಪಡಿಸಿರುವ ಸಾಲಮಿತಿಗೆ ಒಳಪಟ್ಟಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸರ್ಕಾರ ಪಂಚ ಗ್ಯಾರಂಟಿಗಳ ಯೋಜನೆಗಳಿಗಾಗಿ 56,009 ಕೋಟಿ ರೂ ಬಜೆಟ್‌ನಲ್ಲಿ ಮೀಸಲಿರಿಸಲಾಗಿದೆ. ಇನ್ನಿತರ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲು 90,280 ಕೋಟಿ ರೂ ಸಾಲ ಪಡೆಯಲಾಗಿದೆ. ವಿತ್ತೀಯ ಕೊರತೆ ವ್ಯಾಪ್ತಿಯಲ್ಲಿ ಸಾಲ ಪಡೆದಿದ್ದೇವೆ. ಪಂಜಾಬ್, ಕೇರಳ, ಆಂಧ್ರ, ಹಿಮಾಚಲ ಪ್ರದೇಶ ಸೇರಿದಂತೆ ಇನ್ನಿತರ ರಾಜ್ಯಗಳು ಮಿತಿಗಿಂತ ಹೆಚ್ಚು ಸಾಲ ಪಡೆದುಕೊಂಡಿವೆ ಎಂದು ಜೆಡಿಎಸ್ ಸದಸ್ಯ ಕೆ.ಎ.ತಿಪ್ಪೇಸ್ವಾಮಿ ಪ್ರಶ್ನೆಗೆ ಸಿದ್ದರಾಮಯ್ಯ ಅಂಕಿ–ಅಂಶಗಳ ಮೂಲಕ ವಿವರಿಸಿದರು. ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತವಾಗಿಲ್ಲ. ವಿರೋಧ ಪಕ್ಷಗಳ ಆರೋಪಗಳು ಸತ್ಯಕ್ಕೆ ದೂರವಾಗಿದೆ. ರಾಜ್ಯದಲ್ಲಿ ಪ್ರಸಕ್ತ 2023–24ರಲ್ಲಿ ಅಭಿವೃದ್ಧಿ ವೆಚ್ಚಗಳಿಗಾಗಿ 1,14,292 ಕೋಟಿ ರೂ. ವೆಚ್ಚ ಮಾಡಲಾಗಿದೆ. ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಆಯವ್ಯಯದಲ್ಲಿ 52,009 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಎಂದು ಸಿಎಂ ಮಾಹಿತಿ ನೀಡಿದರು.

ಮಧ್ಯಪ್ರವೇಶಿಸಿದ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಪರಿಶಿಷ್ಟ ಜಾತಿ–ಪಂಗಡಗಳಿಗೆ ಮೀಸಲಿರಿಸಿದ್ದ ಹಣ ಬಳಸಿರುವುದನ್ನು ಆಕ್ಷೇಪಿಸಿದ್ದಕ್ಕೆ ಉತ್ತರಿಸಿದ ಸಿಎಂ, ಗ್ಯಾರಂಟಿಗಳಿಗಾಗಿ ಮೀಸಲಿಸಿರುವ ಹಣವನ್ನು ಬಳಕೆ ಮಾಡಲಾಗುತ್ತದೆ. ಮಂಜೂರು ಮಾಡಿರುವ ಹಣವನ್ನು ನೋಡಿಕೊಂಡು ವಿವಿಧ ಮೂಲಗಳಿಂದ ಹಣ ಖರ್ಚು ಮಾಡುತ್ತೇವೆ. ಪೂರಕ ಅಯವ್ಯಯದಲ್ಲಿ 39,272 ಕೋಟಿ ಸಾವಿರ ಕೋಟಿ ಮೀಸಲಿರಿಸಲಾಗಿದೆ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಎಸ್‌ಇಪಿ ಹಾಗೂ ಟಿಎಸ್‌ಪಿ ಯೋಜನೆಗಳಿವೆಯಾ ಎಂದು ಪ್ರಶ್ನಿಸಿದರು.

ಆಂಧ್ರ, ತೆಲಂಗಾಣ ಹಾಗೂ ಕರ್ನಾಟಕ ಹೊರತುಪಡಿಸಿದರೆ ಬೇರೆ ಯಾವ ರಾಜ್ಯಗಳಲ್ಲಿ ಇಲ್ಲ. ಗುತ್ತಿಗೆ ಪದ್ಧತಿಯಲ್ಲಿ ಮೀಸಲಾತಿ ಸಹ ಯಾವ ರಾಜ್ಯದಲ್ಲಿಯೂ ಇಲ್ಲ ಎಂದು ಹೇಳುತ್ತಿದ್ದಂತೆ ಪ್ರತಿಪಕ್ಷದ ಸದಸ್ಯರು ಆಕ್ಷೇಪಿಸಿದರು. ಒಂದು ಕೈಯಲ್ಲಿ ಕೊಟ್ಟು ಇನ್ನೊಂದು ಕಿತ್ತುಕೊಂಡಿರಿ ಎಂದು ನಾರಾಯಣಸ್ವಾಮಿ ವಿರೋಧಿಸಿದರು.

## ವಿಧಾನಸಭೆಯಲ್ಲಿ ಒಟ್ಟು 11 ವಿವಿಧ ವಿಧೇಯಕಗಳ ಮಂಡನೆ

**ಬೆಳಗಾವಿ:** 2024ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕ ಸೇರಿದಂತೆ ವಿಧಾನಸಭೆಯಲ್ಲಿ ಒಟ್ಟು 11 ವಿವಿಧ ವಿಧೇಯಕಗಳನ್ನು ಸಚಿವರುಗಳು ಮಂಡಿಸಿದರು.

2024ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಎರಡನೇ ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ಪ್ರವಾಸೋದ್ಯಮ ರೋಪ್‌ವೇಗಳ ವಿಧೇಯಕ, 2024ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ (ಎರಡನೇ ತಿದ್ದುಪಡಿ) ವಿಧೇಯಕ ಹಾಗೂ 2024ನೇ ಸಾಲಿನ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ ಮಂಡಿಸಲಾಯಿತು.

ಅಲ್ಲದೆ, 2024ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಚಾಣಕ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024ನೇ ಸಾಲಿನ ಕರ್ನಾಟಕ ಅಂತರ್ಜಲ ಅಭಿವೃದ್ಧಿ ಮತ್ತು ನಿರ್ವಹಣೆಯ ವಿನಿಮಯ ಹಾಗೂ ನಿಯಂತ್ರಣ (ತಿದ್ದುಪಡಿ) ವಿಧೇಯಕಗಳನ್ನು ಮಂಡಿಸಲಾಗಿದೆ. ಸಚಿವರುಗಳಾದ ಜಿ.ಪರಮೇಶ್ವರ್ , ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಸಂತೋಷ ಲಾಡ್, ಡಾ.ಎಂ.ಸಿ.ಸುಧಾಕರ್ ಅವರು ಮಸೂದೆಗಳನ್ನು ಮಂಡಿಸಿದರು.

ಭಾರತೀಯ ರೈಲ್ವೆಯೊಂದಿಗೆ ಕೊಂಕಣ ರೈಲ್ವೆ ವಿಲೀನ: ಮಂಗಳೂರು – ಮುಂಬೈ ನಡುವೆ ನಿರ್ಮಿಸಿರುವ ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೆಯಲ್ಲಿ ವಿಲೀನಗೊಳಿಸಲು ರಾಜ್ಯ ಸರ್ಕಾರದ ಸಂಪೂರ್ಣ ಸಹಮತವಿದ್ದು, ಈ ನಿಟ್ಟಿನಲ್ಲಿ ಪತ್ರ ವ್ಯವಹಾರ ನಡೆಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ವಿಧಾನಸಭೆಯ ಗಮನಸೆಳೆಯುವ ಸೂಚನೆಗಳಡಿ ಶಾಸಕರುಗಳಾದ ಕಿರಣ್ ಕುಮಾರ್ ಕೊಡ್ಗಿ ಮತ್ತು ವಿ.ಸುನೀಲ್ ಕುಮಾರ್ ಅವರ ಗಮನ ಸೆಳೆಯುವ ಸೂಚನೆಗೆ ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರ ಪರವಾಗಿ ಉತ್ತರ ನೀಡಿದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು, "ಕೊಂಕಣ ರೈಲ್ವೆ ಈ ಹಿಂದೆಯೇ ಭಾರತೀಯ ರೈಲ್ವೆಯೊಂದಿಗೆ ವಿಲೀನವಾಗಬೇಕಿತ್ತು. ಆದರೆ ನಷ್ಟದಲ್ಲಿ ನಡೆಯುತ್ತಿರುವ ಕಾರಣ, ಈ ಭಾಗದ ಯಾವುದೇ ರೈಲ್ವೆ ನಿಲ್ದಾಣಗಳು ಕೂಡ ಅಭಿವೃದ್ಧಿಯಾಗಲಿಲ್ಲ. ಕರ್ನಾಟಕದ ಪಾಲಿನ 270 ಕೋಟಿ ರೂ.ಗಳ ಷೇರು ಮೊತ್ತವನ್ನು ಯಾವ ರೀತಿ ಹೊಂದಾಣಿಕೆ ಮಾಡಬೇಕು ಎಂಬುದರ ಬಗ್ಗೆ ಈಗಾಗಲೇ ಪತ್ರ ವ್ಯವಹಾರ ನಡೆಸಲಾಗಿದೆ" ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, "ಭಾರತೀಯ ರೈಲ್ವೆಯೊಂದಿಗೆ ವಿಲೀನ ಆದಲ್ಲಿ, ಹೊಸ ರೈಲುಗಳು ಕೂಡ ಬರಲಿದ್ದು, ರೈಲು ನಿಲ್ದಾಣಗಳು ಕೂಡ ಸುಧಾರಣೆ ಕಾಣಲಿವೆ. ವಿಲೀನ ಪ್ರಕ್ರಿಯೆ ಬಗ್ಗೆ ರಾಜ್ಯ ಸರ್ಕಾರ ಕೊಂಕಣ ರೈಲ್ವೆಗೆ ಪತ್ರ ವ್ಯವಹಾರ ಮಾಡಿದ್ದು, ಅವರಿಂದ ಉತ್ತರ ಬರುವ ನಿರೀಕ್ಷೆಯಲ್ಲಿದ್ದೇವೆ" ಎಂದು ತಿಳಿಸಿದರು.

## ಅರ್ಹರ ಬಿಪಿಎಲ್ ಪಡಿತರ ಚೀಟಿ ರದ್ದು ಮಾಡಲ್ಲ, ಹೊಸ ಕಾರ್ಡ್ ವಿತರಿಸಲು ಕ್ರಮ

**ಬೆಳಗಾವಿ:** ಸರ್ಕಾರ ಯಾವುದೇ ಅರ್ಹ ಬಿಪಿಎಲ್ ಕುಟುಂಬದವರ ಪಡಿತರ ಚೀಟಿ ರದ್ದು ಪಡಿಸಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಸಚಿವ ಕೆ.ಹೆಚ್ . ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.



ವಿಧಾನಸಭೆಯಲ್ಲಿ ಬಂಟ್ವಾಳ ಕ್ಷೇತ್ರದ ಶಾಸಕ ರಾಜೇಶ್ ನಾಯಕ್ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, "ರಾಜ್ಯದಲ್ಲಿ ಬಿಪಿಎಲ್ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ 2017ರಲ್ಲಿ ಮಾನದಂಡಗಳನ್ನು ರೂಪಿಸಲಾಗಿದೆ. ಇದರ ಅನ್ವಯ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು, ಮಂಡಳಿ, ನಿಗಮ, ಸ್ವಾಯತ್ತ ಸಂಸ್ಥೆಗಳ ನೌಕರರು ಬಿಪಿಎಲ್ ಕಾರ್ಡ ಪಡೆಯುವಂತಿಲ್ಲ. ಇದರೊಂದಿಗೆ ಆದಾಯ ತೆರಿಗೆ, ಸೇವಾ ತೆರಿಗೆ, ಜಿಎಸ್‌ಟಿ, ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು ಸಹ ಬಿಪಿಎಲ್ ನಡಿ ಬರುವುದಿಲ್ಲ" ಎಂದರು.

"ಗ್ರಾಮೀಣ ಪ್ರದೇಶಗಳಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ, ನಗರ ಪ್ರದೇಶಗಳಲ್ಲಿ 1,000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆ ಹೊಂದಿರುವವರು, ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರ್ಯಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವವರು, ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳನ್ನು ಬಿಪಿಎಲ್ ಪಡಿತರ ಚೀಟಿಯಿಂದ ಹೊರಗಿಡಲಾಗುವುದು" ಎಂದು ತಿಳಿಸಿದರು.

"ಆರೋಗ್ಯಕ್ಕೆ ಸಂಬಂಧಿಸಿದ ಕಾರ್ಡುಗಳನ್ನು ಆಯಾ ಜಿಲ್ಲೆಯ ಅಧಿಕಾರಿಗಳು ನೀಡುತ್ತಾರೆ. ಕೇಂದ್ರ ಸರ್ಕಾರದ ಮಾನದಂಡಗಳ ಅಡಿಯಲ್ಲಿಯೇ ಕಾರ್ಡ್ ಗಳನ್ನು ಪರಿಷ್ಕರಣೆ ಮಾಡಲಾಗಿದೆ. ಯಾವುದೇ ಅನಗತ್ಯ ಗೊಂದಲ ಬೇಡ. ರದ್ದಾದ ಆರೋಗ್ಯ ಸಂಬಂಧ ಬಿಪಿಎಲ್ ಕಾರ್ಡುಗಳನ್ನು ತಕ್ಷಣ ಪುನರ್ ಸ್ಥಾಪಿಸಲಾಗಿದೆ. ಯಾವುದೇ ಅರ್ಹರಿಗೆ ಗೊಂದಲವಾಗದಂತೆ ಕಾರ್ಡ್‌ಗಳನ್ನು ವಿತರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ" ಎಂದು ತಿಳಿಸಿದರು.

**ಹೊಸ ಬಿಪಿಎಲ್ ಕಾರ್ಡ್ ವಿತರಿಸಲು ಕ್ರಮ:** "ಪೋಷಕರ ಆದಾಯ ಹೆಚ್ಚಿದ್ದರೂ, ಕುಟುಂಬದ ಸದಸ್ಯರು ಪ್ರತ್ಯೇಕವಾಗಿ ವಾಸವಿದ್ದು ಬಿಪಿಎಲ್ ಪಡಿತರ ಚೀಟಿ ಪಡೆಯಲು ಅರ್ಹರಿದ್ದಲ್ಲಿ ಪಡಿತರ ಚೀಟಿ ನೀಡಲು ಕ್ರಮವಹಿಸಲಾಗುವುದು. ಅರ್ಹ ಕುಟುಂಬ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ರಾಜ್ಯದಲ್ಲಿ 03 ಲಕ್ಷ ಕಾರ್ಡ್‌ಗಳನ್ನು ಪುನರ್ ಸ್ಥಾಪಿಸುವ ಕಾರ್ಯ ಮಾಡಲಾಗಿದೆ. ಆದಾಯ ತೆರಿಗೆ ಪಾವತಿಸುವ 98,473 ಪಡಿತರ ಚೀಟಿಗಳು ಹಾಗೂ 4036 ಸರ್ಕಾರಿ ನೌಕರರು ಪಡೆದಿದ್ದ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ. ಯಾವುದೇ ಅರ್ಹ ಬಿಪಿಎಲ್ ಕಾಡ್ ದಾರರಿಗೆ ತೊಂದರೆಯಾಗದಂತೆ ಈಗಾಗಲೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ತಹಶೀಲ್ದಾರ್ ನೀಡುವ ಆದಾಯ ಪ್ರಮಾಣ ಪತ್ರ ಮತ್ತು ಇನ್ನಿತರ ದಾಖಲೆಗಳನ್ನು ಪಡೆದು ಸ್ಥಳ ಪರಿಶೀಲನೆ ಮಾಡಿ, ಹೊಸ ಬಿಪಿಎಲ್ ಕಾರ್ಡು ವಿತರಿಸಲು ಕ್ರಮ ವಹಿಸಲಾಗವುದು" ಎಂದು ಹೇಳಿದರು.

## ಕಬಡ್ಡಿ ಕ್ರೀಡಾ ಪಟುಗಳಿಗೆ ಜರ್ಸಿ ವಿತರಣೆ

ಚಿಕ್ಕಬಳ್ಳಾಪುರ: ಕೈಲಾದಷ್ಟು ಸಹಾಯ ಮಾಡಿ ಹತ್ತು ಹಲವು ಸಮಾಜ ಸೇವೆಗಳನ್ನು ಮಾಡುವ ಮುಖಾಂತರ ತಮ್ಮ ಸಾಮಾಜಿಕ ಕಳಕಳಿಯನ್ನು ಮುಂದುವರಿಸಿರುವ ಕೋವಿಡ್ ಸಂಧರ್ಬದಲ್ಲಿ ನಿರಂತರವಾಗಿ ಮೂವತ್ತು ದಿನಗಳ ಕಾಲ ತಮ್ಮ ಸ್ವಗ್ರಾಮದಲ್ಲಿ ಅನ್ನದಾನ ಮಾಡಿದ್ದ ಸಮಾಜ ಸೇವಕ ಶ್ರೀಧರ್ ಬಾಬು ಇಂದು ಕಬಡ್ಡಿ ಕ್ರೀಡಾ ಪಟುಗಳಿಗೆ ಹಾಗು ತರಬೇತಿದಾರರಿಗೆ ಜರ್ಸಿ ವಿತರಿಸಿದ್ದಾರೆ.

ಕೋಲಾರದಲ್ಲಿ ನಡೆಯಲಿರುವ ಅಮೇಚುರ್ ಕಬಡ್ಡಿ ಪಂದ್ಯಾವಳಿಗೆ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಚಿಕ್ಕಬಳ್ಳಾಪುರ ತಂಡಕ್ಕೆ ಅವರು ಇಂದು ಜರ್ಸಿ ವಿತರಿಸಿದ್ದು, ಶುಭಾಶಯಗಳು ತಿಳಿಸಿ ತಂಡಕ್ಕೆ ಗೆಲುವಾಗಲಿ ಎಂದರು.ಕ್ರೀಡಾ ಪಟುಗಳಿಗೆ ಪ್ರೌತ್ಸಾಹ ನೀಡಬೇಕು ಇದರಿಂದ ಅವರಲ್ಲಿ ಇನ್ನಷ್ಟು ಕ್ರೀಡಾ ಮನೋಭಾವ ಹೆಚ್ಚುತ್ತದೆ,ಇನ್ನು ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ದೈಹಿಕವಾಗಿ ಮಾನಸಿಕವಾಗಿ ಸದೃಢವಾಗಿರುವುದಲ್ಲದೆ ಆರೋಗ್ಯಕರ ಜೀವನ ಸಾಗಿಸಬಹುದು ದಿನ ನಿತ್ಯ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ರಾಜ್ಯಕ್ಕೆ ಒಳ್ಳೆಯ ಹೆಸರು ತಂದು ಕೊಡುವ ಜೊತೆಗೆ ದೇಶಕ್ಕೆ ಕೀರ್ತಿ ತರುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದರು. ಇನ್ನು ಹಲವಾರು ಶಾಲೆಗಳಿಗೆ ವಾಟರ್ ಫಿಲ್ಟರ್ ನೀಡಿದ್ದು ಪ್ರತಿ ವರ್ಷ ಮಕ್ಕಳಿಗೆ ಕಲಿಕಾ ಶಾಮಗ್ರಿಗಳನ್ನ ವರ್ಷಕ್ಕೆ ಆದಷ್ಟು ವಿತರಣೆ ಮಾಡುತ್ತಿದ್ದು ಸಮಾಜಕ್ಕೆ ಸಣ್ಣ ಸಹಾಯವೇ ಇರಲಿ ಮಾಡಿದರೆ ಅದರಲ್ಲಿ ಸಿಗುವ ತೃಪ್ತಿ ಬೇರೆ ಏನಲ್ಲು ಇಲ್ಲ ಎಂದರು.

ಜಿಲ್ಲಾ ಅಮೇಚುರ್ ಕಬಡ್ಡಿ ಸಮಸ್ತೆ ಜಿಲ್ಲಾದ್ಯಂತ ಕ್ರೀಡಾ ಪಟುಗಳಿಗೆ ಉಚಿತವಾಗಿ ತರಬೇತಿ ನೀಡಿ ಅವರಲ್ಲಿ ಅಡಗಿರುವ ಪ್ರತಿಭೆಯನ್ನು ಹೊರ ತರುವ ಎಲ್ಲ ಪ್ರಯತ್ನ ಮಾಡಿದ್ದೇವೆ ನಮ್ಮಲ್ಲಿ ತರಬೇತಿ ಪಡೆದ ಕಬಡ್ಡಿ ತಂಡ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ, ಉತ್ತಮ ಆಟ ಆಡಿ ಗೆಲವು ಸಾಧಿಸಿ ಜಿಲ್ಲೆಗೆ ಕೀರ್ತಿ ತರುತ್ತಾರೆ ಎಂದು ಭರವಸೆ ಇದೆ,ಚುನಾಯಿತ ಜನಪ್ರತಿನಿಧಿಗಳು ಕ್ರೀಡೆಗಳಿಗೆ ಹೆಚ್ಚಿನ ಪ್ರೌತ್ಸಾಹ ನೀಡಬೇಕು ಎಂದು ಇದೇ ಸಂದರ್ಭದಲ್ಲಿ ಡಾನ್ಸ್ ಶ್ರೀನಿವಾಸ್ ಮನವಿ ಮಾಡಿದರು.

## ಸುದ್ದಿ ಸಂಜೆ

### ಮುದ್ರಾಂಕ ಇಲಾಖೆ; ಕೋಟ್ಯಂತರ ರೂ. ವಂಚನೆ

ಬೆಳಗಾವಿ: ಮುದ್ರಾಂಕ ಮತ್ತು ನೋಂದಣಿ ಇಲಾಖೆಯಲ್ಲಿ ಸರ್ಕಾರಕ್ಕೆ ಅಗತ್ಯವಾಗಿ ಬರಬೇಕಾದ ಕೋಟ್ಯಂತರ ರೂ. ವರಮಾನ ವಂಚಿಸಲಾಗುತ್ತಿದ್ದು, ಇದನ್ನು ತಪ್ಪಿಸಲು ದಾಖಲೆಗಳೊಂದಿಗೆ ಪರಿಶೀಲನೆ ನಡೆಸುವ ವ್ಯವಸ್ಥೆಯೊಂದನ್ನು ರೂಪಿಸಬೇಕಾದ ಅಗತ್ಯತೆ ಇದೆ ಎಂದು ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರ ವರದಿ ತಿಳಿಸಿದೆ. ವಿಧಾನಸಭೆಯಲ್ಲಿ ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ವರದಿಯನ್ನು ಮಂಡಿಸಲಾಯಿತು. ಅದರಲ್ಲಿ 12 ಉಪ ನೋಂದಣಿ ಅಧಿಕಾರಿಗಳ ಕಚೇರಿಗಳಲ್ಲಿ 56 ಜಂಟಿ ಅಭಿವೃದ್ಧಿ ಒಡಂಬಡಿಕೆಗಳಲ್ಲಿ ದರಗಳನ್ನು ತಪ್ಪಾಗಿ ಅಳವಡಿಸಿಕೊಳ್ಳಲಾಗಿದೆ. ಇದರಿಂದ 10.26 ಕೋಟಿ ರೂ. ಮೊತ್ತದಷ್ಟು ಶುಲ್ಕ ಕಡಿಮೆ ಪ್ರಮಾಣದಲ್ಲಿ ವಿಧಿಸುವುದು ಗೊತ್ತಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. 50 ವರ್ಷಗಳ ಅವಧಿಗೆ ನೀಡಲಾದ ಗಣಿಗಾರಿಕೆ ಗುತ್ತಿಗೆಗಳನ್ನು 20 ಮತ್ತು 30 ವರ್ಷಗಳ ಅವಧಿಗೆ ಗುತ್ತಿಗೆಯಾಗಿ ಪರಿಗಣಿಸಲಾಗಿದೆ. ಇದರಿಂದ 13.33 ಕೋಟಿ ರೂ. ಗಳಷ್ಟು ಕಡಿಮೆ ಮೊತ್ತ ವಿಧಿಸಲಾಗಿದೆ. ಬೇಗೂರು ಉಪನೋಂದಣಿ ಅಧಿಕಾರಿ ಕಚೇರಿಯಲ್ಲಿ ಶೇ.5ರ ದರದ ಬದಲು ಕಡಿಮೆ ದರದಲ್ಲಿ ನೋಂದಣಿ ಮಾಡಿದ ಪರಿಣಾಮ 5.38 ಕೋಟಿ ರೂ. ನಷ್ಟವಾಗಿದೆ ಎಂದು ತಿಳಿಸಲಾಗಿದೆ. 3.36 ಕೋಟಿ ರೂ. ಅನಗತ್ಯ ವೆಚ್ಚ: ಭೂಮಿಯ ಲಭ್ಯತೆ ಖಚಿತಪಡಿಸಿಕೊಳ್ಳದೇ, ಅನುಷ್ಠಾನ ಏಜೆನ್ಸಿಗಳಿಗೆ ಹಣವನ್ನು ಬಿಡುಗಡೆ ಮಾಡಲಾಗಿದೆ. ಕಾಮಗಾರಿಗಳನ್ನು ವಿಳಂಬವಾಗಿ ಪ್ರಾರಂಭಿಸುವುದರಿಂದ ಬಡ್ಡಿ ಆದಾಯದ ಮೂಲಕ ಏಜೆನ್ಸಿಗಳಿಗೆ 2.56 ಕೋಟಿ ರೂ. ಅನಗತ್ಯ ಲಾಭವಾಗಿದೆ. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಅಂತರ್ಜಾಲ ಸೇವೆಯನ್ನು ಒದಗಿಸುವಲ್ಲಿ ವಿಫಲವಾಗಿದ್ದು, ಅನಗತ್ಯವಾಗಿ 3.36 ಕೊಟಿ ರೂ. ವೆಚ್ಚವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಕ್ಷೇತ್ರ ನೀರಾವರಿ ಕಾಲುವೆಗಳನ್ನು ರಚಿಸಲು ಸಾಧ್ಯವಾಗದ ಕಾರಣ ನೀರಾವರಿಗೆ ಉದ್ದೇಶಿಸಲಾದ 2002ರ ರಾಜ್ಯ ಜಲ ನೀತಿಯನ್ನು ಸಾಧಿಸಲು ಸಾಧ್ಯವಾಗಿಲ್ಲ. ರಾಜ್ಯದಿಂದ ಸಮಗ್ರ ಯೋಜನೆಗಳನ್ನು ತಯಾರಿಸಿಲ್ಲ. ಟೆಂಡರ್‌ಗಳನ್ನು ಸಹ ಆಹ್ವಾನಿಸಿಲ್ಲ. ಭೂ ಸ್ವಾಧೀನಪಡಿಸಿಕೊಳ್ಳುವಲ್ಲಿ ವಿಳಂಬ ಧೋರಣೆಯಿಂದ ಲಭ್ಯ ಇರುವ ಹಣವನ್ನು ಬಳಕೆ ಮಾಡಿಕೊಳ್ಳಲು ಸಾಧ್ಯವಾಗಿಲ್ಲ ಎಂದು ತಿಳಿಸಿದೆ.

## ಎಸ್.ಎಂ.ಕೃಷ್ಣ ನನ್ನ ರಾಜಕೀಯ ಬೆಳವಣಿಗೆಗೆ ಕಾರಣ

**ಬೆಳಗಾವಿ:** ಎಸ್.ಎಂ.ಕೃಷ್ಣ ಅವರು ತಂದೆಯ ಸ್ಥಾನದಲ್ಲಿ ನಿಂತು ರಾಜಕೀಯವಾಗಿ ನನ್ನ ಬೆಳವಣಿಗೆಗೆ ಕಾರಣರಾದರು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಮಂಗಳವಾರ ನಿಧನರಾದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರೊಂದಿಗಿನ ಒಡನಾಟದ ಕುರಿತು ಇಂದು ಸದನದಲ್ಲಿ ಮಾತನಾಡಿದ ಅವರು, ಕೃಷ್ಣ ಅವರನ್ನು ಆಧುನಿಕ ಕರ್ನಾಟಕ ನಿರ್ಮಾಣದ ಮಹಾಶಿಲ್ಪಿ ಎಂದು ಬಣ್ಣಿಸಿದರು.

92 ವರ್ಷಗಳ ತುಂಬು ಜೀವನ ಸಾಗಿಸಿ ಎಸ್.ಎಂ.ಕೃಷ್ಣ ನಿಧನರಾಗಿದ್ದಾರೆ. ವಿವೇಕಾನಂದರ ವಾಣಿಯಂತೆ, ಸಾಧನೆ ಇಲ್ಲದೆ ಸಾಯುವುದು ಸಾವಿಗೆ ಅವಮಾನ, ಆದರ್ಶ ಇಲ್ಲದೇ ಬದುಕುವುದು ಬದುಕಿಗೆ ಅವಮಾನ. ರಾಜ್ಯದ ಅಭಿವೃದ್ಧಿಗೆ ಎಸ್.ಎಂ.ಕೃಷ್ಣ ಅವರು ಕೈಗೊಂಡ ಅಭಿವೃದ್ಧಿ ಕಾರ್ಯಗಳ ಕುರಿತಾದ ಬೃಹತ್ ಸಾಕ್ಷಿಗಳು ನಮ್ಮ ಕಣ್ಮುಂದಿವೆ ಎಂದರು.

ನಾನು ರಾಜಕೀಯವಾಗಿ ಗುರುತಿಸಿಕೊಂಡಿದ್ದು, ಮಾಜಿ ಮುಖ್ಯಮಂತ್ರಿ ಬಂಗಾರಪ್ಪನವರ ಜೊತೆಗೆ. ನನ್ನ ಮತ್ತು ಕೃಷ್ಣ ಅವರ ಸಂಬಂಧ ಬೇರೆ ಸ್ವರೂಪದಲ್ಲಿತ್ತು. ಬಂಗಾರಪ್ಪ ಹೊಸ ಪಕ್ಷ ಕಟ್ಟಿದಾಗ ನನ್ನನ್ನು ಕರೆಯಲಿಲ್ಲ. ಕಾಂಗ್ರೆಸ್‌ನಲ್ಲೇ ಉಳಿದುಕೊಂಡೆ. ಬಿಜೆಪಿಯವರು ಆಗ ನನ್ನನ್ನು ಕರೆಯಲಿಲ್ಲ. ಅಂದಿನಿಂದ ಎಸ್.ಎಂ.ಕೃಷ್ಣ ತಂದೆಯ ಸ್ಥಾನದಲ್ಲಿ ನಿಂತು ರಾಜಕೀಯವಾಗಿ ನನ್ನ ಬೆಳವಣಿಗೆಗೆ ಕಾರಣರಾದರು. ನಂತರದ ಸಂದರ್ಭದಲ್ಲಿ ಅವರ ಕುಟುಂಬದೊಂದಿಗೆ ಸಂಬಂಧ ಬೆಳೆಯಿತು ಎಂದು ಹೇಳಿದರು.

ಎಸ್.ಎಂ.ಕೃಷ್ಣ ಅವರು ತಂದೆ ಮಗನನ್ನು ಪೋಷಿಸುವಂತೆ ನನ್ನನ್ನು ಬೆಂಬಲಿಸಿದರು. ನನಗೂ ಅವರಿಗೂ ಒಂದೆರೆಡು ವಿಚಾರಗಳಲ್ಲಿ ಭಿನ್ನಾಭಿಪ್ರಾಯಗಳಿದ್ದವು. ಈಗಲೂ ಆ ನಿರ್ಧಾರಗಳು ಸರಿಯಲ್ಲ ಎಂದು ಹೇಳುತ್ತೇನೆ. ಉಳಿದಂತೆ ನಮ್ಮಿಬ್ಬರ ಸಂಬಂಧ ಅವಿನಾಭಾವ ಎಂದರು.

ಎಸ್.ಎಂ.ಕೃಷ್ಣ ಅವರ ಸಾವು ನನಗೆ ದುಃಖ ತಂದಿಲ್ಲ. ತುಂಬು ಜೀವನದಲ್ಲಿ ಮುರ್‍ನಾಲ್ಕು ತಿಂಗಳಷ್ಟೇ ಅವರು ಅನಾರೋಗ್ಯದಲ್ಲಿದ್ದರು. ಉಳಿದಂತೆ ಅವರ ಉಡುಪು, ಜೀವನಶೈಲಿ ಎಲ್ಲವೂ ವರ್ಣನೀಯವಾಗಿತ್ತು ಎಂದು ಹೇಳಿದರು.

ಎಸ್.ಎಂ.ಕೃಷ್ಣ ಅವರನ್ನು ರಾಜ್ಯಸಭಾ ಸದಸ್ಯರನ್ನಾಗಿ ಮಾಡುವಾಗ ನಾನು ಮತ್ತು ಟಿ.ಬಿ.ಜಯಚಂದ್ರ ದೆಹಲಿಗೆ ಹೋಗಿ ಪ್ರಧಾನಿ ಪಿ.ವಿ.ನರಸಿಂಹರಾವ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದೆವು. ಅಲ್ಲಿ ಸದಸ್ಯರಾಗಿದ್ದ ಜಿ.ವೈ. ಕೃಷ್ಣನ್ ಅವರ ಬದಲಾಗಿ ಎಸ್.ಎಂ.ಕೃಷ್ಣ ಅವರಿಗೆ ರಾಜ್ಯಸಭಾ ಟಿಕೆಟ್ ನೀಡಬೇಕೆಂಬುದು ನಮ್ಮ ಬೇಡಿಕೆಯಾಗಿತ್ತು. ಅದಕ್ಕೆ ಆರಂಭದಲ್ಲಿ ಪಿ.ವಿ.ನರಸಿಂಹರಾವ್ ಒಪ್ಪಲಿಲ್ಲ, ಅನಂತರ ಒಪ್ಪಿದರು ಎಂದು ಹಿಂದೆ ನಡೆದ ಘಟನೆಯನ್ನು ಮೆಲುಕು ಹಾಕಿದರು.



ಎಸ್.ಎಂ.ಕೃಷ್ಣ ಅವರು ಪಕ್ಷದ ಅಧ್ಯಕ್ಷರಾಗಿ ಪಾಂಚಜನ್ಯ ಮೊಳಗಿಸಿ ಅಧಿಕಾರಕ್ಕೆ ಬಂದರು. ನಾನು ಪ್ರದೇಶ ಕಾಂಗ್ರೆಸ್ ಅಧ್ಯಕ್ಷನಾದಾಗ ಅವರು ಮಾರ್ಗದರ್ಶನ ಮಾಡಿದ್ದರು. ಎಸ್.ಎಂ.ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದ ಬಜೆಟ್ 26 ಸಾವಿರ ಕೋಟಿ ರೂ ಇತ್ತು. ಈಗ 3.50 ಲಕ್ಷ ಕೋಟಿಗೆ ಏರಿಕೆಯಾಗಿದೆ. ಆಗ ಪಂಚಾಯಿತಿಗೆ ನೀಡಲಾಗುತ್ತಿದ್ದ ಅನುದಾನವನ್ನು 5 ಲಕ್ಷಕ್ಕೆ ಹೆಚ್ಚಿಸಿದರು. ರೈತರಿಗೆ ಶ್ರೀಗಂಧ ಬೆಳೆಯಲು ಅವಕಾಶ ಮಾಡಿಕೊಟ್ಟರು. ಅಬಕಾರಿ ಲಾಬಿಗೆ ಮಣಿಯದೆ ಪಾನೀಯ ನಿಗಮವನ್ನು ಸ್ಥಾಪಿಸಿದರು.

ಅವರೆಂದೂ ಸ್ವಾರ್ಥಕ್ಕೆ, ಸ್ನೇಹ ಸಂಬಂಧಕ್ಕೆ ಅಧಿಕಾರ ದುರ್ಬಳಕೆ ಮಾಡಿಕೊಂಡವರಲ್ಲ ಎಂಬುದಕ್ಕೆ ಇದೇ ಸಾಕ್ಷಿ. ವರನಟ ಡಾ.ರಾಜ್‌ಕುಮಾರ್ ಅಪಹರಣವಾದಾಗ ಮುಖ್ಯಮಂತ್ರಿಯಾಗಿದ್ದ ಕೃಷ್ಣ ಟೆನ್ಷನ್‌ನಲ್ಲಿದ್ದರು. ಆಗ ಪೊಲೀಸರಿಗೆ ಮುಕ್ತ ಅವಕಾಶ ಮಾಡಿಕೊಡದೆ ಸಂಧಾನದ ಮೂಲಕ ಪ್ರಯತ್ನ ಮಾಡಲಾಯಿತು ಎಂಬುದನ್ನು ಡಿ.ಕೆ.ಶಿವಕುಮಾರ್ ನೆನಪು ಮಾಡಿಕೊಂಡರು.

ದೇಶಕ್ಕೆ ಮಾದರಿಯಾದ ಐಟಿ ನೀತಿ, ಗ್ರಾಮ ಪಂಚಾಯಿತಿಗಳ ಅನುದಾನವನ್ನು 1 ಲಕ್ಷದಿಂದ 5 ಲಕ್ಷ ರೂ.ಗೆ ಏರಿಕೆ, ಜಿಲ್ಲಾ ಪಂಚಾಯಿತಿಗಳಿಗೆ ಹೆಚ್ಚಿನ ಅಧಿಕಾರ ನೀಡುವ ಬೇಲೂರು ಘೋಷಣೆ, ರೈತರಿಗೆ ಶ್ರೀಗಂಧ ಬೆಳೆಯಲು ಅವಕಾಶ, ಕರ್ನಾಟಕ ರಾಜ್ಯ ಪಾನೀಯ ನಿಗಮ ಸ್ಥಾಪನೆ, ಮಧ್ಯಾಹ್ನದ ಬಿಸಿಯೂಟ, ಬೆಂಗಳೂರು ಮೆಟ್ರೋ, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ, ಸರ್ಕಾರಿ ಶಾಲೆಗಳ ಅಭಿವೃದ್ಧಿ ಸೇರಿದಂತೆ ಹಲವು ಮಹತ್ತರ ಸಾಧನೆಗಳಿಗೆ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಕಾರಣೀಕರ್ತರಾಗಿದ್ದಾರೆ. ಶಿಕ್ಷಣ ಸುಸಂಸ್ಕೃತ ಬದುಕಿಗೆ ನಾಂದಿಯಾಗುತ್ತದೆ ಎಂದು ಅವರು ನಂಬಿದ್ದರು. ರಾಜ್ಯದಲ್ಲಿ ಶಿಕ್ಷಣ ವ್ಯವಸ್ಥೆ ಸುಧಾರಣೆಗೆ ಮುಂದಾದರು. ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯನವರಂತೆ ವಿಕಾಸಸೌಧ ಹಾಗೂ ಉದ್ಯೋಗ ಸೌಧಗಳನ್ನು ಸಹ ನಿರ್ಮಿಸಿದರು ಎಂದು ಹೇಳಿದರು.

ಮೆಟ್ರೋ ರೈಲು ಯೋಜನೆ ಜಾರಿಗೆ ತರಲು ಕೂಡ ಅವರೂ ಕಾರಣಕರ್ತರಾಗಿದ್ದರು ಎಂದು ಡಿ.ಕೆ.ಶಿವಕುಮಾರ್ ಹೇಳಿದರು. ಶಾಲೆ ಬಿಡುವ ಮಕ್ಕಳನ್ನು ಮರಳಿ ತರುವ ಉದ್ದೇಶದಿಂದ ಮಧ್ಯಾಹ್ನದ ಬಿಸಿಯೂಟ ಯೋಜನೆ ಪ್ರಾರಂಭಿಸಿದರು. ನಾನು ವಿರೋಧ ಪಕ್ಷದ ನಾಯಕ ಸ್ಥಾನ ಬೇಡ ಎಂದಾಗ ಬೈಯ್ದು ಬುದ್ಧಿಮಾತು ಹೇಳಿದರು.

ಅವರ ಆಡಳಿತಾವಧಿಯಲ್ಲಿ ಸಾಕ್ಷಿ ಬಿಟ್ಟುಹೋಗಿದ್ದಾರೆ. ಅವರ ಆದರ್ಶ ನಮಗೆ ದಾರಿದೀಪ. ಕಾವೇರಿ ವಿಚಾರದಲ್ಲಿ ಪಾದಯಾತ್ರೆ ಮಾಡಿ ಆನಂತರದ ಬೆಳವಣಿಗೆಯಲ್ಲಿ ರಾಜೀನಾಮೆ ಕೊಡುವುದಾಗಿ ಹೇಳಿದರು. ಅದನ್ನು ತಡೆದು ಮುಖ್ಯಮಂತ್ರಿ ಸ್ಥಾನದಲ್ಲೇ ಇರಿಸುವ ಪ್ರಯತ್ನ ಮಾಡಿದೆ. ನನಗೆ ಕೋಟು ಹಾಕುವುದನ್ನು ಕಲಿಸಿದವರೇ ಎಸ್.ಎಂ.ಕೃಷ್ಣ. ಶಿಸ್ತುಬದ್ಧ ಜೀವನ, ಸಂಸ್ಕಾರ, ಸಂಸ್ಕೃತಿ ಎಲ್ಲವೂ ಅವರಲ್ಲಿತ್ತು ಎಂದು ಹೇಳಿದರು.

# ವಿದ್ಯಾರ್ಥಿಗಳ ಅಂತಿಮ ದರ್ಶನ ಪಡೆದ ಶಾಸಕರು



**ಮುಳಬಾಗಿಲು** : ಮುರುಡೇಶ್ವರ ಬೀಚ್ ನಲ್ಲಿ ಮುಳುಗಿ ಸಾವನ್ನಪ್ಪಿದ್ದ ನಾಲ್ವರು ವಿದ್ಯಾರ್ಥಿಗಳ ಅಂತಿಮ ದರ್ಶನ ಪಡೆದ ಕೋಲಾರ ಶಾಸಕ ಡಾ.ಕೊತ್ತೂರು ಜಿ. ಮಂಜುನಾಥ್.ಇದೇ ತಿಂಗಳ ಹತ್ತರಂದು ಬಾಳಸಂದ್ರ ಬಳಿಯ ಮುರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸಕ್ಕೆ ಹೋಗಿದ್ದು ಅದರಲ್ಲಿ ನಾಲ್ವರು ವಿದ್ಯರ್ಥಿನಿಯರು ಸಮುದ್ರದ ಅಲೆಗಳಿಗೆ ಸಿಲುಕಿ ಸಾವನ್ನಪ್ಪಿದ್ದು ಇಂದು ಅವರ ಮೃತ ದೇಹಗಳನ್ನು ಅವರ ಸ್ವಂತ ಊರುಗಳಿಗೆ ತರಲಾಗಿತ್ತು. ಇದೇ ತಾಲೂಕಿನವರಾದ ಶಾಸಕರು ಶ್ರಾವಂತಿ, ವಂದನಾ, ಲಾವಣ್ಯ ಹಾಗೂ ದೀಕ್ಷಾರ ಮನೆಗಳಿಗೆ ಬೇಟಿ ನೀಡಿ ಅವರ ಪೋಷಕರಿಗೆ ಸಾಂತ್ವನ ಹೇಳಿದರು.

ನಾವು ಭವಿಷ್ಯದ ಅಧಿಕಾರಿಗಳನ್ನು ಕಳೆದುಕೊಂಡಿದ್ದೇವೆ ಇಂತಹ ಶಾಲೆಗಳಲ್ಲಿ ಓದುವ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆ ಬರೆದು ಬಂದಿರುವ ಪ್ರತಿಭಾವಂತರು ಮುಂದೆ ಇವರು ಐಎಎಸ್, ಐಪಿಎಸ್, ಐ ಆರ್ ಎಸ್, ಡಾಕ್ಟರ್ ಅಥವಾ ಇಂಜಿನಿಯರ್ ಇಲ್ಲವೇ ಮತ್ತ್ಯಾವುದೋ ಅಧಿಕಾರಿಗಳು ಆಗುತ್ತಿದ್ದರೇನೋ ಆದರೇ ನಾವು ಅವರನ್ನು ಕಳೆದುಕೊಂಡಿದ್ದು ತುಂಬಾ ನೋವಿನ ಸಂಗತಿ.ನಾನು ಕಳೆದ ಹದಿನಾಲ್ಕು ವರ್ಷಗಳಿಂದ ಶಾಲಾ ಪ್ರವಾಸ, ಶಬರಿಮಲೆ ಮತ್ತು ಓಂ ಶಕ್ತಿ ಯಾತ್ರೆಗೆ ಬಸ್ ವ್ಯವಸ್ಥೆ ಮಾಡುವಾಗ ಮೊದಲೇ ಬಿಇಓಗೆ ಪತ್ರ ಬರೆದು ಈಜು ಕೊಳ, ಸಮುದ್ರ ಮುಂತಾದ ಕಡೆ ಇಳಿಯದಂತೆ ದೇವಾಲಯ, ವಿಶ್ವವಿದ್ಯಾಲಯ ಹಾಗೂ ಅರಣ್ಯ ಅಧಿಕಾರಿಗಳ ಅನುಮತಿಯೊಂದಿಗೆ ಅರಣ್ಯ ವೀಕ್ಷಣೆಗೆ ಅವಕಾಶ ನೀಡಲು ತಿಳಿಸಿ ಪ್ರವಾಸಕ್ಕೆ ಕಳುಹಿಸುತ್ತಿದ್ದೆ ಆದರೇ ಶಾಲಾ ಸಿಬ್ಬಂದಿಯ ಬೇಜವಾಬ್ದಾರಿ ಇಲ್ಲಿ ಕಾಣುತ್ತಿದೆ ಹಾಗೆಯೇ ಪ್ರವಾಸೋದ್ಯಮ ಇಲಾಖೆಯೂ ಇಂತಹ ಸ್ಥಳಗಳಲ್ಲಿ ಬೇಲಿ ಹಾಕಬೇಕು. ಈ ದುರಂತದ ಬಗ್ಗೆ ತುಂಬಾ ನೋವನ್ನು ವ್ಯಕ್ತಪಡಿಸಿರುವ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಹಾಗೂ ಮಹದೇವಪ್ಪ ರವರು ನಮ್ಮ ಸರ್ಕಾರದ ವತಿಯಿಂದ ಪ್ರತಿಯೊಬ್ಬ ವಿದ್ಯಾರ್ಥಿಗೂ 5 ಲಕ್ಷ ರೂಪಾಯಿಗಳನ್ನು ಪರಿಹಾರವಾಗಿ ಘೋಷಣೆ ಮಾಡಿದ್ದಾರೆ. ಸ್ಥಳೀವಾಗಿ ಸಹಕಾರ ನೀಡಿದ ಮಾಂಕಾಳ್ ವೈದ್ಯ, ಶಾಸಕರು ಹಾಗೂ ಎಸ್ ಪಿ ನಾರಾಯಣ ಸ್ವಾಮಿ ಮುಂತಾದವರು ತುಂಬಾ ಸಹಾಯ ಮಾಡಿದ್ದಾರೆ ಎಂದರು.

ಮುಖಂಡರು ವಿ.ಆದಿನಾರಾಯಣ ಮೃತಪಟ್ಟ ನಾಲ್ಕು ವಿದ್ಯಾರ್ಥಿಗಳಿಗೆ ತಲಾ 50 ಸಾವಿರ ರೂಗಳ ಪರಿಹಾರ ಹಣವನ್ನು ಘೋಷಣೆ ಮಾಡಿದರು ಮತ್ತು ಪ್ರವಾಸಕ್ಕೆ ಹೋಗಬೇಕು ಆದರೇ ಅಲ್ಲಿ ಆದಷ್ಟು ಮುಂಜಾಗ್ರತೆ ವಹಿಸಿ ಇಲ್ಲವಾದರೆ ಇಂತಹ ದುರಂತ ಸಂಭವಿಸತ್ತೆ. ಅಲ್ಲದೇ ಆ ಮಕ್ಕಳ ಪೋಷಕರಿಗೆ ಧೈರ್ಯ ಹೇಳಿ ಅವರಿಗೆ ಈ ದುಃಖವನ್ನು ಭರಿಸುವ ಶಕ್ತಿ ದೇವರು ನೀಡಲಿ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಅಪೇಕ್ಸ್ ಬ್ಯಾಂಕ್ ನಿರ್ದೇಶಕರು ಎಂ.ಸಿ ನೀಲಕಂಠೇಗೌಡ, ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಆರ್ ಆರ್ ರಾಜೇಂದ್ರ ಗೌಡ, ಕಾಂಗ್ರೆಸ್ ನಗರ ಅಧ್ಯಕ್ಷ ಅಮಾನುಲ್ಲಾ ಖಾನ್,ಮುಖಂಡರು ಆಲಂಗೂರು ಶಿವಣ್ಣ, ಗುಜ್ಜನಹಳ್ಳಿ ಮಂಜುನಾಥ್, ಜಮ್ಮನಹಳ್ಳಿ ಕೃಷ್ಣಪ್ಪ, ಮಾಜಿ ಜಿ. ಪಂ. ಸದ್ಯಸರಾದ ಎಂ.ಗೊಲ್ಲಹಳ್ಳಿ ರಾಜಗೋಪಾಲ್, ಹೆಬ್ಬಣಿ ಆನಂದ ರೆಡ್ಡಿ, ವೇಣುಗೋಪಾಲ್ ರೆಡ್ಡಿ, ಶಂಕರ್ ರೆಡ್ಡಿ, ಹಾಗೂ ಇತರೆ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ನೀರುಪಾಲಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ತಲ 5 ಲಕ್ಷ ಚೆಕ್ ವಿತರಣೆ



**ಮುಳಬಾಗಿಲು:** ಕೋಲಾರ ಜಿಲ್ಲಾಧಿಕಾರಿಗಳಾದ ಅಕ್ರಮ ಪಾಷ.ಖಕ ನಿಖಿಲ್. ಕೋಲಾರ ಶಾಸಕ ಕೊತ್ತೂರ್ ಮಂಜುನಾಥ್. ಕಾಂಗ್ರೆಸ್ ಮುಖಂಡ ವಿ ಆದಿ ನಾರಾಯಣ. ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ .ನೀಲಕಂಠೇಗೌಡ ಮತ್ತು ಅನೇಕ ಅಧಿಕಾರಿಗಳು ಮುಳಬಾಗಿಲು ತಾಲ್ಲೂಕು ಪೂಜಾರ ಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಮೃತ ವಿದ್ಯಾರ್ಥಿನಿಯ ಅಂತ್ಯಕ್ರಿಯೆ ಸಂದರ್ಭದಲ್ಲಿ ಅವರು ಕುಟುಂಬಕ್ಕೆ 5 ಲಕ್ಷ ಚೆಕ್ ಮುಖಾಂತರ ನಷ್ಟ ಪರಿಹಾರ ನೀಡಿ ಸಾಂತ್ವನ ಹೇಳಿದರು,

SFI ರಾಜ್ಯ ಸಮಿತಿ ಮತ್ತು ಜಿಲ್ಲಾ ಸಮಿತಿ ಅವರ ಕುಟುಂಬದ ಜೊತೆ ನಾಲ್ಕು ಮೃತ ಹೆಣ್ಣುಮಕ್ಕಳು ನ್ಯಾಯಕ್ಕಾಗಿ ಹೋರಾಡುವುದಕ್ಕೆ SFI ಸದಾಕಾಲವೂ ನಿಲ್ಲುತ್ತವೆ,

ಈ ಸಂದರ್ಭದಲ್ಲಿ ಖಈಖ ರಾಜ್ಯಾಧ್ಯಕ್ಷರು ಅಂಬ್ಲಿಕಲ್ ಎನ್ ಶಿವಪ್ಪ, ರಾಜ್ಯ ಜಂಟಿ ಕಾರ್ಯದರ್ಶಿ ಸುರೇಶ್ ಬಾಬು,ಜಿಲ್ಲಾ ಉಪಾಧ್ಯಕ್ಷರು ಶಶಿಕುಮಾರ್,ತಾಲ್ಲೂಕು ಅಧ್ಯಕ್ಷರು ಅರ್ಚನಾ, ಕಾರ್ಯದರ್ಶಿ ಅಜಯ್, ತಾಲ್ಲೂಕು ಸಹಕಾರ್ಯದರ್ಶಿ ಸುಭಾಷ್ ಮತ್ತು ಸಮಿತಿ ಸದಸ್ಯರು ನಾಗೇಶ, ಇನ್ನು ಹಲವಾರು ಮುಖಂಡರು ಹಾಜರಿದ್ದರು

## ಶ್ರೀ ಕೆರೆ ಆಂಜನೇಯಸ್ವಾಮಿಗೆ ಹೋಮ ಹವನ



**ಕೆ.ಆರ್.ಪುರ:** ಕಷ್ಟಕಾಲದಲ್ಲಿ ಧೈರ್ಯ, ಸಾಮರ್ಥ್ಯಕ್ಕೆ ಹೆಸರಾದ ಹನುಮಂತನನ್ನು ನೆನೆದರೆ ಧೈರ್ಯದಿಂದ ಮುನ್ನುಗ್ಗಬಹುದು ಎಂಬ ನಂಬಿಕೆಯಿಂದ ಎಂದು ಶ್ರೀಕೆರೆ ಆಂಜನೇಯಸ್ವಾಮಿ ಭಕ್ತ ಮಂಡಳಿ ಸೇವಾ ಸಮಿತಿ ಟ್ರಸ್ಟಿನ ಅಧ್ಯಕ್ಷ ಪರಿಸರ ಮಂಜು ತಿಳಿಸಿದರು.

ಮಹದೇವಪುರ ಕ್ಷೇತ್ರದ ಬೆಳ್ಳಂದೂರು ವಾರ್ಡಿನ ಯಮಲೂರು ಗ್ರಾಮದಲ್ಲಿ ಹನುಮ ಜಯಂತಿ ಪ್ರಯುಕ್ತ ಶ್ರೀ ಕೆರೆ ಆಂಜನೇಯಸ್ವಾಮಿಗೆ ಹೋಮ ಹವನವನ್ನು ಸಲ್ಲಿಸಿ, ವಿಶೇಷ ಪೂಜೆಯಲ್ಲಿ ಭಾಗಿಯಾಗಿ ಮಾತನಾಡಿದರು.

ಕೇವಲ ಹನುಮಜನಂತಿಯೊಂದೇ ಅಲ್ಲದೇ ಕಷ್ಟಕಾಲದಲ್ಲಿ ಧೈರ್ಯ, ಸಾಮರ್ಥ್ಯಕ್ಕೆ ಹೆಸರಾದ ಹನುಮಂತನನ್ನು ನೆನೆದರೆ ಧೈರ್ಯದಿಂದ ಮುನ್ನುಗ್ಗಬಹುದು ಎಂದರು.

ಹನುಮ ಜಯಂತಿಯ ದಿನದಂದು ಶ್ರೀರಾಮ ಮತ್ತು ಮಾತೆ ಸೀತೆಗೂ ಪೂಜೆ ಸಲ್ಲಿಸಲಾಗುತ್ತದೆ. ಶ್ರೀರಾಮ ರಕ್ಷಾ ಮಂತ್ರವನ್ನೂ ಪಠಿಸಲಾಗುತ್ತದೆ. ಬ್ರಹ್ಮಚರ್ಯ ವ್ರತವನ್ನು ಪಾಲಿಸಲಾಗುತ್ತದೆ ಎಂದು ನುಡಿದರು.

ಇದೇವೇಳೆ ಅನ್ನದಾನ, ಮಹಾಮಂಗಳಾರತಿ, ಹೋಮ ಹಾಗೂ ಭಕ್ತರಿಂದ ಹನುಮಾನ್ ಚಾಲೀಸ್ ಪಠಿಸಿ ಭಗವಂತನಲ್ಲಿ ಪ್ರಾರ್ಥನೆ ಸಲ್ಲಿಸಿದರು. ಶ್ರೀಕೆರೆ ಆಂಜನೇಯಸ್ವಾಮಿ ಭಕ್ತ ಮಂಡಳಿ ಸೇವಾ ಸಮಿತಿ ಟ್ರಸ್ಟಿನ ಉಪಾಧ್ಯಕ್ಷ ಶಿವಪ್ಪ, ಪದಾಧಿಕಾರಿಗಳಾದ ನಾರಾಯಣಪ್ಪ, ಪ್ರೇಮ್ ಕುಮಾರ್, ಸುರೇಶ್, ಹೇಮಾಶ್ರೀ, ಪ್ರವೀಣ್ ಸ್ವಾಮಿ, ಪವಾನ್ ಸ್ವಾಮಿ ಸೇರಿದಂತೆ ಮತ್ತಿತರರ ಉಪಸ್ಥಿತರಿದ್ದರು.

# ಕಟಗೊಂಡ್ಯಾಕ ಶೆಟಗೊಂಡ್ಯಾಕ ನಾಟಕದಲ್ಲಿ ಹರೀಶ್




**ಕುಕನೂರು** : ಗುದ್ನೇಶ್ವರ ಜಾತ್ರೆಯ ಅಂಗವಾಗಿ ಕುಕನೂರು ಪಟ್ಟಣದ ಕೆ ಈ ಬಿ ರಸ್ತೆಯ ಜಾಗದಲ್ಲಿ ಇಂದಿನಿಂದ ಪ್ರಾರಂಭವಾದ ಸಿದ್ದಲಿಂಗೇಶ್ವರ ನಾಟ್ಯ ಸಂಘದ ಕಟಗೊಂಡ್ಯಾಕ, ಶೆಟಗೊಂಡ್ಯಾಕ ಸಾಮಾಜಿಕ ನಾಟಕದಲ್ಲಿ ಕಾಮಿಡಿ ಕಿಲಾಡಿಗಳು ಖ್ಯಾತಿಯ ಹರೀಶ್ ಹಿರಿಯೂರು ಅವರ ಅಭಿನಯ ನೋಡುಗರನ್ನು ಸೆಳೆಯುತ್ತಿದೆ.

ಈಗಾಗಲೇ ಕಾಮಿಡಿ ಕಿಲಾಡಿಗಳು ರಿಯಾಲಿಟಿ ಶೋ ನಲ್ಲಿ ವಿನ್ನರ್ ಆಗಿರುವ ಹರೀಶ್ ಹಿರಿಯೂರು ಉತ್ತರ ಕರ್ನಾಟಕದ ಶೈಲಿಯ ಹಾಸ್ಯದೊಂದಿಗೆ ತಮ್ಮದೇ ಅಭಿನಯದಿಂದ ನಾಡಿನೆಲ್ಲೆಡೆ ಮನೆ ಮಾತಾಗಿದ್ದಾರೆ.

ಸದ್ಯ ಕುಕನೂರು ಪಟ್ಟಣದಲ್ಲಿ ಹಾಕಿರುವ ಸಿದ್ದಲಿಂಗೇಶ್ವರ ನಾಟಕ ಕಂಪನಿಯಿಂದ ಸಾಮಾಜಿಕ, ಕಾಮಿಡಿ ಪ್ರಧಾನ ಪಾತ್ರದಲ್ಲಿ ಹರೀಶ್ ಅಭಿನಯಿಸಿದ್ದಾರೆ.

ಕುಕನೂರು ತಾಲೂಕು ಜನತೆಯು ರಂಗಭೂಮಿಯ ಕಲಾವಿದರನ್ನು ಯಾವಾಗಲೂ ಪೋಷಿಸಿ ಬೆಳೆಸಿದ್ದಾರೆ. ಈಗಲೂ ಸಹ ಪ್ರೋತ್ಸಾಹ ಕೊಡುತ್ತಾರೆ ಎಂದು ನಾಟಕ ಕಂಪನಿ ಸಂಚಾಲಕ ಕುಮಾರ್ ಶಂಕರ್ ಅರಳಿಹಳ್ಳಿ ಹೇಳಿದರು.



**ಇಂದು ಶ್ರೀ ಶ್ರೀ ಶ್ರೀ ಹನುಮ ಜಯಂತಿ ಪ್ರಯುಕ್ತ ಕಾಮಾಕ್ಷಿಪಾಳ್ಯದ ಮಾರುತಿ ನಗರದ ಕಾರ್ಯಸಿದ್ಧಿ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಹಮ್ಮಿಕೊಂಡಿದ್ದ ಹೋಮ ಹವನ ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ಶಾಸಕರಾದ ಕೆ ಗೋಪಾಲಯ್ಯ ರವರು ಕುಟುಂಬ ಸಮೇತರಗಿ ಪಾಲ್ಗೊಂಡು ಹೂವಿನ ಪಲ್ಲಕ್ಕಿಯನ್ನು ಹೊತ್ತು ದೇವರ ಕೃಪೆಗೆ ಪಾತ್ರರಾದರು. ಕಾರ್ಯಕ್ರಮದಲ್ಲಿ ಮಾಜಿ ಉಪ ಮೇಯರ್ ಹೇಮಲತಾ ಗೋಪಾಲಯ್ಯ ರಂಗಸ್ವಾಮಣ್ಣ ಡಾ, ಮಂಜುನಾಥ್ ಗೌಡ ಕಿರಣ್ ಸೇರಿದಂತೆ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು, ಈ ಸಂದರ್ಭದಲ್ಲಿ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.**

## ಸುದ್ದಿ ಸಂಜೆ

### ಸಮ್ಮೇಳನಕ್ಕೆ ಸುನಿಲ್ ಆಯ್ಕೆ



ನಾಗೊಂಡಹಳ್ಳಿ ಗ್ರಾಮದ ಉಪನ್ಯಾಸಕ ಯುವ ಕವಿ ಸುನಿಲ್ ಈ ಬಾರಿ ಮಂಡ್ಯದಲ್ಲಿ ಜರುಗಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಗೆ ಆಯ್ಕೆಯಾಗಿದ್ದಾರೆ. ನಾಗೊಂಡಹಳ್ಳಿ ಸುನಿಲ್ ಪ್ರಸ್ತುತ ಶಿರಾ ನಗರದ ಪ್ರತಿಷ್ಠಿತ ಪ್ರೆಸಿಡೆನ್ಸಿ ಕಾಲೇಜಿನಲ್ಲಿ ಉಪನ್ಯಾಸಕನಾಗಿ ಸೇವೆ ಸಲ್ಲಿಸುತ್ತಾ ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡು ಈಗಾಗಲೇ ಎರಡು ಕೃತಿಗಳನ್ನು ಪ್ರಕಟಗೊಳಿಸಿದ್ದು, ಮೂರನೇ ಕೃತಿ ಕಥಾ ಸಂಕಲನ ಮುದ್ರಣದ ಅಂಚಿನಲ್ಲಿದೆ. ನಾಗೊಂಡಹಳ್ಳಿ ಸುನಿಲ್ ಅವರನ್ನು ಕಾಲೇಜಿನ ಪ್ರಾಂಶುಪಾಲರಾದ ಸುಬ್ರಹ್ಮಣ್ಯ ಡಿ.ಕೆ ಅವರು ಅಭಿನಂದಿಸಿದ್ದಾರೆ..

### ಪೊಲೀಸರ ಅಥಿತಿ ಆದ ಡ್ರೋನ್ ಪ್ರತಾಪ್

ಮಧುಗಿರಿ: ರೈತರ ಕೃಷಿ ಹೊಂಡದಲ್ಲಿ ಸೋಡಿಯಂ ಬಾಂಬ್ ಬ್ಲಾಸ್ಟ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹರಿಬಿಟ್ಟ ಬಿಗ್ ಬಾಸ್ ಖ್ಯಾತಿಯ ಡ್ರೋನ್ ಪ್ರತಾಪ್ ವಿರುದ್ಧ ತುಮಕೂರು ಜಿಲ್ಲೆ ಮಧುಗಿರಿ ತಾಲೂಕಿನ ಮಿಡಿಗೇಶಿ ಪೊಲೀಸ್ ಠಾಣೆಯಲ್ಲಿ ಸುಮೋಟೋ ಕೇಸ್ ದಾಖಲಾಗಿದ್ದು, ಪೊಲೀಸರು ಡ್ರೋನ್ ಪ್ರತಾಪ್ ನನ್ನು ಬಂಧಿಸಿದ್ದಾರೆ. ಇತ್ತೀಚೆಗೆ ಮಧುಗಿರಿ ತಾಲೂಕು ಮಿಡಿಗೇಶಿ ಪೊಲೀಸ್ ಠಾಣಾ ವ್ಯಾಪ್ತಿಯ ಜನಕಲೋಟಿ ಗ್ರಾಮದ ರೈತರೊಬ್ಬರ ಕೃಷಿ ಹೊಂಡದಲ್ಲಿ ಡ್ರೋನ್ ಪ್ರತಾಪ್ ವೈಜ್ಞಾನಿಕ ಪ್ರಯೋಗ ಮಾಡುತ್ತೇನೆ ಎಂದು ಸೋಡಿಯಂ ಮೆಟಲ್ ಎಂಬ ರಾಸಾಯನಿಕ ವಸ್ತುವನ್ನು ಬ್ಲಾಸ್ಟ್ ಮಾಡುವುದಾಗಿ ತಿಳಿಸಿ ಕೃಷಿ ಹೊಂಡದಲ್ಲಿ ಹಾಕಿ ಬ್ಲಾಸ್ಟ್ ಮಾಡುವುದಲ್ಲದೆ ಅದನ್ನು ತನ್ನ ಸಾಮಾಜಿಕ ಜಾಲತಾಣದ ಖಾತೆಯಲ್ಲಿ ಹಂಚಿಕೊಂಡಿದ್ದು, ಈ ವಿಡಿಯೋ ಪರಿಸರವಾದಿಗಳ ಕೆಂಗಣ್ಣಿಗೆ ಗುರಿಯಾಗಿತ್ತು.

# ತಲಕಾಯಲಬೆಟ್ಟ ಅಭಿವೃದ್ಧಿ ಹೊಂದಲಿ



ಶಿಡ್ಲಘಟ್ಟ : ದೇವರ ಸತ್ಕಾರ್ಯಕ್ಕೆ ಎಲ್ಲರೂ ಕೈಜೋಡಿಸಿ ಬರುವ ಭಕ್ತಾದಿಗಳಿಗೆ ಮೂಲಭೂತ ಸೌಲಭ್ಯಗಳನ್ನು ನೀಡಿ ಪವಿತ್ರ ಯಾತ್ರಾ ಸ್ಥಳವಾಗಿ ತಲಕಾಯಲಬೆಟ್ಟ ಅಭಿವೃದ್ಧಿ ಹೊಂದಲಿ ಎಂದು ಶ್ರೀಯದುಗಿರಿ ಯತಿರಾಜ ಮಠದ 41 ನೇ ಪೀಠಾಧಿಪತಿಗಳು ಆದ ಶ್ರೀಶ್ರೀಶ್ರೀ ಯದುಗಿರಿ ಯತಿರಾಜ ನಾರಾಯಣ ರಾಮಾನುಜಾ ಜಯರಾ ಸ್ವಾಮಿಗಳು ತಿಳಿಸಿದರು.

ತಾಲ್ಲೂಕಿನ ಶ್ರೀವೆಂಕಟರಮಣಸ್ವಾಮಿಯ ದೇವಾಲಯದಲ್ಲಿ ಪೂಜಾ ಕಾರ್ಯಕ್ರಮವನ್ನು ನೆರವೇರಿಸಿದ ನಂತರ ಬೆಟ್ಟದ ಮೇಲಿನ ದೇವಾಲಯಕ್ಕೆ ಮೆಟ್ಟಿಲು ಹತ್ತುವ ಮೂಲಕ ತೆರಳಿ ಭಕ್ತಾದಿಗಳಿಗೆ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಬೆಟ್ಟದ ಮೇಲಿನ ದೇವಾಲಯದ ದರ್ಶನಕ್ಕಾಗಿ ರಸ್ತೆ ಸೌಲಭ್ಯ ಒದಗಿಸಬೇಕು, ಹೆಚ್ಚಾಗಿ ರೂಪ್ ವೇ ಹಾಗು ವಿದ್ಯುತ್ ದೀಪಗಳ ನಿರ್ಮಾಣವಾದರೆ ವಯೋವೃದ್ಧರಿಗೆ ಬಹಳ ಅನುಕೂಲವಾಗುತ್ತದೆ ಎಂದು ಹೇಳಿದರು.

ತಿರುಪತಿಯ ತಿಮ್ಮಪ್ಪನ ದರ್ಶನಕ್ಕಾಗಿ ತೆರಳುವ ಭಕ್ತಾದಿಗಳಿಗೆ ಅನುಕೂಲ ಕಲ್ಪಿಸುವ ಸಲುವಾಗಿ ರಾಜ್ಯದ ನಾನಾ ಭಾಗಗಳಲ್ಲಿ ಶ್ರೀನಿವಾಸ ನೆಲೆಸಿದ್ದಾರೆ ಇಲ್ಲಿಯೂ ಸಹ ನೆಲೆಸಿದ್ದು ಭಕ್ತಾದಿಗಳು ದೇವರ ದರ್ಶನ ಪಡೆಯಲು ಮತ್ತಷ್ಟು ಅಭಿವೃದ್ಧಿಗೊಳಿಸಬೇಕು ಎಂದು ಮನವಿ ಮಾಡಿದರು.

ಕೆಪಿಸಿಸಿ ಸಂಯೋಜಕರು ಹಾಗು ಕಾಂಗ್ರೆಸ್ ಮುಖಂಡ ಬಿ.ವಿ.ರಾಜೀವ್ ಗೌಡ ಮಾತನಾಡಿ ತಲಕಾಯಲ ಬೆಟ್ಟದ ಬೆಟ್ಟದ ಮೇಲೆ ಇರುವ ದೇವಸ್ಥಾನಕ್ಕೆ 16 ಲಕ್ಷ ರೂ.ಗಳ ವೆಚ್ಚದಲ್ಲಿ ಮೂರು ನಾಮದ ಎಲ್.ಇ.ಡಿ. ದೀಪಗಳನ್ನು ಅಳವಡಿಸಲು ಕ್ರಮ ಕೈಗೊಂಡಿದ್ದು ಅದೇ ರೀತಿ ಭಕ್ತಾದಿಗಳ ಸಹಕಾರದಿಂದ ಮುಂಬರುವ ರಥೋತ್ಸವದ ವೇಳೆಯಲ್ಲಿ ರಸ್ತೆಯನ್ನು ನಿರ್ಮಿಸಿ ತಿರುಪತಿಯ ತಿರುಮಲದ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಮನ ಪೂರ್ವಕ ನುಡಿಗಳನ್ನು ನುಡಿದರು.

ಈ ಸಂದರ್ಭದಲ್ಲಿ ದೇವಾಲಯ ವ್ಯವಸ್ಥಾಪನ ಸಮಿತಿಯ ಅಧ್ಯಕ್ಷ ಡಿ.ಪಿ.ನಾಗರಾಜ್, ಸದಸ್ಯರಾದ ಶ್ರೀನಿವಾಸ್ ರೆಡ್ಡಿ, ಅಶ್ವಥ್ ನಾರಾಯಣ್ ರೆಡ್ಡಿ, ಮಾದೇನಹಳ್ಳಿ ರವಿ, ಮಂಜುಳಮ್ಮ, ರಾಧಮ್ಮ, ಸೀತಾರಾಮ್ , ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸಹನಾರಾಜೀವ್ ಗೌಡ,ಕಾಂಗ್ರೆಸ್ ಮುಖಂಡರಾದ ಆಂಜನಪ್ಪ(ಪುಟ್ಟು), ದೇವಾಲಯದ ಪ್ರಧಾನ ಅರ್ಚಕರಾದ ರಾಮಾನುಜ ಭಟ್ಟಾಚಾರ್ಯ, ಬೆಟ್ಟದ ಮೇಲಿನ ದೇವಸ್ಥಾನದ ಪ್ರಧಾನ ಆರ್ಚಕ ಯತಿರಾಜ್, ಸಾದಲಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಗೋವಿಂದರಾಜು,ದೊಡ್ಡತೇಕಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಗೋಪಾಲ್ ರೆಡ್ಡಿ ಮುಂತಾದವರು ಪಾಲ್ಗೊಂಡಿದ್ದರು.

## ರೋಗಗಳು ಬರುವ ಮುನ್ನ ಎಚ್ಚರ ವಹಿಸಿದರೆ ಆಸ್ಪತ್ರೆ ಮತ್ತು ಮಾತ್ರೆಗಳಿಂದ ದೂರ ಇರಬಹುದು




**ಮುಳಬಾಗಿಲು.** : ಸೆಹಗಲ್ ಫೌಂಡೇಶನ್ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ರೋಗಗಳು ಬರುವ ಮನ್ನ ಎಚ್ಚರ ವಹಿಸಿದರೆ ಆಸ್ಪತ್ರೆ ಮತ್ತು ಮಾತ್ರೆಗಳಿಂದ ದೂರವಿರಬಹುದು ಎಂದು ಜಿಲ್ಲಾ ಕೊಆಡಿನೇಟರ್ ರಮ್ಯ ರವರು ತಿಳಿಸಿದರು.

ಸೆಹಗಲ್ ಫೌಂಡೇಶನ್ ಹಾಗೂ ವಂಶೋದಯ ಆಸ್ಪತ್ರೆಯಿಂದ ವಿ ಗುಟ್ಟಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯವಾಗಿದ್ದರೆ, ಸುಖವಾಗಿ ಬಾಳಬಹುದು. ಇಲ್ಲವಾದರೆ ದುಡಿದ ಹಣವನ್ನು ಆಸ್ಪತ್ರೆಗೆ ಖರ್ಚುಮಾಡಬೇಕಾಗುತ್ತದೆ. ಆದ್ದರಿಂದ ರೋಗದ ಲಕ್ಷಣ ಕಾಣುವ ಮುನ್ನವೇ ಆಗ್ಗಾಗ್ಗೆ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರು ನೀಡುವ ಸಲಹೆ ಪಾಲಿಸಬೇಕು ಎಂದು ತಿಳಿಸಿದರು.

ಆರೋಗ್ಯ ಶಿಬಿರಗಳಿಂದ ಬಡವರಿಗೆ ಸಾಕಷ್ಟು ಅನುಕೂಲವಾಗುತ್ತದೆ. ಇಂತಹ ಶಿಬಿರಗಳು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ಆಯೋಜಿಸಬೇಕು ಎಂದು ತಿಳಿಸಿದರು. 100ಕ್ಕೂ ಹೆಚ್ಚು ರೋಗಿಗಳ ಆರೋಗ್ಯ ತಪಾಸಣೆ ನಡೆಸಲಾಯಿತು. ಹರೀಶ್ ವಂಶೋದಯ ಆಸ್ಪತ್ರೆ ನಾಗೇಶ್ ಗೌಡ ವೈದ್ಯರು ಆಯಿಷಾ ಮತ್ತು ಅರಸಿ ರಾಜಣ್ಣ ಹಾಗೂ ಸಿಬ್ಬಂದಿ ಇದ್ದರು.

# ಜನಮನದಲ್ಲಿ ಕೃಷ್ಣ ಪಥ



**ಮುಳಬಾಗಿಲು. :** ಶ್ರೀ ಎಸ್ ಎಂ ಕೃಷ್ಣ ಅವರು ಪ್ರಭುತ್ವದ ಜನಪ್ರತಿನಿಧಿಯಾಗಿ ಹಂತಹಂತವಾಗಿ ಬೆಳೆದುಬಂದಂತಹ ಸಮರ್ಥ ನಾಯಕರು. ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ನಿನ್ನೆ ಕೃಷ್ಣ ಅವರ ಅಗಲಿಕೆಗೆ ಸಂತಾಪ ಸೂಚಿಸಲಾಯಿತು ನಂತರದಲ್ಲಿ ಉಪಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್ ಅವರು ಸೇರಿದಂತೆ ಇನ್ನು ಕೆಲವು ಸಚಿವರು ಹಾಗೂ ಶಾಸಕರು ಕೃಷ್ಣ ಅವರ ರಾಜಕಾರಣದ ವಿಚಾರಗಳನ್ನು ನೆನೆದು ಸದನಕ್ಕೆ ಸಮರ್ಪಕವಾಗಿ ವಿವರಿಸಿದರು. ಈ ಎಲ್ಲಾ ವಿಚಾರಗಳ ಅನ್ವಯ ಕೃಷ್ಣ ಅವರ ಹುಟ್ಟಿನಿಂದ ರಾಜಕೀಯ ನಿವೃತ್ತಿಯವರೆಗೆ ಬೆಳೆದುಬಂದಿರುವ ನಡೆಯನ್ನು ನನ್ನ ವಿಚಾರಧಾರೆಯಲ್ಲಿ ನಾನು ವಿವರಿಸಿರುವೆ. ಕೆಳಗಿನ ವಿವರವನ್ನು ಸಂಪೂರ್ಣ ಗಮನಿಸಿ ಸ್ನೇಹಿತಬಂಧುಗಳೆ . 1932ರಲ್ಲಿ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿಯಲ್ಲಿ ಒಕ್ಕಲಿಗ ಕುಟುಂಬದಲ್ಲಿ ಎಸ್ ಎಂ ಕೃಷ್ಣ ಅವರ ಜನನ. ಮೈಸೂರು ರಾಮಕೃಷ್ಣ ಆಶ್ರಮದಲ್ಲಿ ಶಿಕ್ಷಣ.

1960 ರಲ್ಲಿ ಅಮೇರಿಕಾದಲ್ಲಿ ಕಾನೂನು ವಿಭಾಗದ ಪದವಿ ಪಡೆದ ಕೃಷ್ಣ ಅವರು ತಮ್ಮ ಪ್ರಾಂತ್ಯದ ಜನತೆಯೊಂದಿಗೆ ಸಾಮಾಜಿಕವಾಗಿರುವ ಮಹತ್ವಾಕಾಂಕ್ಷೆಯಿಂದ ಭಾರತಕ್ಕೆ ಹಿಂದಿರುಗಿದಾರೆ . 1962 ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರಕ್ಕೆ ಮೊದಲಬಾರಿ ಪಕ್ಷೇತರ ಶಾಸಕರಾಗಿ ಕೃಷ್ಣ ಆಯ್ಕೆಯಾದರು. 1968=70ರ ವರೆಗೆ ಪ್ರಜಾ ಸೋಷಲಿಸ್ಟ್ ಪಕ್ಷದಿಂದ ಮಂಡ್ಯ ಲೋಕಸಭೆಗೆ ಸಂಸದರಾಗಿ ಆಯ್ಕೆಯಾದರು.1972ರಲ್ಲಿ 5 ನೇ ಲೋಕಸಭೆಗೆ ಆಯ್ಕೆಯಾದ ಕೃಷ್ಣ ಅವರು ಇಂದಿರಾಗಾಂಧಿ ಅವರ ಒತ್ತಾಸೆಯಂತೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿ ಕೆಲವೇ ದಿನಗಳಲ್ಲಿ ರಾಜಿನಾಮೆ ನೀಡಿ ರಾಜ್ಯ=ರಾಜಕಾರಣಕ್ಕೆ ಮರಳಿದ್ದಾರೆ. 1972=77ರ ವರೆಗೆ ವಿಧಾನಪರಿಷತ್ ಸದಸ್ಯತ್ವದಲ್ಲಿ ರಾಜ್ಯ ಸರ್ಕಾರದಲ್ಲಿ ವಾಣಿಜ್ಯ ಹಾಗೂ ಕೈಗಾರಿಕೆ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ. 1980=84ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ ಮೊದಲ ಬಾರಿ ಆಯ್ಕೆ. ಈ ಅವಧಿಯಲ್ಲಿ ಇಂದಿರಾಗಾಂಧಿ ಅವರ ಸಚಿವ ಸಂಪುಟದಲ್ಲಿ ಕೇಂದ್ರ ಕೈಗಾರಿಕೆಗೆ ರಾಜ್ಯ=ಖಾತೆ ಸಚಿವ=ಸ್ಥಾನ.1989=92ರ ಅವಧಿಯಲ್ಲಿ ರಾಜ್ಯಸರ್ಕಾರದ ವಿಧಾನ ಸಭೆಯ ಸ್ಪೀಕರ್.1993=94 ರಲ್ಲಿ ವೀರಪ್ಪಮೊಯ್ಲಿ ಸಂಪುಟದಲ್ಲಿ ಉಪಮುಖ್ಯಮಂತ್ರಿ. 1996=99 ರಲ್ಲಿ ರಾಜ್ಯಸಭಾ ಸಂಸದರಾಗಿ ಆಯ್ಕೆ ಎಚ್ ಡಿ ದೇವೇಗೌಡರ ಜನತಾ=ಪಕ್ಷದ ಹೆಚ್ಚುವರಿ ಮತಗಳ ಸಹಾಯ. ಇದೇ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷವನ್ನು ಕಟ್ಟಿದರು. 1999=2004 ರಾಜ್ಯದ 10ನೇ ಮುಖ್ಯಮಂತ್ರಿಯಾಗಿ ಶಾಲಾ ಮಕ್ಕಳಿಗೆ ಬಿಸಿ ಊಟ. ಮಹಿಳೆಯರ ಸಬಲೀಕರಣಕ್ಕೆ ಶ್ರೀ ಶಕ್ತಿ ಸಂಘಗಳ ರಚನೆ. ರೈತರ ಕುಟುಂಬಗಳ ಆರೋಗ್ಯಕ್ಕೆ ಯಶಸ್ವಿನಿ ಯೋಜನೆ. ಕೃಷಿಕರ ಜಮೀನುಗಳ ದಾಖಲೆಗಳನ್ನು ಡಿಜಿಟಲೀಕರಣ. ರಾಜ್ಯ ಸರ್ಕಾರದ ಆಡಳಿತಕ್ಕೆ ವಿಕಾಸ ಸೌಧ ಹಾಗೂ ಉದ್ಯೋಗ ಸೌಧ ಕಟ್ಟಡಗಳ ನಿರ್ಮಾಣ ಸೇರಿದಂತೆ ಇನ್ನು ಅನೇಕ ಜನಪರವಾದ ಆಡಳಿತ, ಈ ಎಲ್ಲಾ ವಿಚಾರಗಳಲ್ಲಿ ಕೃಷ್ಣ ಅವರ ವ್ಯಕ್ತಿತ್ವದ ಗೌರವ ಜನಮಾನಸದಲ್ಲಿ ಶಾಶ್ವತವಾಗಿ ಉಳಿದಿದದ್ದೆ. 2004=8 ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ. ಇದೇವೇಳೆ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಪಕ್ಷಕ್ಕೆ ಕರೆತರಲು ತಂತ್ರಗಾರಿಕೆ. 2009–12ರ ಮನಮೋಹನ್ ಸಿಂಗ್ ಅವರ ಕೇಂದ್ರಾಡಳಿತದ್ದ ಸಚಿವ=ಸಂಪುಟದಲ್ಲಿ ವಿದೇಶಾಂಗ ಸಚಿವ ಸ್ಥಾನದಲ್ಲಿ ಉತ್ತಮ ಆಡಳಿತ. 2017ರಲ್ಲಿ 46 ವರ್ಷಗಳ ಕಾಲಗಳ ಕಾಂಗ್ರೆಸ್ ಪಕ್ಷದ ಅವಿನಾಭಾವ ಸಂಬಂಧವನ್ನು ಕಡಿದುಕೊಂಡು ಬಿಜೆಪಿ ಪಕ್ಷಕ್ಕೆ ಸೇರ್ಪಡೆ. 2023 ರಲ್ಲಿ ರಾಜಕೀಯ ನಿವೃತ್ತಿ , ಕೃಷ್ಣ ಅವರ ರಾಜಕೀಯ ಮುನ್ನೋಟದ ಪ್ರಭಾವಕ್ಕೆ ಕೇಂದ್ರ ಸರ್ಕಾರ ಪದ್ಮವಿಭೂಷಣ ಪ್ರಶಸ್ತಿ ನೀಡಿ ಗೌರವಿಸಿದೆ. ಕೃಷ್ಣ ಅವರ ಈ ಎಲ್ಲಾ ವಿಚಾರಧಾರೆಗಳು ಇತಿಹಾಸದ ಪುಟಗಳಲ್ಲಿ ಸಾಕ್ಷಿ–ಗುಡ್ಡೆಯಾಗಿ ಶಾಶ್ವತವಾಗಿ ನೆಲೆಸಿರುತ್ತವೆ. ಕೃಷ್ಣ ಅವರ ವರ್ಣರಂಜಿತ ವ್ಯಕ್ತಿತ್ವವನ್ನು ಗೌರವಿಸುವ ಅಭಿಮಾನಿಗಳಲ್ಲಿ ನಾನೇ ಮೊದಲಿಗ, ರಾಜ್ಯ=ರಾಜಕೀಯದಲ್ಲಿ ಶ್ರೀ ಎಸ್ ಬಂಗಾರಪ್ಪನವರು. ಶ್ರೀ ಎಚ್ ಡಿ ದೇವೇಗೌಡರು, ಶ್ರೀ ಎಸ್ ಎಂ ಕೃಷ್ಣ ಅವರು ಈ ಮೂವರು ನನ್ನ ನೆಚ್ಚಿನ ನಾಯಕರು ಹೌದು. ಈ ಮೂರು ನಾಯಕರ ಆಡಳಿತದಲ್ಲಿನ ಪಾರದರ್ಶಕತೆ ನನ್ನಂತೆ ಅನೇಕ ಮುಖಂಡರಿಗೆ ಆದರ್ಶಪ್ರಾಯ. ಇದು ಕಥೆಯಲ್ಲ ಆಡಳಿತಾತ್ಮಕ ಇತಿಹಾಸ.


## ಒಂದು ರಾಷ್ಟ್ರ ಒಂದು ಚುನಾವಣೆ

# 7 ದೇಶಗಳಲ್ಲಿ ಅಧ್ಯಯನ ನಡೆಸಿದ ಕೋವಿಂದ್ ಸಮಿತಿ

**ನವದೆಹಲಿ:** ಭಾರತದಲ್ಲಿ ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸಲು ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯು 'ಒಂದು ರಾಷ್ಟ್ರ, ಒಂದು ಚುನಾವಣೆ' ಪರಿಕಲ್ಪನೆಯನ್ನು ಶಿಫಾರಸು ಮಾಡಿದೆ.

ಸಮಿತಿ ಕೇಂದ್ರ ಸರ್ಕಾರಕ್ಕೆ ಈ ಶಿಫಾರಸು ಮಾಡುವ ಮೊದಲು ವಿಶ್ವದ ಏಳು ದೇಶಗಳ ಚುನಾವಣಾ ಪ್ರಕ್ರಿಯೆಯನ್ನು ಅಧ್ಯಯನ ಮಾಡಿದೆ ಎಂಬುದು ವಿಶೇಷ.

ಮಾಜಿ ರಾಷ್ಟ್ರಪತಿಗಳ ಮುಂದಾಳತ್ವದ ಉನ್ನತ ಮಟ್ಟದ ಸಮಿತಿಯು ದಕ್ಷಿಣ ಆಫ್ರಿಕಾ, ಸ್ವೀಡನ್, ಬೆಲ್ಜಿಯಂ, ಜರ್ಮನಿ, ಜಪಾನ್, ಇಂಡೋನೇಷ್ಯಾ ಮತ್ತು ಫಿಲಿಪ್ಪೀನ್ಸ್‌ಗಳಲ್ಲಿನ ಚುನಾವಣೆಗಳ ಪ್ರಕ್ರಿಯೆ ಯನ್ನು ಪರಿಶೀಲಿಸಿದೆ.



ದಕ್ಷಿಣ ಆಫ್ರಿಕಾದಲ್ಲಿ ಮೇ 29ರಂದು ಸಾರ್ವತ್ರಿಕ ಚುನಾವಣೆ ನಡೆಯುತ್ತದೆ. ಮತದಾರರು ರಾಷ್ಟ್ರೀಯ ಅಸೆಂಬ್ಲಿ (ಲೋಕ ಸಭೆ) ಮತ್ತು ಪ್ರಾಂತೀಯ ಶಾಸಕಾಂಗಗಳಿಗೆ (ವಿಧಾನಸಭೆಗಳು) ಏಕ ಕಾಲದಲ್ಲಿ ಮತ ಚಲಾಯಿಸುತ್ತಾರೆ. ಬಳಿಕ ಸ್ಥಳೀಯ ಸಂಸ್ಥೆಗಳಿಗೆ ಅವುಗಳ ಅವಧಿ ಅನುಸರಿಸಿ ಚುನಾವಣೆ ನಡೆಯುತ್ತದೆ.

ಸ್ವೀಡನ್‌ನಲ್ಲಿ ಸ್ಥಳೀಯ ಸಂಸ್ಥೆಗಳಿಂದ ಹಿಡಿದು ರಾಷ್ಟ್ರೀಯ ಚುನಾವಣೆಗಳು ಏಕಕಾಲದಲ್ಲಿ ನಡೆಯುತ್ತವೆ. ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಸಂಸತ್, ರಾಜ್ಯಗಳ ಚುನಾವಣೆಯು ಸೆಪ್ಟೆಂಬರ್ ತಿಂಗಳ ಎರಡನೇ ಭಾನುವಾರದಂದು ನಡೆಯುತ್ತವೆ. ಅದೇ ರೀತಿ, ಸ್ಥಳೀಯ ಸಂಸ್ಥೆಗಳಿಗೆ ಐದು ವರ್ಷಗಳಿಗೊಮ್ಮೆ ಸೆಪ್ಟೆಂಬರ್ ತಿಂಗಳ ಎರಡನೇ ಭಾನುವಾರದಂದು ಮತದಾನ ನಡೆಯುತ್ತವೆ.

ಸಮಿತಿಯ ಸದಸ್ಯರಾದ ಸುಭಾಷ್ ಸಿ.ಕಶ್ಯಪ್ ಅವರು ದೇಶದ ನಾಯಕನ ನೇಮಕ ಮತ್ತು ಅವಿಶ್ವಾಸ ಮತದ ವಿಶಿಷ್ಟ ರಚನೆಯನ್ನು ಹೊಂದಿರುವ ಜರ್ಮನ್ ಮಾದರಿಯನ್ನು ಭಾರತದಲ್ಲಿ ಅನುಷ್ಠಾನಕ್ಕೆ ತರಲು ಸಲಹೆ ನೀಡಿದ್ದಾರೆ.

ಜಪಾನ್ ಮತ್ತು ಜರ್ಮನಿಯಲ್ಲಿ ಪ್ರಧಾನ ಮಂತ್ರಿಯನ್ನು ಸಂಸತ್ ಆಯ್ಕೆ ಮಾಡಿದ ಬಳಿಕ, ರಾಷ್ಟ್ರದಲ್ಲಿ ಏಕಕಾಲದಲ್ಲಿ ಚುನಾವಣೆಗಳು ನಡೆಯುತ್ತವೆ. ಇಲ್ಲಿ ಆಯ್ಕೆಯಾಗುವ ಪಕ್ಷವು ತನ್ನ ಅಭ್ಯರ್ಥಿಯನ್ನು ಪ್ರಧಾನಿಯನ್ನಾಗಿ ನೇಮಿಸುತ್ತವೆ. ಇದು ಭಾರತಕ್ಕೆ ಪ್ರಯೋಜನಕಾರಿ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

**ಮುಸ್ಲಿಂ ಬಾಹುಳ್ಯದ ರಾಷ್ಟ್ರದಲ್ಲೂ ಒನ್‌ಟೈಮ್ ಎಲೆಕ್ಷನ್:** ಮುಸ್ಲಿಂ ಬಾಹುಳ್ಯ ರಾಷ್ಟ್ರವಾದ ಇಂಡೋನೇಷ್ಯಾವೂ 2019ರಿಂದ ಏಕಕಾಲದ ಚುನಾವಣೆ ಪದ್ಧತಿಯನ್ನು ಅನುಸರಿಸುತ್ತಿದೆ. ಇಲ್ಲಿ ಅಧ್ಯಕ್ಷ, ಉಪಾಧ್ಯಕ್ಷ, ರಾಷ್ಟ್ರೀಯ ಮತ್ತು ಪ್ರಾದೇಶಿಕ ಶಾಸಕಾಂಗ ಸಂಸ್ಥೆಗಳ ಸದಸ್ಯರನ್ನು ಒಂದೇ ದಿನದಲ್ಲಿ ಚುನಾಯಿಸಲಾಗುತ್ತದೆ.

ಈ ವರ್ಷದ ಫೆಬ್ರವರಿ 14ರಂದು ಇಂಡೋನೇಷ್ಯಾ ಯಶಸ್ವಿಯಾಗಿ ಏಕಕಾಲಿಕ ಚುನಾವಣೆಗಳನ್ನು ನಡೆಸಿತು.

ಇದು ವಿಶ್ವದಲ್ಲಿಯೇ ಒಂದೇ ದಿನದಲ್ಲಿ ನಡೆದ ಅತಿದೊಡ್ಡ ಚುನಾವಣೆಯಾಗಿದೆ. ಸುಮಾರು 200 ಮಿಲಿಯನ್ ಜನರು ಅಧ್ಯಕ್ಷ, ಉಪಾಧ್ಯಕ್ಷ, ಸಂಸತ್ ಸದಸ್ಯರು, ರಾಜ್ಯ ಅಸೆಂಬ್ಲಿಗಳ ಸದಸ್ಯರು ಮತ್ತು ಮುನ್ಸಿಪಲ್‌ಗಳಿಗೆ ಮತದಾನ ಹಾಕಿದ್ದಾರೆ.

## 'ಒಂದು ರಾಷ್ಟ್ರ, ಒಂದು ಚುನಾವಣೆ' ವಿಧೇಯಕಕ್ಕೆ ಸಂಪುಟ ಅಸ್ತು

ನವದೆಹಲಿ: ಚುನಾವಣಾ ಪ್ರಕ್ರಿಯೆಯಲ್ಲಿ ಮಹತ್ತರ ಬದಲಾವಣೆಯ ನಿರೀಕ್ಷೆ ಮೂಡಿಸಿರುವ 'ಒಂದು ರಾಷ್ಟ್ರ, ಒಂದು ಚುನಾವಣೆ' ವಿಧೇಯಕಕ್ಕೆ ಕೇಂದ್ರ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.

ಸದ್ಯ ನಡೆಯುತ್ತಿರುವ ಚಳಿಗಾಲದ ಸಂಸತ್ ಅಧಿವೇಶನದಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ವಿಧೇಯಕವನ್ನು ಮಂಡಿಸಲು ಕೇಂದ್ರ ಸರ್ಕಾರ ಉದ್ದೇಶಿಸಿದೆ.

ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿ ಏಕಕಾಲದಲ್ಲಿ ಚುನಾವಣೆ ನಡೆಸುವ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಈಗಾಗಲೇ ಸಲ್ಲಿಸಿದೆ. ಬುಧವಾರ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದ ಕೋವಿಂದ್, 'ಒಂದು ರಾಷ್ಟ್ರ, ಒಂದು ಚುನಾವಣೆ' ವಿಧೇಯಕವನ್ನು ಒಮ್ಮತದಿಂದ ಅಂಗೀಕರಿಸಬೇಕು. ರಾಜಕೀಯ ಹಿತಾಸಕ್ತಿಗಳನ್ನೂ ಮೀರಿ, ರಾಷ್ಟ್ರದ ಹಿತಕ್ಕಾಗಿ ಒಪ್ಪಬೇಕಿದೆ ಎಂದು ಸಲಹೆ ನೀಡಿದ್ದರು.

ಮುಂದುವರೆದು, ಕೇಂದ್ರ ಸರ್ಕಾರವು ವಿಪಕ್ಷಗಳೊಂದಿಗೆ ಮಾತುಕತೆ ನಡೆಸಿ ಈ ವಿಚಾರದಲ್ಲಿ ಒಮ್ಮತ ಮೂಡಿಸಬೇಕು. ಇದರಲ್ಲಿ ಯಾವುದೇ ಪಕ್ಷದ ಹಿತಾಸಕ್ತಿ ಇಲ್ಲ, ರಾಷ್ಟ್ರದ ಹಿತಾಸಕ್ತಿ ಅಡಗಿದೆ. ಇದನ್ನು ಅನುಸರಿಸಿದಲ್ಲಿ ದೇಶದ ಆರ್ಥಿಕ ಚಿತ್ರಣವೇ ಬದಲಾಗುತ್ತದೆ ಎಂಬುದು ಆರ್ಥಿಕ ತಜ್ಞರ ಅಭಿಪ್ರಾಯ. ಜಿಡಿಪಿ ಶೇಕಡಾ 1 ರಿಂದ 1.5ರಷ್ಟು ಹೆಚ್ಚಾಗುತ್ತದೆ ಎಂದೂ ಅಂದಾಜಿಸಲಾಗಿದೆ ಎಂದು ಹೇಳಿದ್ದರು. N.D.A ಮಿತ್ರಪಕ್ಷಗಳಾದ ಜೆಡಿಯು ಮತ್ತು ಲೋಕ ಜನಶಕ್ತಿ ಪಕ್ಷ ಬೆಂಬಲದ ಹೊರತಾಗಿಯೂ, ವಿಪಕ್ಷಗಳಾದ ಕಾಂಗ್ರೆಸ್, ಎಎಪಿ ಸೇರಿದಂತೆ I.N.D.I.A ಕೂಟದಿಂದ ವಿರೋಧ ವ್ಯಕ್ತವಾಗುತ್ತಿದೆ.




# ನಾಳೆ ರಾಷ್ಟ್ರೀಯ ಲೋಕ ಅದಾಲತ್



**ಶಿಡ್ಲಘಟ್ಟ :** ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಆದೇಶದ ಮೇರೆಗೆ ತಾಲ್ಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಇದೇ ಡಿ ,14 ರ ಶನಿವಾರದಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮವನ್ನು ಆಯೋಜಿಸಿದ್ದು ನಾಗರೀಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರು, ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಮ್ಮದ್ ರೋಷನ್ ಷಾ ತಿಳಿಸಿದರು. ನಗರದ ನ್ಯಾಯಾಲಯದ ಆವರಣದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು. ನಗರದ ನ್ಯಾಯಾಲಯ ಆವರಣದಲ್ಲಿ ಡಿ ,14 ರ ಶನಿವಾರ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ನಡೆಯಲಿದ್ದು ಕೌಟುಂಬಿಕ ವ್ಯಾಜ್ಯ, ಸಿವಿಲ್, ಹಣಕಾಸಿನ ವಿಚಾರ, ಬ್ಯಾಂ□□□ನಲ್ಲಿ ಸಾಲ ಪಡೆದಿರುವ ಪ್ರಕರಣ ಸೇರಿದಂತೆ ಅನೇಕ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಬಹುದು. ನ್ಯಾಯಾಲಯದಲ್ಲಿ ರಾಜೀ ಮಾಡಿಕೊಂಡರೆ ಮಾನವ ಸಂಬಂಧ, ಮೌಲ್ಯಗಳು, ಶಾಂತಿ, ನೆಮ್ಮದಿಯ ವಾತಾವರಣ ಮೂಡಿ ಕಕ್ಷಿದಾರರ ಅಮೂಲ್ಯವಾದ ಸಮಯ ಮತ್ತು ಹಣ ಇದರಿಂದ ಉಳಿಯುತ್ತದೆ ಎಂದು ಹೇಳಿದರು.

ರಾಜಿಗೆ ಯೋಗ್ಯವಾದ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಲು ಇಚ್ಛಿಸುವ ಕಕ್ಷಿದಾರರು ಸ್ವಯಂ ಪ್ರೇರಿತರಾಗಿ ತಮ್ಮ ವಕೀಲರ ಮೂಲಕ ಅಥವಾ ಖುದ್ದಾಗಿ ಹಾಜರಾಗಿ ರಾಜಿ ಮಾಡಿಕೊಳ್ಳುವ ಮೂಲಕ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಜೆ.ಪೂಜಾ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ಕಾರ್ಯದರ್ಶಿ ಸಿ.ಜಿ.ಭಾಸ್ಕರ್ ಹಾಜರಿದ್ದರು.

# ದಾಳಿ: 25 ಮಂದಿ ಸಾವು, ಹಲವು ಮಂದಿಗೆ ಗಾಯ

**ಗಾಜಾ ಪಟ್ಟಿ:** ಪ್ಯಾಲೆಸ್ತೈನ್ ಮೇಲೆ ಇಸ್ರೇಲ್ ಗುರುವಾರ ವೈಮಾನಿಕ ದಾಳಿ ನಡೆಸಿದೆ. ಇಸ್ರೇಲ್ ಸೆಂಟ್ರಲ್ ಗಾಜಾ ಸ್ಟ್ರಿಪ್ ಮೇಲೆ ನಡೆಸಿದ ದಾಳಿಯಲ್ಲಿ ಕನಿಷ್ಠ 25 ಪ್ಯಾಲೆಸ್ತೈನಿಯನ್ನರು ಮೃತಪಟ್ಟಿದ್ದಾರೆ. ಡಜನ್‌ಗಟ್ಟಲೆ ಜನರು ಗಾಯಗೊಂಡಿದ್ದಾರೆ ಎಂದು ಪ್ಯಾಲೆಸ್ತೈನಿಯನ್ ವೈದ್ಯರ ಹೇಳಿಕೆ ಉಲ್ಲೇಖಿಸಿ ಅಸೋಸಿಯೇಟೆಡ್ ಮಾಡಿದೆ.

ಅಧ್ಯಕ್ಷ ಜೋ ಬೈಡನ್ ಅವರ ರಾಷ್ಟ್ರೀಯ ಭದ್ರತಾ ಸಲಹೆಗಾರ ಗಾಜಾದಲ್ಲಿ ಯುದ್ಧವನ್ನು ಕೊನೆಗೊಳಿಸಲು ಕದನ ವಿರಾಮ ಒಪ್ಪಂದದ ಬಗ್ಗೆ ಭರವಸೆ ಮೂಡಿಸಿದ ಕೆಲವೇ ಗಂಟೆಗಳ ಬಳಿಕ ಈ ದಾಳಿ ನಡೆದಿದೆ ಎಂದು ವರದಿಯಾಗಿದೆ.

ನುಸಿರಾತ್ ನಲ್ಲಿರುವ ನಿರಾಶ್ರಿತರ ಬಹುಮಹಡಿ ವಸತಿ ಕಟ್ಟಡದಿಂದ ಒಟ್ಟು 25 ದೇಹಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಅಲ್ಲಿನ ಅಧಿಕಾರಿಗಳು ತಿಳಿಸಿದ್ದಾರೆ. ಗಾಜಾ ಪಟ್ಟಿಯಲ್ಲಿರುವ ಎರಡು ಆಸ್ಪತ್ರೆಗಳಾಗಿರುವ ಉತ್ತರದಲ್ಲಿರುವ ಅಲ್–ಅವ್ದಾ ಮತ್ತು ಮಧ್ಯ ಗಾಜಾದ ಅಲ್–ಅಕ್ಸಾ ಆಸ್ಪತ್ರೆಯ ಅಧಿಕಾರಿಗಳು ಈ ಕುರಿತು ಮಾಹಿತಿ ನೀಡಿದ್ದಾರೆ.

ಈ ಎರಡು ಆಸ್ಪತ್ರೆಗಳಲ್ಲಿ 40 ಕ್ಕೂ ಹೆಚ್ಚು ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪ್ಯಾಲೆಸ್ತೈನ್ ವೈದ್ಯರು ತಿಳಿಸಿದ್ದಾರೆ ಎಂದು ವರದಿಯಾಗಿದೆ. ಈ ದಾಳಿಯ ಬಗ್ಗೆ ಇಸ್ರೇಲ್ ಮಿಲಿಟರಿ ಯಾವುದೇ ತಕ್ಷಣದ ಪ್ರತಿಕ್ರಿಯೆ ನೀಡಿಲ್ಲ.

ಇಸ್ರೇಲ್ ಪ್ಯಾಲೇಸ್ತೈನ್‌ನಿಂದ ಹಮಾಸ್ ತೊಡೆದು ಹಾಕುವ ಕೆಲಸ ಮಾಡುತ್ತಿದೆ. ಅಕ್ಟೋಬರ್ 2023 ರಲ್ಲಿ ಹಮಾಸ್ ಇಸ್ರೇಲ್ ಮೇಲೆ ಕ್ಷಿಪಣಿ ದಾಳಿ ನಡೆಸಿತ್ತು. ಈ ವೇಳೆ 1200ಕ್ಕೂ ಹೆಚ್ಚು ಇಸ್ರೇಲಿಗಳು ಹತರಾಗಿದ್ದರು. ಇದಕ್ಕೆ ಪ್ರತೀಕಾರವಾಗಿ ಇಸ್ರೇಲ್ ಪ್ಯಾಲೆಸ್ತೈನ್ ಮೇಲೆ ಯುದ್ಧ ಸಾರಿತ್ತು. ಅದು ಈಗಲೂ ಮುಂದುವರೆದಿದೆ.



**ಕದನ ವಿರಾಮಕ್ಕೆ ಒತ್ತಾಯ:** ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಸದಸ್ಯ ರಾಷ್ಟ್ರಗಳು ಗಾಜಾದಲ್ಲಿ ತಕ್ಷಣವೇ ಕದನ ವಿರಾಮವನ್ನು ಘೋಷಿಸುವ ಹೊಸ ನಿರ್ಣಯವನ್ನು ಈ ವಾರ ಅಂಗೀಕರಿಸಿವೆ.

ಗಾಜಾದಾದ್ಯಂತ ಮುಂದುವರಿದ ಇಸ್ರೇಲ್ ದಾಳಿ: ನುಸಿರಾತ್‌ನಲ್ಲಿನ ದೃಶ್ಯದ ಫೋಟೋಗಳು ಸಂಪೂರ್ಣವಾಗಿ ಕುಸಿದ ಕಟ್ಟಡದ ಚಿತ್ರಣವನ್ನು ತೋರಿಸುತ್ತಿವೆ. ಸುಟ್ಟ ಅವಶೇಷಗಳ ನಡುವೆ ಜನರು ನಡೆದುಕೊಂಡು ಹೋಗುವ ದೃಶ್ಯಗಳನ್ನ ಫೋಟೋಗಳು ತಿಳಿಸುತ್ತಿವೆ. ಅವಶೇಷಗಳಡಿಯಿಂದ ಹೊಗೆ ಬರುತ್ತಿದೆ. ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಮೃತ ದೇಹಗಳಿಗಾಗಿ ಪ್ಯಾಲೇಸ್ತೈನಿಯನ್ನ ರಕ್ಷಣಾಪಡೆಗಳು ಹುಡುಕಾಟ ನಡೆಸಿರುವ ದೃಶ್ಯಗಳು ಕೂಡಾ ವೈರಲ್ ಆಗಿವೆ.

## ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧ!

**ಚಿಕ್ಕಮಗಳೂರು :** ಚಿಕ್ಕಮಂಗಳೂರಿನ ಇನಾಂ ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾದಲ್ಲಿ ಇಂದು ಮತ್ತು ನಾಳೆ ದತ್ತ ಜಯಂತಿ ಹಿನ್ನೆಲೆಯಲ್ಲಿ ಇಂದಿನಿಂದ ಎರಡು ದಿನ ಮಧ್ಯ ಮಾರಾಟ ಬಂದ್ ಮಾಡಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ. ಮಧ್ಯ ಮಾರಟಣೆ ಶಿಶಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಅವರು ಆದೇಶಿಸಿದ್ದಾರೆ.

ಚಿಕ್ಕಮಂಗಳೂರು ಕಡೂರು ಮೂಡಿಗೆರೆ, ಕೊಪ್ಪ ಹಾಗೂ ಎನ್ ಆರ್ ಪುರ ತರೀಕೆರೆ ಶೃಂಗೇರಿ ತಾಲೂಕು ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಮಧ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಿದೆ ವಿ ಎಚ್ ಪಿ ಬಜರಂಗದಳ ನೇತೃತ್ವದಲ್ಲಿ ಈ ಒಂದು ದತ್ತ ಜಯಂತಿ ನಡೆಯಲಿದೆ. ಮುಂಜಾಗ್ರತಾ ಕ್ರಮವಾಗಿ ಎರಡು ದಿನ ಮಧ್ಯ ಮಾರಾಟ ಬಂದ್ ಮಾಡಲಾಗಿದೆ.

ಚಿಕ್ಕಮಂಗಳೂರು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಅವರು ಈ ಕುರಿತು ಆದೇಶ ಹೊರಡಿಸಿದ್ದಾರೆ. ದತ್ತ ಜಯಂತಿ ಅಂಗವಾಗಿ ಇಂದು ಚಿಕ್ಕಮಗಳೂರು ನಗರದಲ್ಲಿ ಬೃಹತ್ ಶೋಭಾಯಾತ್ರೆ ನಡೆಯಲಿದೆ. ನಾಳೆ ದತ್ತ ಮಾಲಾಧಾರಿಗಳು, ದತ್ತ ಪಾದುಕೆ ದರ್ಶನ ಪಡೆಯಲಿದ್ದಾರೆ. ಇನಾಂ ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾದಲ್ಲಿ ದರ್ಶನ ಪಡೆಯಲಿದ್ದಾರೆ. ಚಿಕ್ಕಮಗಳೂರಿನ ಇನಾಂ ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾದಲ್ಲಿ ಈ ಒಂದು ಕಾರ್ಯಕ್ರಮ ನಡೆಯಲಿದೆ.

## ಕಟ್ಟಡ ಕಸಿತ: ಪ್ರಾಣಹಾನಿ ಇಲ್ಲ

**ಮುಂಬೈ:** ಇಲ್ಲಿನ ಭೆಂಡಿ ಬಜಾರ್ ಪ್ರದೇಶದಲ್ಲಿ ಗುರುವಾರ ತಡರಾತ್ರಿ ಆರು ಮಹಡಿಗಳ ಖಾಲಿ ಕಟ್ಟಡ ಕುಸಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಈ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಅವರು ಹೇಳಿದರು.ಪ್ರಾಥಮಿಕ ಮಾಹಿತಿಯ ಪ್ರಕಾರ, ಕಟ್ಟಡ ಹಾಳಾದ ಸ್ಥಿತಿಯಲ್ಲಿ ಖಾಲಿ ಇತ್ತು.ಮಾಹಿತಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ದಳದ ಐದು ವಾಹನಗಳನ್ನು ಸ್ಥಳಕ್ಕೆ ಕಳುಹಿಸಲಾಯಿತು ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ಕಟ್ಟಡದ ಬಳಿ ಸೇರಿದ್ದರಿಂದ, ಕಾರ್ಯಾಚರಣೆಗೆ ಧಕ್ಕೆ ಉಂಟಾಗದಂತೆ ತಡೆಯಲು ಪೊಲೀಸರು ಕೂಡ ಸ್ಥಳಕ್ಕೆ ಆಗಮಿಸಿದ್ದರು.

# ಅವಿಶ್ವಾಸ ನೋಟಿಸ್‌ಗೆ ದೇವೇಗೌಡ ಕಿಡಿ

**ನವದೆಹಲಿ:** ಸಭಾಪತಿ ಜಗದೀಪ್ ಧನಕರ್ ವಿರುದ್ಧ ಅವಿಶ್ವಾಸ ಗೊತ್ತುವಳಿ ಮಂಡನೆ, ಶತಕೋಟ್ಯಧಿಪತಿ ಹೂಡಿಕೆದಾರ ಜಾರ್ಜ್ ಸೋರೊಸ್ ಜತೆ ಕಾಂಗ್ರೆಸ್ ನಾಯಕರ ನಂಟು ಕುರಿತ ಬಿಜೆಪಿಯ ಆರೋಪಗಳಿಂದಾಗಿ, ರಾಜ್ಯಸಭೆಯಲ್ಲಿ ಗುರುವಾರ ಆಡಳಿತ ಮತ್ತು ವಿಪಕ್ಷಗಳ ಸದಸ್ಯರ ನಡುವೆ ವಾಗ್ವಾದ ನಡೆಯಿತಲ್ಲದೇ, ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ಭೋಜನ ವಿರಾಮದ ಪೂರ್ವದಲ್ಲಿ, ಶೂನ್ಯವೇಳೆಯಲ್ಲಿ ವಿರೋಧ ಪಕ್ಷಗಳ ಸದಸ್ಯರು ತಾವು ನೀಡಿದ ನೋಟಿಸ್‌ಗಳಲ್ಲಿನ ವಿಷಯಗಳನ್ನು ಚರ್ಚೆಗೆ ಕೈಗೆತ್ತಿಕೊಳ್ಳುವಂತೆ ಕೋರಿದರು.

ಈ ಸಂಬಂಧ ಸಲ್ಲಿಕೆಯಾಗಿದ್ದ 6 ನೋಟಿಸ್‌ಗಳನ್ನು ಸಭಾಪತಿ ಧನಕರ್ ತಿರಸ್ಕರಿಸಿದರು. ಆಗ, ಧನಕರ್ ಅವರ ನಡೆಗೆ ವಿರೋಧ ಪಕ್ಷಗಳ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

ಮಧ್ಯಪ್ರವೇಶಿಸಿದ ಸಚಿವ ಜೆ.ಪಿ.ನಡ್ಡಾ, 'ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಸುದ್ದಿಗೋಷ್ಠಿ ನಡೆಸಿ, ಸಭಾಪತಿಯೂ ಆಗಿರುವ ಉಪರಾಷ್ಟ್ರಪತಿ ಅವರನ್ನು ಟೀಕಿಸಿದ್ದು ಸರಿಯಲ್ಲ' ಎಂದು ವಾಗ್ದಾಳಿ ನಡೆಸಿದರು.

'ಸಭಾಪತಿ ಅವರ ರೂಲಿಂಗ್ ಅನ್ನು ಪ್ರಶ್ನೆ ಮಾಡುವಂತಿಲ್ಲ ಅಥವಾ ಟೀಕಿಸುವಂತಿಲ್ಲ. ಹಾಗೆ ಮಾಡಿದಲ್ಲಿ ಅದು ಸದನ ಮತ್ತು ಸಭಾಪತಿಗಳ ನಿರ್ಣಯದ ನಿಂದನೆ ಆಗಲಿದೆ' ಎಂದು ನಡ್ಡಾ ಹೇಳಿದರು.



ನಂತರ, 'ಸೋನಿಯಾ ಗಾಂಧಿ ಮತ್ತು ಜಾರ್ಜ್ ಸೋರೊಸ್ ನಡುವಿನ ಸಂಬಂಧವೇನು? ಈ ಬಗ್ಗೆ ತಿಳಿಯಲು ಇಡೀ ದೇಶವೇ ಬಯಸುತ್ತಿದೆ' ಎಂದು ನಡ್ಡಾ ಹೇಳಿದಾಗ ಅದಕ್ಕೆ ವಿಪಕ್ಷಗಳ ಪಾಳಯದಿಂದ ವಿರೋಧ ವ್ಯಕ್ತವಾಯಿತು. ಗದ್ದಲ ಶುರುವಾದಾಗ ಕಲಾಪವನ್ನು ಮಧ್ಯಾಹ್ನ 2ರವರೆಗೆ ಮುಂದೂಡಲಾಯಿತು.

ಮಧ್ಯಾಹ್ನ ಮತ್ತೆ ಕಲಾಪ ಆರಂಭಗೊಂಡಾಗ, ಟಿಎಂಸಿ ಸಂಸದ ಡೆರೆಕ್ ಒಬ್ರಿಯಾನ್ ಅವರು ಕ್ರಿಯಾಲೋಪ ಪ್ರಸ್ತಾವಕ್ಕೆ ಮುಂದಾದರು. ಇದಕ್ಕೆ ಅವಕಾಶ ಇಲ್ಲ ಎಂದು ಧನಕರ್ ಹೇಳಿದಾಗ, ವಿಪಕ್ಷಗಳ ಸದಸ್ಯರು ಮತ್ತೆ ಘೋಷಣೆಗಳನ್ನು ಕೂಗಿದಾಗ ಸದನ ಗದ್ದಲದಿಂದ ತುಂಬಿತು.

ಇದರ ನಡುವೆಯೇ, ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ಸಂಸದ ಎಚ್.ಡಿ.ದೇವೇಗೌಡ ಮಾತನಾಡುವಂತೆ ಧನಕರ್ ಹೇಳಿದರಾದರೂ, ವಿರೋಧ ಪಕ್ಷಗಳ ಸದಸ್ಯರ ಗದ್ದಲ ಜೋರಾದ ಕಾರಣ, ದೇವೇಗೌಡರು ಮಾತನಾಡಲು ಸಾಧ್ಯವಾಗಲಿಲ್ಲ.

'ಕಲಾಪ ಸರಿಯಾಗಿ ನಡೆಯುತ್ತಿಲ್ಲ. ಆಡಳಿತ ಪಕ್ಷದವರು ವಿವೇಕರಹಿತರಂತೆ ಆರೋಪಗಳನ್ನು ಮಾಡುತ್ತಿದ್ದಾರೆ. ನೀವು ಅವುಗಳನ್ನು ಆಲಿಸುವ ಜೊತೆಗೆ, ಅವರನ್ನು ಪ್ರೋತ್ಸಾಹಿಸುತ್ತಿದ್ದೀರಿ' ಎಂದು ಖರ್ಗೆ ಹೇಳಿದರು.

ಮತ್ತೆ ಗದ್ದಲ ಜೋರಾದ ಕಾರಣ, ಧನಕರ್ ಅವರು ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಿದರು.

ರಾಜ್ಯಸಭೆ ಸಭಾಪತಿ ಜಗದೀಪ್ ಧನಕರ್ ವಿರುದ್ಧ ಇಂಡಿಯಾ ಮೈತ್ರಿಕೂಟದ ಸದಸ್ಯರು ಅವಿಶ್ವಾಸ ಗೊತ್ತುವಳಿ ಮಂಡಿಸಲು ನೀಡಿರುವ ನೋಟಿಸ್ ವಿರುದ್ಧ ಹರಿಹಾಯ್ದ ರಾಜ್ಯಸಭಾ ಸದಸ್ಯ ಎಚ್.ಡಿ.ದೇವೇಗೌಡ, 'ಕಾಂಗ್ರೆಸ್ ಪಕ್ಷ ಪ್ರಜಾಪ್ರಭುತ್ವವನ್ನು ಅಪಾಯಕ್ಕೆ ದೂಡುತ್ತಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.


ರಾಜ್ಯಸಭೆಯಲ್ಲಿ ಗುರುವಾರ ಮಾತನಾಡಿದ ಅವರು, ವಿಪಕ್ಷಗಳು ಸಂಸತ್ತಿನ ಘನತೆಯನ್ನು ಎತ್ತಿಹಿಡಿಯಬೇಕು ಮತ್ತು ಕಲಾಪಕ್ಕೆ ಅಡ್ಡಿಪಡಿಸುವುದನ್ನು ನಿಲ್ಲಿಸಬೇಕು ಎಂದು ಸಲಹೆ ನೀಡಿದರು. ರಾಜ್ಯಸಭೆಯ ಸಭಾಪತಿ ವಿರುದ್ಧ ಇಂತಹ ನಿರ್ಣಯವನ್ನು ಮಂಡಿಸಲು ಹೊರಟಿರುವುದು ಇತಿಹಾಸದಲ್ಲಿ ಇದೇ ಮೊದಲು. ಇದು ಒಳ್ಳೆಯ ಸಂಪ್ರದಾಯ ಅಲ್ಲ. ಇದು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲೆ ಮಾರಕ ಪರಿಣಾಮಗಳನ್ನು ಉಂಟುಮಾಡಬಹುದು ಎಂದು ಅವರು ಎಚ್ಚರಿಕೆ ನೀಡಿದರು.

# ಗಾಜಾದಲ್ಲಿ ಕದನ ವಿರಾಮಕ್ಕೆ ಕರೆ: ವಿಶ್ವಸಂಸ್ಥೆಯಲ್ಲಿ ನಿರ್ಣಯದ ಪರ

ವಿಶ್ವಸಂಸ್ಥೆ: ಯುದ್ಧಪೀಡಿತ ಗಾಜಾ ಪಟ್ಟಿಯಲ್ಲಿ ತಕ್ಷಣ, ಬೇಷರತ್ತಾದ ಮತ್ತು ಶಾಶ್ವತ ಕದನ ವಿರಾಮಕ್ಕೆ ಆಗ್ರಹಿಸಿ ವಿಶ್ವಸಂಸ್ಥೆಯ ಮಹಾಧಿವೇಶನದ ನಿರ್ಣಯವನ್ನು ಬೆಂಬಲಿಸಿ ಭಾರತ ಮತ ಹಾಕಿದೆ. ಈ ಮೂಲಕ ಭಾರತವು ಈ ಪ್ರಸ್ತಾಪದ ಪರವಾಗಿ ಮತ ಹಾಕಿದ ಇತರ 157 ರಾಷ್ಟ್ರಗಳೊಂದಿಗೆ ಸೇರಿಕೊಂಡಿದೆ.

ಗಾಜಾದಲ್ಲಿ ಕದನ ವಿರಾಮಕ್ಕೆ ಕರೆ ನೀಡುವ ಹಾಗೂ ಇಸ್ರೇಲ್ ನಿಷೇಧಿಸಿರುವ ಪ್ಯಾಲೆಸ್ತೈನ್ ನಿರಾಶ್ರಿತರಿಗಾಗಿ ವಿಶ್ವಸಂಸ್ಥೆಯ ಪರಿಹಾರ ಮತ್ತು ಕಾರ್ಯ ಸಂಸ್ಥೆಯನ್ನು ಬೆಂಬಲಿಸುವ ಈ ಎರಡು ನಿರ್ಣಯಗಳನ್ನು ಯುಎನ್‌ಜಿಎ ಬುಧವಾರ ಬಹುಮತದಿಂದ ಅಂಗೀಕರಿಸಿತು.

ಅಮೆರಿಕ, ಇಸ್ರೇಲ್, ಅರ್ಜೆಂಟೀನಾ, ಜೆಕಿಯಾ, ಹಂಗೇರಿ, ನೌರು, ಪಪುವಾ ನ್ಯೂ ಗಿನಿಯಾ, ಪರಾಗ್ವೆ ಮತ್ತು ಟೋಂಗಾ ಸೇರಿದಂತೆ ಒಂಬತ್ತು ದೇಶಗಳು ಕದನ ವಿರಾಮದ ವಿರುದ್ಧವಾಗಿ ಮತ್ತು 13 ದೇಶಗಳು ಗೈರು ಹಾಜರಾಗಿವೆ. ಕದನ ವಿರಾಮದ ಪರವಾಗಿ ಒಟ್ಟು 158 ಮತಗಳು ಬಂದಿವೆ.



ನಿಷೇಧವನ್ನು ಹಿಂಪಡೆಯಬೇಕೆಂಬ ಎರಡನೇ ನಿರ್ಣಯದ ಪರವಾಗಿ 159 ಮತ, ವಿರುದ್ಧವಾಗಿ ಒಂಬತ್ತು ಮತಗಳು ಚಲಾವಣೆಯಾದವು. 11 ದೇಶಗಳು ಮತದಾನದಿಂದ ಹೊರಗುಳಿದವು.

193 ಸದಸ್ಯರ ಸಾಮಾನ್ಯ ಸಭೆಯಲ್ಲಿ ಎರಡು ದಿನಗಳ ಚರ್ಚೆಯ ನಂತರ ಈ ನಿರ್ಣಯಗಳನ್ನು ಮಂಡಿಸಲಾಗಿದೆ. ಇಸ್ರೇಲ್ ಮತ್ತು ಹಮಾಸ್ ನಡುವಿನ 14 ತಿಂಗಳ ಸುದೀರ್ಘ ಸಂಘರ್ಷವನ್ನು ಕೊನೆಗೊಳಿಸುವುದು ಅಗತ್ಯ ಎಂದು ರಾಷ್ಟ್ರಗಳು ಹೇಳಿದವು. ಹೆಚ್ಚುತ್ತಿರುವ ಬಿಕ್ಕಟ್ಟನ್ನು ಪರಿಹರಿಸಲು ಗಾಜಾದಲ್ಲಿ ಅಡೆತಡೆಯಿಲ್ಲದೆ ಪರಿಹಾರ ಸಾಮಗ್ರಿಗಳ ಪೂರೈಕೆಗೆ ಅನುವು ಮಾಡಿಕೊಡುವಂತೆ ಪ್ರತಿನಿಧಿಗಳು ಕರೆ ನೀಡಿದರು.

ಸಾಮಾನ್ಯ ಸಭೆಯ ನಿರ್ಣಯಗಳು ಕಾನೂನು ಬದ್ಧವಾಗಿಲ್ಲದಿದ್ದರೂ ಅವು ಜಾಗತಿಕ ಅಭಿಪ್ರಾಯದ ಪ್ರತಿಬಿಂಬವಾಗಿ ಗಮನಾರ್ಹ ತೂಕ ಹೊಂದಿವೆ. ಗಾಜಾದಲ್ಲಿ ತಕ್ಷಣದ ಕದನ ವಿರಾಮಕ್ಕೆ ಕರೆ ನೀಡಿದ್ದ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯವನ್ನು ನವೆಂಬರ್ 20 ರಂದು ಯುನೈಟೆಡ್ ಸ್ಟೇಟ್ಸ್ ವೀಟೋ ಮಾಡಿತ್ತು. ಅದರ ನಂತರ ಈಗ ಈ ವಿಷಯದ ಮೇಲೆ ಮತ ಚಲಾವಣೆಯಾಗಿದೆ.

ಸುಮಾರು 1,200 ಜನರ ಸಾವಿಗೆ ಕಾರಣವಾದ ಮತ್ತು ಸುಮಾರು 250 ಜನರನ್ನು ಒತ್ತೆಯಾಳುಗಳಾಗಿ ಅಪಹರಿಸಿದ ಅಕ್ಟೋಬರ್ 7 ರ ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಲಾದ 100 ಕ್ಕೂ ಹೆಚ್ಚು ಹಮಾಸ್ ಉಗ್ರರೊಂದಿಗೆ ಕೆಲ ಉದ್ಯೋಗಿಗಳು ಸಂಪರ್ಕ ಹೊಂದಿದ್ದಾರೆ ಎಂದು ಇಸ್ರೇಲ್ ಆರೋಪಿಸಿದೆ.

## ಸುದ್ದಿ ಸಂಜೆ

## ಮಗು ಸೇರಿ 7 ಜನ ಸಜೀವ ದಹನ

**ದಿಂಡಿಗಲ್(ತಮಿಳುನಾಡು):** ಇಲ್ಲಿನ ಪ್ರಸಿದ್ಧ ಖಾಸಗಿ ಆಸ್ಪತ್ರೆಯಲ್ಲಿ ಬೆಂಕಿ ಅನಾಹುತ ಸಂಭವಿಸಿ ಒಂದು ಮಗು ಸೇರಿ ಏಳು ಮಂದಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.ದಿಂಡಿಗಲ್–ತಿರುಚಿ ರಸ್ತೆಯಲ್ಲಿರುವ ಖಾಸಗಿ ಆಸ್ಪತ್ರೆಯಲ್ಲಿ ಅಗ್ನಿ ದುರಂತ ಸಂಭವಿಸಿದೆ. ಈ ಬಗ್ಗೆ ಮಾಹಿತಿ ಪಡೆದ ಅಗ್ನಿಶಾಮಕ ಸಿಬ್ಬಂದಿ ತಕ್ಷಣವೇ ಸ್ಥಳಕ್ಕಾಗಮಿಸಿ ಬೆಂಕಿ ನಂದಿಸಲು ಹರಸಾಹಸಪಟ್ಟರು. ಆಸ್ಪತ್ರೆಯಲ್ಲಿರುವ ರೋಗಿಗಳನ್ನು ಸ್ಥಳಾಂತರಿಸಿದರು. ನಾಲ್ಕಕ್ಕೂ ಹೆಚ್ಚು ಅಗ್ನಿಶಾಮಕ ವಾಹನಗಳು ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತವಾಗಿದ್ದವು. ರೋಗಿಗಳನ್ನು ಬೇರೆ ಆಸ್ಪತ್ರೆಗೆ ಸ್ಥಳಾಂತರಿಸಲು ಹತ್ತಕ್ಕೂ ಹೆಚ್ಚು ಆಂಬ್ಯುಲೆನ್ಸ್‌ಗಳು ಕಾರ್ಯ ನಿರ್ವಹಿಸಿದವು ಎಂದು ವರದಿಯಾಗಿದೆ. ಅವಘಡದಲ್ಲಿ ಒಂದು ಮಗು, ಮೂವರು ಪುರುಷರು, ಮೂವರು ಮಹಿಳೆಯರು ಸೇರಿದಂತೆ ಏಳು ಮಂದಿ ಸಾವನ್ನಪ್ಪಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಮೂಲಗಳು ಮಾಹಿತಿ ನೀಡಿವೆ. ಘಟನಾ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂಂಗೊಡಿ ಹಾಗೂ ಪಳನಿ ಶಾಸಕ ಐ.ಬಿ.ಸೆಂಥಿಲ್ ಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಸತೀಶ ಜಾರಕಿಹೊಳಿ ವಿರುದ್ಧದ ಪ್ರಕರಣ ರದ್ದು

ಬೆಂಗಳೂರು: ಹಿಂದೂ ಧರ್ಮದ ಬಗ್ಗೆ ವಿವಾದಿತ ಹೇಳಿಕೆ ನೀಡಿದ್ದ ಆರೋಪದಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ಆದೇಶದ ವಿಸ್ತೃತ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಾಗಿದೆ. ತಮ್ಮ ಮೇಲೆ ಹಾಕಿದ್ದ ಮಾನನಷ್ಟ ಮೊಕದ್ದಮೆ, ವಿಚಾರಣಾ ನ್ಯಾಯಾಲಯದ ಆದೇಶವನ್ನು ರದ್ದು ಮಾಡಬೇಕು ಎಂದು ಸಚಿವ ಸತೀಶ ಜಾರಕಿಹೊಳಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ, ಪ್ರಕರಣವನ್ನು ರದ್ದುಪಡಿಸಿ ಆದೇಶಿಸಿದೆ. ಹಿಂದೂ ಎನ್ನುವುದು ಭಾರತೀಯ ಪದವಲ್ಲ. ಅದು ಪರ್ಷಿಯನ್ ನೆಲಕ್ಕೆ ಸೇರಿದ್ದು, ಅದೊಂದು ಅಶ್ಲೀಲ ಪದ ಎಂದು ಕಾರ್ಯಕ್ರಮವೊಂದರಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದರು. ಇದರ ವಿರುದ್ಧ ವಕೀಲ ದಿಲೀಪ್ ದೂರು ದಾಖಲಿಸಿದ್ದರು. ಅದರಂತೆ ಗಲಭೆಗೆ ಪ್ರಚೋದನೆ ನೀಡಿದ, ಮತ್ತೊಬ್ಬರಿಗೆ ಅವಮಾನ ಮಾಡಿದ ಆರೋಪದಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿತ್ತು. ಅದನ್ನು ರದ್ದುಪಡಿಸುವಂತೆ ಕೋರಿ ಸತೀಶ ಜಾರಕಿಹೊಳಿ ಹೈಕೋರ್ಟ್ ಮೆಟ್ಟಿಲೇರಿದ್ದರು.

## ರಾಜ್ಯದಲ್ಲಿ ಹೆಚ್ಚಾಗ್ತಿದೆ 'ಡಿಜಿಟಲ್ ಅರೆಸ್ಟ್' ವಂಚನೆ

ಬೆಳಗಾವಿ: "ರಾಜ್ಯದಲ್ಲಿ ದಿನೇ ದಿನೇ ಡಿಜಿಟಲ್ ವಂಚನೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಈ ಸಾಲಿಗೆ ಡಿಜಿಟಲ್ ಅರೆಸ್ಟ್ ಮತ್ತೊಂದು ಸೇರ್ಪಡೆ. ಈ ಕುರಿತು ಸಾಮಾಜಿಕ ಜಾಲತಾಣಗಳಾದ ಫೇಸ್ ಬುಕ್, ವಾಟ್ಸ್‌ಅಪ್ ಹಾಗೂ ಸೈಬರ್ ಜಾಗೃತಿಯ ಸಂದೇಶಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ" ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಸುವರ್ಣಸೌಧದಲ್ಲಿ ಇಂದು ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಸದಸ್ಯ ಪ್ರತಾಪ್ ಸಿಂಹ ನಾಯಕ್ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿ, "ರಾಜ್ಯದಲ್ಲಿ ಈ ವರ್ಷದಲ್ಲಿ ಡಿಜಿಟಲ್ ಅರೆಸ್ಟ್ ಸಂಬಂಧಿತ ಒಟ್ಟು 641 ಪ್ರಕರಣಗಳಲ್ಲಿ 109 ಕೋಟಿ ರೂ.ಗೂ ಹೆಚ್ಚು ಮೊತ್ತದ ವಂಚನೆಯಾಗಿದ್ದು, ಅದರಲ್ಲಿ 9.45 ಕೋಟಿ ರೂ.ಗಳನ್ನು ವಶಪಡಿಸಿಕೊಂಡು, 27 ಜನರನ್ನು ಬಂಧಿಸಲಾಗಿದೆ ಎಂದು ಉತ್ತರಿಸಿದರು.

"ಸಾರ್ವಜನಿಕರನ್ನು ಇಂತಹ ಅಪರಾಧ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್ ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸ್ಯಾಪ್ ಗುಂಪುಗಳನ್ನು ನಿಷ್ಕ್ರಿಯಗೊಳಿಸಲಾಗಿದೆ" ಎಂದರು.

"ಶಾಲಾ, ಕಾಲೇಜುಗಳಿಗೆ ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳು ಹಾಗು ಸಾರ್ವಜನಿಕರಿಗೆ ಡಿಜಿಟಲ್ ಅರೆಸ್ಟ್ ವಂಚನೆಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ದೇಶದಾದ್ಯಂತ ಡಿಜಿಟಲ್ ಅರೆಸ್ಟ್ ಪ್ರಕರಣಗಳು ದಿನೇ ದಿನೇ ಅಧಿಕವಾಗುತ್ತಿದ್ದು, ಕಳೆದ ವರ್ಷ ಇಡೀ ದೇಶದಲ್ಲಿ 42,000 ಪ್ರಕರಣ ದಾಖಲಾಗಿದೆ. ಸಾರ್ವಜನಿಕರು ಸೈಬರ್ ವಂಚನೆ ಆದ ಕೂಡಲೇ ಉಚಿತ ಸಹಾಯವಾಣಿ ಸಂಖ್ಯೆ 1930ಗೆ ಮಾಹಿತಿ ನೀಡಬೇಕು" ಎಂದು ತಿಳಿಸಿದರು.

## ಬಾಮೈದ, ಅತ್ತೆಯನ್ನು ಬಂಧಿಸಿದ ಬೆಂಗಳೂರು ಪೊಲೀಸ್

**ಬೆಂಗಳೂರು:** ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅತುಲ್ ಅತ್ತೆ ನಿಶಾ ಸಿಂಘಾನಿಯಾ ಮತ್ತು ಬಾಮೈದ ಅನುರಾಗ್ ಇಬ್ಬರನ್ನೂ ಮಾರತ್ತಹಳ್ಳಿ ಠಾಣೆ ಪೊಲೀಸರು ಉತ್ತರ ಪ್ರದೇಶದ ಜೌನ್ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬಂಧಿಸಿದ್ದಾರೆ.

ಪ್ರಕರಣ ದಾಖಲಾಗುತ್ತಿದ್ದಂತೆ ನಿಶಾ ಸಿಂಘಾನಿಯಾ ಮನೆಗೆ ಬೀಗ ಜಡಿದು ಪರಾರಿಯಾಗಲು ಯತ್ನಿಸಿದ್ದರು. ಆರೋಪಿಗಳಿಗಾಗಿ ಉತ್ತರ ಪ್ರದೇಶ, ದೆಹಲಿಯಲ್ಲಿ ಬೆಂಗಳೂರು ಪೊಲೀಸರಿಂದ ಹುಡುಕಾಟ ನಡೆಸಿ ಇದೀಗ ಇಬ್ಬರನ್ನೂ ಮಾರತ್ತಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಳಿಕ ಜೌನ್ಪುರ ಠಾಣೆಗೆ ಇಬ್ಬರನ್ನೂ ಪೊಲೀಸರು ಕರೆದೊಯ್ದಿದ್ದು, ಪ್ರಾಥಮಿಕ ವಿಚಾರಣೆ ಮಾಡಲಾಗಿದೆ. ಮಾರತ್ತಹಳ್ಳಿ ಠಾಣೆ ಪೊಲೀಸರು ಕೋರ್ಟ್ ಅನುಮತಿ ಪಡೆದು ಬೆಂಗಳೂರಿಗೆ ಕರೆತರಲಿದ್ದಾರೆ






# 2025ರಲ್ಲಿ ಸಮಂತಾ 2ನೇ ಮದುವೆ



ನಟಿ ಸಮಂತಾ ರುತ್ ಪ್ರಭು ಅವರ ವೈಯಕ್ತಿಕ ಜೀವನದಲ್ಲಿ ಸಾಕಷ್ಟು ಏಳು–ಬೀಳುಗಳು ಉಂಟಾಗಿವೆ. ನಾಗ ಚೈತನ್ಯ ಜೊತೆಗಿನ ಅವರ ದಾಂಪತ್ಯ ಅಂತ್ಯವಾಯ್ತು. ಗಂಭೀರವಾದ ಆರೋಗ್ಯ ಸಮಸ್ಯೆ ಕೂಡ ಎದುರಾಯಿತು. ಅದರಿಂದಾಗಿ ಅವರ ವೃತ್ತಿ ಜೀವನದ ಮೇಲೂ ಪರಿಣಾಮ ಬಿತ್ತು. ಎಲ್ಲ ಸಮಸ್ಯೆಗಳನ್ನೂ ಎದುರಿಸಿ ಸಮಂತಾ ಅವರು ಮುನ್ನುಗ್ಗುತ್ತಿದ್ದಾರೆ. 2024ರ ವರ್ಷ ಕಳೆಯುತ್ತಿದೆ. 2025ರ ಸ್ವಾಗತಕ್ಕೆ ಎಲ್ಲರೂ ಸಜ್ಜಾಗಿದ್ದಾರೆ. ಈ ಸಂದರ್ಭದಲ್ಲಿ ಸಮಂತಾ ರುತ್ ಪ್ರಭು ಅವರು ಒಂದು ಸೂಚನೆ ನೀಡಿದ್ದಾರೆ. ಅದನ್ನು ಕಂಡು ಅಭಿಮಾನಿಗಳ ಕೌತುಕ ಹೆಚ್ಚಾಗಿದೆ.

ಕೆಲವೇ ದಿನಗಳ ಹಿಂದೆ ಸಮಂತಾ ರುತ್ ಪ್ರಭು ಅವರ ಮಾಜಿ ಪತಿ ನಾಗ ಚೈತನ್ಯ ಎರಡನೇ ಮದುವೆ ನಡೆಯಿತು. ನಟಿ ಶೋಭಿತಾ ಧುಲಿಪಾಲ ಜೊತೆ ನಾಗ ಚೈತನ್ಯ ಹಸೆಮಣೆ ಏರಿದರು. ಹಾಗಾದರೆ ಸಮಂತಾ ಅವರು ಇನ್ನೊಂದು ಮದುವೆ ಆಗುವುದು ಯಾವಾಗ ಎಂಬ ಪ್ರಶ್ನೆ ಎಲ್ಲರ ಮನದಲ್ಲಿ ಇದೆ. 2025ರಲ್ಲಿ ಸಮಂತಾ ಅವರು ಈ ಬಗ್ಗೆ ಯೋಚಿಸಬಹುದು ಎಂಬುದಕ್ಕೆ ಈಗ ಸೂಚನೆ ಸಿಕ್ಕಿದೆ.


ಇನ್‌ಸ್ಟಾಗ್ರಾವ್ ಸ್ಟೋರಿಯಲ್ಲಿ ಸಮಂತಾ ರುತ್ ಪ್ರಭು ಅವರು ಒಂದು ಸ್ಟೋರಿ ಶೇರ್ ಮಾಡಿಕೊಂಡಿದ್ದಾರೆ. 2025ರಲ್ಲಿ ತಮ್ಮ ರಾಶಿಫಲ ಏನಿದೆ ಎಂಬುದನ್ನು ಈ ಪೋಸ್ಟ್ ವಿವರಿಸುತ್ತಿದೆ. ಸಮಂತಾ ಅವರದ್ದು ವೃಷಭ ರಾಶಿ. ಈ ರಾಶಿಯವರು 2025ರ ವರ್ಷದಲ್ಲಿ ಏನನ್ನೆಲ್ಲ ನಿರೀಕ್ಷೆ ಮಾಡಬಹುದು ಎಂಬ ಪಟ್ಟಿಯನ್ನು ಸಮಂತಾ ಹಂಚಿಕೊಂಡು, 'ಹಾಗೆಯೇ ಆಗಲಿ' ಎಂದು ಕ್ಯಾಪ್ಷನ್ ನೀಡಿದ್ದಾರೆ. ಮದುವೆ ಮತ್ತು ಮಕ್ಕಳ ಬಗ್ಗೆ ಇದರಲ್ಲಿ ಸೂಚನೆ ಇದೆ.

'ನಿಮಗೆ ನಿಷ್ಠಾವಂತ ಮತ್ತು ಪ್ರೀತಿಯ ಬಾಳಸಂಗಾತಿ ಸಿಗಲಿದ್ದಾರೆ. ಮಕ್ಕಳನ್ನು ಪಡೆಯಲಿದ್ದೀರಿ' ಎಂಬ ಸಾಲುಗಳು ರಾಶಿ ಫಲದಲ್ಲಿ ಇದೆ. ಇದನ್ನು ಸಮಂತಾ ಅವರು ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಶೇರ್ ಮಾಡಿಕೊಂಡಿರುವುದರಿಂದ ಬರುವ ವರ್ಷ ಅವರು ಮದುವೆ ಮತ್ತು ಮಗು ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ಅಭಿಮಾನಿಗಳು ಊಹಿಸಿದ್ದಾರೆ. ಊಹೆ ನಿಜವಾಗಲಿ ಎಂದು ಕೂಡ ಫ್ಯಾನ್ಸ್ ಆಶಿಸಿದ್ದಾರೆ.

'2025ರ ವರ್ಷ ನೀವು ತುಂಬ ಬ್ಯುಸಿ ಆಗಿರಲಿದ್ದೀರಿ. ಕೌಶಲ ವೃದ್ಧಿ ಆಗಲಿದ್ದು, ಅದರಿಂದ ನಿಮಗೆ ಹೆಚ್ಚಿನ ಆದಾಯ ಬರಲಿದೆ. ಆರ್ಥಿಕ ಸ್ಥಿರತೆ ಸಿಗಲಿದೆ. ಹಲವು ವರ್ಷಗಳಿಂದ ಇಟ್ಟುಕೊಂಡಿದ್ದ ಗುರಿಯನ್ನು ಸಾಧಿಸುತ್ತೀರಿ. ಆದಾಯದ ಮೂಲಗಳು ಹೆಚ್ಚಲಿವೆ. ಮಾನಸಿಕ ಮತ್ತು ದೈಹಿಕ ಆರೋಗ್ಯ ಸುಧಾರಿಸಲಿದೆ' ಎಂಬ ಸಾಧ್ಯತೆಗಳನ್ನು ಕೂಡ ಸಮಂತಾ ಅವರ ರಾಶಿಫಲದಲ್ಲಿ ಬರೆಯಲಾಗಿದೆ.

ಸಮಂತಾ ಅವರ ಮಾಜಿ ಪತಿ ನಾಗ ಚೈತನ್ಯ ಅವರ 2ನೇ ಮದುವೆ ಕೆಲವೇ ದಿನಗಳ ಹಿಂದೆ ನಡೆಯಿತು. ಈಗ ಸಮಂತಾ ಕೂಡ ಇನ್ನೊಂದು ಮದುವೆಯ ಬಗ್ಗೆ ಆಲೋಚನೆ ಮಾಡಿದಂತಿದೆ. 2025ರಲ್ಲಿ ತಮ್ಮ ರಾಶಿಫಲ ಏನು ಹೇಳುತ್ತಿದೆ ಎಂಬುದನ್ನು ಸಮಂತಾ ರುತ್ ಪ್ರಭು ಅವರು ಹಂಚಿಕೊಂಡಿದ್ದಾರೆ. ರಾಶಿಫಲದಲ್ಲಿ ಇರುವಂತೆಯೇ ಆಗಲಿ ಎಂದು ಅವರು ಆಶಿಸಿದ್ದಾರೆ

# ಈಗಿನ ಸಮಯಕ್ಕೆ ಆ ವಿಡಿಯೋ ಸುಳ್ಳು ಅಷ್ಟೇ!



ಸ್ಯಾಂಡಲ್‌ವುಡ್ ನಟ ಕಿಚ್ಚ ಸುದೀಪ್ ಅವರು ಬಿಗ್ ಬಾಸ್ ಕನ್ನಡ ಸೀಸನ್ 11 ಹೋಸ್ಟಿಂಗ್ ಮಾಡುತ್ತಿರೋದು ಗೊತ್ತೇ ಇದೆ. ಆದರೆ, 'ಇದೇ ನನ್ನ ಕೊನೆಯ ಸೀಸನ್, ಮತ್ತೆ ನಾನು ಬಿಗ್ ಬಾಸ್ ನಡೆಸಿಕೊಡೋಲ್ಲ' ಎಂದಿದ್ದಾರೆ ನಟ ಸುದೀಪ್. ಕಿಚ್ಚ ಸುದೀಪ್ ಅವರದು ಇದೇ ಲಾಸ್ಟ್ ಬಿಗ್ ಬಾಸ್ ಕನ್ನಡ ಹೋಸ್ಟಿಂಗ್ ಎಂಬ ಸುದ್ದಿ ಸದ್ಯ ಎಲ್ಲಾ ಕಡೆ ವೈರಲ್ ಆಗಿದೆ. ಆದರೆ, ಸುದೀಪ್ ಈ ನಿರ್ಣಯಕ್ಕೆ ಕಾರಣವೇನು ಎಂಬ ಬಗ್ಗೆ ಹಲವು ಊಹಾಪೋಹಗಳು ಹರಿದಾಡುತ್ತಿವೆ. ಸ್ವತಃ ಸುದೀಪ್ ಈ ಬಗ್ಗೆ ಉತ್ತರ ಕೊಟ್ಟಿದ್ದಾರೆ.

ಸುದೀಪ್ ತಾವ್ಯಾಕೆ ಇನ್ಮುಂದೆ ಬಿಗ್ ಬಾಸ್ ನಡೆಸಿಕೊಡಲ್ಲ ಎಂಬ ಬಗ್ಗೆ ತಮ್ಮದೇ ಆದ ರೀತಿಯಲ್ಲಿ ಸ್ಪಷ್ಟನೆ ಕೊಟ್ಟಿದ್ದಾರೆ. ಮುಖ್ಯವಾಗಿ ಇಷ್ಟು ಸೀಸನ್ ಮಾಡಿರುವ ತೃಪ್ತಿಯೇ ಸಾಕು ಎಂಬ ಭಾವ ಮೂಡಿಸಿದೆ ಎಂಬಂತೆ ಮಾತನ್ನಾಡಿದ್ದಾರೆ. ಆದರೆ ಅದು ಸತ್ಯವೇ ಎಂಬ ಶಂಕೆ ಹಲವರ ಮನದಲ್ಲಿ ಮೂಡಿದೆ. ಅದಕ್ಕೆ ಸರಿಯಾದ ಉತ್ತರವನ್ನು ಸುದೀಪ್ ಬಿಟ್ಟರೆ ಬೇರೆ ಯಾರೂ ಕೊಡಲು ಸಾಧ್ಯವಿಲ್ಲ. ಆದರೆ, ನಟ ಸುದೀಪ್ ಹಳೆಯ ವಿಡಿಯೋವೊಂದು ಸದ್ಯ ವೈರಲ್ ಆಗುತ್ತಿದ್ದು, ಅದು ಈಗ ಸುದೀಪ್ ಮಾಡಿರುವ ನಿರ್ಧಾರಕ್ಕೆ ಕಾರಣವಲ್ಲ ಎನ್ನಬಹುದು.


ಹಾಗಿದ್ದರೆ ಸುದೀಪ್ ವೈರಲ್ ವಿಡಿಯೋದಲ್ಲಿ ಏನಿದೆ? 'ಬಿಗ್ ಬಾಸ್‌ನಲ್ಲಿ ನನ್ನ ನೋಡೋಕೆ ಆಸೆ ಪಡ್ತಾ ಇದಾರಾ ಜನ? ಇಷ್ಟ ಪಡ್ತಾ ಇದಾರಾ? ನಾನು ಮಾಡ್ತೀನಿ. ಇಷ್ಟ ಇಲ್ವ ಜನಕ್ಕೆ, ಹಿಂಟ್ ಬರುತ್ತೆ ನಂಗೆ.. ಬೇರೆ ಯಾರೂ ಹೇಳ್ಬೇಕಾಗಿಲ್ಲ, ನಮಗೇ ಗೊತ್ತಾಗುತ್ತೆ.. ಈವಾಗ ಪ್ರತಿ ಶನಿವಾರ–ಭಾನುವಾರ ಜನ ಟಿವಿ ಮುಂದೆ ಕೂತ್ಕೊಂಡು ನೋಡ್ತಾರೆ ಅಂದ್ರೆ, ಅದು ನಾನು ಸಂಪಾದನೆ ಮಾಡ್ಕೊಂಡು ಬಂದಿರೋದು, ಬಲವಂತ ಮಾಡಿಲ್ಲ.. ಹೆದ್ರಿಸಿಲ್ಲ ಜನಗಳಿಗೆ ನೋಡ್ಲೇಬೇಕು ಅಂತ..

ಪ್ರೀತಿಯಿಂದ ನಾನು ಕಷ್ಟಪಟ್ಟು ಸಂಪಾದನೆ ಮಾಡಿರೋ ಆಸ್ತಿ ಅದು.. ನನಗೆ ಆ ತಾಖತ್ ಇದೆ ಅಂದ್ರೆ ಶನಿವಾರ–ಭಾನುವಾರ ಜನಗಳನ್ನ ಹಿಡಿದಿಡೋಕೆ ಅಂದ್ರೆ, ಅದು ನನಗೆ ನಾನು ಶ್ರಮದಿಂದ ಸಂಪಾದಿಸಿ ಮಾಡ್ಕೊಂಡಿರೋ ನಂಬಿಕೆ ಹಾಗೂ ಆಸ್ತಿ..' ಎಂದಿದ್ದಾರೆ ಕನ್ನಡದ ಸ್ಟಾರ್ ನಟ ಕಿಚ್ಚ ಸುದೀಪ್. ಅಂದರೆ, 'ಜನರು ಅವರನ್ನು ನೋಡಲು ಇಷ್ಟಪಡುತ್ತಿಲ್ಲ, ಅದಕ್ಕೇ ಸುದೀಪ್ ಮುಂದಿನ ಸೀಸನ್‌ನಲ್ಲಿ ಇರೋಲ್ಲ..' ಎಂಬಂತಿದೆ ಈ ವೈರಲ್ ವಿಡಿಯೋ.

ಆದರೆ, ಖಂಡಿತ ಈಗ ನಡೆದಿರುವ ವಿಷಯ ಅದಲ್ಲ ಎನ್ನಬಹುದು. ಕಾರಣ, ಬಿಗ್ ಬಾಸ್ ಕನ್ನಡ ಈ ಸೀಸನ್ 11ನಲ್ಲೂ ಶನಿವಾರ ಹಾಗೂ ಭಾನುವಾರ ಸುದೀಪ್ ಅವರನ್ನೇ ನೋಡಲು ಜನರು ಇಷ್ಟಪಡುತ್ತಿದ್ದಾರೆ. ವಾರಾಂತ್ಯದಲ್ಲೇ ಬಿಗ್ ಬಾಸ್ ಟಿಆರ್‌ಪಿ ಹೆಚ್ಚು ಬರುತ್ತಿದೆ ಎಂಬುದು ಈ ಸೀಸನ್‌ನಲ್ಲೂ ಮುಂದುವರಿದಿದೆ. ಹೀಗಾಗಿ ಜನರು ತಮ್ಮನ್ನು ನೋಡುತ್ತಿಲ್ಲ ಎಂಬ ಹಿಂಟ್ ಸುದೀಪ್ ಅವರಿಗೆ ಸಿಕ್ಕಿರುವುದು ಈ ನಿರ್ಧಾರಕ್ಕೆ ಕಾರಣವಲ್ಲ, ಬೇರೇನೋ ಇದೆ. ಕಾರಣ ಅದೇನೇ ಇರಲಿ, ಅವರು ಹೋಸ್ಟ್ ಮಾಡೋದು ಬಿಡೋದು ಅವರಿಷ್ಟ. ಆದರೆ, ಅವರ ಈ ಸೀಸನ್ ನಿರ್ಧಾರಕ್ಕೆ ಹಳೆಯ ವೈರಲ್ ವೀಡಿಯೋದಲ್ಲಿ ಹೇಳಿರುವ ಅಂಶ ಕಾರಣವಲ್ಲ ಎಂಬದೀಗ ಸೂರ್ಯ–ಚಂದ್ರರಷ್ಟೇ ಸತ್ಯ. ಆಗಿನ ಸಮಯದಲ್ಲಿ ಆಗಿನ ಸಂದರ್ಭಕ್ಕೆ ಅವರು ಹೇಳಿರುವುದು ಇಂದು ಸುಳ್ಳು ಎಂಬಂತಾಗಿದೆ. ಅದಕ್ಕೇ 'ಕಾಲಾಯ ತಸ್ಮೈ ನಮಃ' ಎನ್ನುವುದು. ಯಾವಮಾತು ಯಾವ ಕಾಕ್ಕೆ ಸತ್ಯವಾಗುವೊದೋ ಸುಳ್ಳಾಗುವುದೋ ಬಲ್ಲವರಾರು?

# ಮತ್ತೊಬ್ಬ ವಿದೇಶಿ ಕೋಚ್‌ಗೆ ತಂಡದಿಂದ ಗೇಟ್‌ಪಾಸ್

ಪ್ರಸ್ತುತ ದಕ್ಷಿಣ ಆಫ್ರಿಕಾ ಪ್ರವಾಸದಲ್ಲಿರುವ ಪಾಕಿಸ್ತಾನ ಕ್ರಿಕೆಟ್ ತಂಡ ಹರಿಣಗಳ ನಾಡಲ್ಲಿ ಮೂರು ಮಾದರಿಯ ಸರಣಿಗಳನ್ನು ಆಡಲಿದೆ. ಮೊದಲಿಗೆ ಟಿ20 ಸರಣಿ ನಡೆಯುತ್ತಿದ್ದು, ಆ ಬಳಿಕ ಏಕದಿನ ಸರಣಿ, ಕೊನೆಗೆ ಟೆಸ್ಟ್ ಸರಣಿ ನಡೆಯಲ್ಲಿದೆ. ಆದರೆ ಡಿಸೆಂಬರ್ 26ರಿಂದ ಸೆಂಚುರಿಯನ್‌ನಲ್ಲಿ ಆರಂಭವಾಗಲಿರುವ ಟೆಸ್ಟ್ ಸರಣಿಗೆ



ಕೇವಲ 2 ವಾರಗಳ ಮೊದಲು, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಆಘಾತಕಾರಿ ನಿರ್ಧಾರವನ್ನು ತೆಗೆದುಕೊಂಡಿದೆ. ಆ ಪ್ರಕಾರ ತಂಡದ ಸಹಾಯಕ ಕೋಚ್ ಟಿಮ್ ನೀಲ್ಸನ್ ಅವರನ್ನು ಅವರ ಹುದ್ದೆಯಿಂದ ತೆಗೆದುಹಾಕಿದೆ. ಕಳೆದ ಆಗಸ್ಟ್‌ನಲ್ಲಿ ಟೆಸ್ಟ್ ತಂಡದ ಸಹಾಯಕ ಕೋಚ್ ಆಗಿ ನೇಮಕಗೊಂಡಿದ್ದ ನೀಲ್ಸನ್, ಪಾಕಿಸ್ತಾನದ ಟೆಸ್ಟ್ ತರಬೇತುದಾರ ಜೇಸನ್ ಗಿಲ್ಲೆಸ್ಪಿಗೆ ಸಹಾಯಕರಾಗಿ ಕೆಲಸ ಮಾಡುತ್ತಿದ್ದರು. ಆದರೀಗ ಅವರನ್ನು ಈ ಹುದ್ದೆಯಿಂದ ವಜಾಗೊಳಿಸಲಾಗಿದೆ. ಟಿಮ್ ನೀಲ್ಸನ್ ಅವರ ಒಪ್ಪಂದವನ್ನು ನವೀಕರಿಸುವ ಇರಾದೆಯಲ್ಲಿ ಪಿಸಿಬಿ ಇಲ್ಲ. ಹೀಗಾಗಿ ಅವರನ್ನು ಈ ಹುದ್ದೆಯಿಂಥ ತೆಗೆದುಹಾಕಿದೆ. ವಾಸ್ತವವಾಗಿ ನೀಲ್ಸನ್ ಅವರ ಒಪ್ಪಂದವು ಆಸ್ಟ್ರೇಲಿಯಾ ಪ್ರವಾಸದೊಂದಿಗೆ ಕೊನೆಗೊಂಡಿತ್ತು. ಆದರೆ ಮುಂಬರುವ ದಕ್ಷಿಣ ಆಫ್ರಿಕಾದೊಂದಿಗಿನ ಟೆಸ್ಟ್ ಸರಣಿ ಮತ್ತು ನಂತರ ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಸರಣಿಯ ದೃಷ್ಟಿಯಿಂದ, ಅವರನ್ನು ಈ ಹುದ್ದೆಯಲ್ಲೇ ಉಳಿಸಿಕೊಳ್ಳಲಾಗುವುದು ಎಂದು ನಿರೀಕ್ಷಿಸಲಾಗಿತ್ತು ಆದರೆ ಅದು ಸಂಭವಿಸಲಿಲ್ಲ. ಇದಲ್ಲದೆ ತಂಡದೊಂದಿಗೆ ತಾನು ಉತ್ತಮ ಪ್ರಗತಿಯನ್ನು ಸಾಧಿಸಿದ್ದೇನೆ ಮತ್ತು ಒಪ್ಪಂದದ ವಿಸ್ತರಣೆಯನ್ನು ನಿರೀಕ್ಷಿಸುತ್ತಿದ್ದೇನೆ ಎಂದು ನೀಲ್ಸನ್ ಹೇಳಿಕೊಂಡಿದ್ದಾರೆ ಎಂದು ವರದಿಯೊಂದರಲ್ಲಿ ಉಲ್ಲೇಖಿಸಲಾಗಿತ್ತು. ಆದರೆ ನೀಲ್ಸನ್ ಅವರ ಸೇವೆ ಇನ್ನು ಮುಂದೆ ತಂಡಕ್ಕೆ ಅಗತ್ಯವಿಲ್ಲ ಎಂದು ಮಂಡಳಿಯು ಸ್ಪಷ್ಟವಾಗಿ ಹೇಳಿದೆ. ನೀಲ್ಸನ್ ಅವರನ್ನು ತೆಗೆದುಹಾಕಿದ ನಂತರ, ಮುಖ್ಯ ತರಬೇತುದಾರ ಗಿಲ್ಲೆಸ್ಪಿ ಭವಿಷ್ಯದ ಬಗ್ಗೆಯೂ ಈಗ ಪ್ರಶ್ನೆ ಮೂಡಿದೆ. ಇದಲ್ಲದೆ ನೀಲ್ಸನ್ ಅವರನ್ನು ಈ ಹುದ್ದೆಯಿಂದ ತೆಗೆದುಹಾಕುವ ನಿರ್ಧಾರಕ್ಕೆ ಸಂಬಂಧಿಸಿದಂತೆ ಪಿಸಿಬಿ ಗಿಲ್ಲೆಸ್ಪಿಯಿಂದ ಯಾವುದೇ ಸಲಹೆಯನ್ನು ಪಡೆದಿಲ್ಲ ಮತ್ತು ಅದರ ಬಗ್ಗೆ ಅವರಿಗೆ ತಿಳಿಸಲಾಗಿಲ್ಲ ಎಂದು ವರದಿಯಾಗಿದೆ. ಇದರಿಂದಾಗಿ ಗಿಲ್ಲೆಸ್ಪಿ ಅಸಮಾದಾನಗೊಂಡಿದ್ದು ಪಾಕಿಸ್ತಾನಿ ತಂಡದೊಂದಿಗೆ ಮುಂದುವರಿಯುವ ಬಗ್ಗೆ ಅವರು ಚಿಂತಿಸುತ್ತಿರುವುದಾಗಿಯೂ ಉಲ್ಲೇಖವಾಗಿದೆ.



# ವೈವಾಹಿಕ ಜೀವನಕ್ಕೆ ಕಾಲಿಟ್ಟ ಕೀರ್ತಿ ಸುರೇಶ್

ದಕ್ಷಿಣ ಭಾರತದ ಸ್ಟಾರ್ ನಟಿ ಕೀರ್ತಿ ಸುರೇಶ್ ಅದ್ದೂರಿಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದೆ. ಬಹುಭಾಷಾ ನಟಿ ಕೀರ್ತಿ ಸುರೇಶ್ ಅವರು ಬಾಲ್ಯದ ಗೆಳೆಯ ಆಂಟನಿ ತಟ್ಟಿಲ್ ಅವರನ್ನು ಮದುವೆಯಾಗಿದ್ದಾರೆ. ಗೋವಾದಲ್ಲಿ ನಡೆದ ಡೆಸ್ಟಿನೇಷನ್ ವೆಡ್ಡಿಂಗ್‌ನಲ್ಲಿ ಆಂಟನಿ ತಟ್ಟಿಲ್ ಹಾಗೂ ಸ್ಟಾರ್ ನಟಿ ಕೀರ್ತಿ ಸುರೇಶ್ ಅವರು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ.



ಈ ಮುದ್ದಾದ ಜೋಡಿಯ ಮದುವೆ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ವೈರಲ್ ಆಗುತ್ತಿವೆ. ಅದ್ದೂರಿ ಮದುವೆ ಫೋಟೋಗಳನ್ನು ನಟಿ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಶೇರ್ ಮಾಡಿಕೊಂಡಿದ್ದಾರೆ. ಇದೇ ಫೋಟೋಸ್ ನೋಡಿದ ಅಭಿಮಾನಿಗಳು ಈ ಸ್ಟಾರ್ ಜೋಡಿಗೆ ಶುಭ ಹಾರೈಸುತ್ತಿದ್ದಾರೆ. ಕೆಲ ದಿನಗಳ ಹಿಂದೆಯಷ್ಟೇ ನಟಿ ಕೀರ್ತಿ ಸುರೇಶ್ ಸೋಷಿಯಲ್ ಮೀಡಿಯಾದಲ್ಲಿ ಬಾಲ್ಯದ ಗೆಳೆಯನ ಜೊತೆಗೆ ನಿಂತುಕೊಂಡಿರೋ ಫೋಟೋಗಳನ್ನು ಶೇರ್ ಮಾಡಿಕೊಂಡಿದ್ದರು. ಆ ಫೋಟೋ ಕೂಡ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಕೀರ್ತಿ ಸುರೇಶ್ ತಮ್ಮ ಬಾಲ್ಯದ ಗೆಳೆಯನನ್ನೇ ಮದುವೆ ಆಗಿದ್ದಾರೆ. ಅವರ ಹೆಸರು ಆಂಟೊನಿ ತಟ್ಟಿಲ್. ಇಬ್ಬರು ಕ್ಲಾಸ್‌ಮೇಟ್ಸ್ ಮತ್ತು 15 ವರ್ಷಗಳ ಗೆಳೆತನ. ಒಟ್ಟಿಗೆ ಹೈಸ್ಕೂಲ್‌ನಲ್ಲಿ ಓದಿದ್ರು. ಇದು ಹಲವು ವರ್ಷಗಳಿಂದ ಈ ಇಬ್ಬರು ಪ್ರೀತಿ ಮಾಡುತ್ತಿದ್ದರು.

ಕುಟುಂಬಸ್ಥರ ಒಪ್ಪಿಗೆ ಮೇರೆಗೆ ನಟಿ ಕೀರ್ತಿ ಸುರೇಶ್ ಹಾಗೂ ಆಂಟೊನಿ ತಟ್ಟಿಲ್ ಹಿಂದೂ ಸಂಪ್ರದಾಯದಂತೆ ಮದುವೆಯಾಗಿದ್ದಾರೆ. ಗೋವಾದಲ್ಲಿ ನಡೆದ ಡೆಸ್ಟಿನೇಷನ್ ವೆಡ್ಡಿಂಗ್‌ನಲ್ಲಿ ಆಂಟನಿ ತಟ್ಟಿಲ್ ಕೀರ್ತಿ ಸುರೇಶ್‌ಗೆ ಕುಟುಂಬಸ್ಥರ ಸಮ್ಮುಖದಲ್ಲಿ ಹಾಗೂ ಆತ್ಮೀಯರ ಮುಂದೆ ತಾಳಿ ಕಟ್ಟಿದ್ದಾರೆ.

ಕೀರ್ತಿ ಸುರೇಶ್ ಅವರು ಕೆಂಪು ಬಣ್ಣದ ಸೀರೆಯಲ್ಲಿ ಮಿರ ಮಿರ ಮಿಂಚಿದ್ದಾರೆ. ಆ ಸೀರೆಯ ಜೊತೆಗೆ ಕೆಂಪು ಮುತ್ತಿನ ಗ್ರ್ಯಾಂಡ್ ನೆಕ್ಲೆಸ್ ಹಾಗೂ ಮ್ಯಾಚಿಂಗ್ ಇಯರಿಂಗ್ಸ್ ಧರಿಸಿದ್ದರು. ಗಂಡನ ತಾಳಿ ಕಟ್ಟುತ್ತಿದ್ದಾಗ ನಟಿ ಕೀರ್ತಿ ಸುರೇಶ್ ಕಣ್ಣೀರು ಹಾಕಿದ್ದಾರೆ. ಆಂಟೊನಿ ತಟ್ಟಿಲ್ ಮೂಲತಃ ಕೇರಳದ ಕೊಚ್ಚಿಯವರು. ದುಬೈನಲ್ಲಿ ಇವರದ್ದು ಹಲವು ಬ್ಯುಸಿನೆಸ್ ಇದೆ. ಹುಟ್ಟಿದ್ದು ಕೇರಳದಲ್ಲಾದ್ರೂ ಬೆಳೆದಿದ್ದು ಮಾತ್ರ ಚೆನ್ನೈನಲ್ಲೇ. ಈಗ ಆಂಟೊನಿ ತಟ್ಟಿಲ್ ನೆಲೆಸಿರುವುದು ದುಬೈನಲ್ಲಿ ಎನ್ನುವ ಮಾಹಿತಿ ಇದೆ.

ಇತ್ತೀಚೆಗಷ್ಟೇ ಕೀರ್ತಿ ಸುರೇಶ್ ನಟನೆಯ 'ರಘು ತಾತ' ಸಿನಿಮಾ ರಿಲೀಸ್ ಆಗಿ ಒಳ್ಳೆಯ ಹೆಸರು ಮಾಡಿತ್ತು. ಇದರ ನಿರ್ಮಾಣದ ಜವಾಬ್ದಾರಿ ಹೊಂಬಾಳೆ ಸಂಸ್ಥೆ ವಹಿಸಿಕೊಂಡಿತ್ತು. ಈಗ ಬಾಲಿವುಡ್‌ನಲ್ಲೂ ವರುಣ್ ಧವನ್ ಜೊತೆಗೆ ಕೀರ್ತಿ ಸುರೇಶ್ ಸಿನಿಮಾ ಒಂದರಲ್ಲಿ ನಟಿಸುತ್ತಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-23 Email-mussanje2010@gmail.com, Phone: **9448074878**